# ಜನತಾ ವಾಣಿ

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

ಸಂಪಾದಕರು :
ಎಂ.ಎಸ್. ವಿಕಾಸ್

ದಾವಣಗೆರೆ
ಗುರುವಾರ, ಸೆಪ್ಟೆಂಬರ್ 26, 2024

ಸಂಪುಟ : 51 ಸಂಚಿಕೆ : 134 ☎ 08192-254736 91642 99999 RNI No: 27369 ಪುಟ : 6 ರೂ : 5.00 www.janathavani.com janathavani@mac.com


## ಅಡಿಕೆ ದರ ಕುಸಿದರೆ, ನೀರು ಸಿಗದಿದ್ದರೆ ಕಷ್ಟ

### ಪರ್ಯಾಯ ಬೆಳೆಗೆ ರೈತರ ಮನವೊಲಿಸುವಂತೆ ಸಂಸದೆ ಡಾ.ಪ್ರಭಾ ಸೂಚನೆ

ದಾವಣಗೆರೆ, ಸೆ.25- ಲೋಕಸಭಾ ಕ್ಷೇತ್ರದಾದ್ಯಂತ ಹೆಚ್ಚಿನ ಪ್ರಮಾಣದಲ್ಲಿ ಅಡಿಕೆ ಬೆಳೆಯಲಾಗುತ್ತಿದೆ. ಮುಂದಿನ ದಿನಗಳಲ್ಲಿ ಅಡಿಕೆ ದರವೇನಾದರೂ ಕುಸಿದರೆ ಅಥವಾ ತೋಟಕ್ಕೆ ನೀರು ಸಿಗದಿದ್ದರೆ ಸಂಕಷ್ಟಕ್ಕೆ ತುತ್ತಾಗುವ ಅಪಾಯವಿದೆ. ಆದ್ದರಿಂದ ಅಡಿಕೆ ಬೆಳೆಯ ಬದಲು ಪರ್ಯಾಯ ಬೆಳೆಗಳನ್ನು ಬೆಳೆಯುವಂತೆ ರೈತರ ಮನವೊಲಿಸಿ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.



#### ಸಂಸದರ ಆದರ್ಶ ಗ್ರಾಮ ಆಯ್ಕೆಗೆ ಸೂಚನೆ

ಜಿಲ್ಲೆಯಲ್ಲಿನ ಎಲ್ಲಾ ತಾಲ್ಲೂಕುಗಳಲ್ಲಿ ಒಂದು ಗ್ರಾಮವನ್ನು ಸಂಸದರ ಆದರ್ಶ ಗ್ರಾಮವನ್ನಾಗಿ ಆಯ್ಕೆ ಮಾಡಬೇಕು. ಈ ಗ್ರಾಮ ಹೆಚ್ಚು ಜನಸಂಖ್ಯೆಯಿಂದ ಕೂಡಿದ್ದು, ಇಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರಬೇಕು. ಅಂತಹ ಗ್ರಾಮ ಆಯ್ಕೆ ಮಾಡಬೇಕು, ಈ ಸಂಸದರ ಆದರ್ಶಗ್ರಾಮ ಯೋಜನೆಗೆ ಯಾವುದೇ ಪ್ರತ್ಯೇಕ ಅನುದಾನ ಇರುವುದಿಲ್ಲ. ಇರುವ ಯೋಜನೆಗಳನ್ನೇ ಬಳಕೆ ಮಾಡಿಕೊಂಡು ಅಲ್ಲಿ ಎಲ್ಲಾ ವಲಯಗಳಲ್ಲಿ ಅಭಿವೃದ್ಧಿ ಮಾಡುವುದೇ ಇದರ ವಿಶೇಷವಾಗಿದೆ ಎಂದು ಸಂಸದರು ಹೇಳಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಡಿಕೆ ಬೆಳೆ ಮೇಲೆ ಅವಲಂಬನೆಯಾಗದಂತೆ ರೈತರಲ್ಲಿ ಜಾಗೃತಿ ಮೂಡಿಸುವಂತೆ ಹೇಳಿದರು.

ನೀರು ಕಡಿಮೆ ಬಳಕೆ ಮಾಡಿಕೊಂಡು ಹನಿ ಅಥವಾ ತುಂತುರು ನೀರಾವರಿ ಪದ್ಧತಿಯಲ್ಲಿ ಭತ್ತ ಬೆಳೆಯುವ ಬಗ್ಗೆ ಜಾಗೃತಿ ಮೂಡಿಸಬೇಕೆಂದು ಸಂಸದರು ಸೂಚಿಸಿದಾಗ, ಕಳೆದ ವರ್ಷವೇ ಜಿಲ್ಲೆಯಲ್ಲಿ 7 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಡ್ರೈ ಅಂಡ್ ವೆಟ್ ಸಿಸ್ಟಂನಲ್ಲಿ ಭತ್ತ ಬೆಳೆಯಲಾಗಿದೆ ಎಂದು ಪ್ರತಿಕ್ರಿಯಿಸಿದ ಜಂಟಿ ಕೃಷಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್ ಮಾಹಿತಿ ನೀಡಿದರು.

ಚಿಗಟೇರಿ ಜಿಲ್ಲಾಸ್ಪತ್ರೆಯ ವೈದ್ಯರು ಮತ್ತು ಸಾರ್ವಜನಿಕರ ಸುರಕ್ಷತೆಗೆ ಬೇಕಾದ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಡಾ.ಪ್ರಭಾ ಹೇಳಿದಾಗ, ಜಿಲ್ಲಾಸ್ಪತ್ರೆಯ ಉಪ ಠಾಣೆಯಲ್ಲಿ ಇನ್ನೊಬ್ಬ ಸಿಬ್ಬಂದಿ ಹೆಚ್ಚಿಸಲಾಗಿದೆ. ಆಸ್ಪತ್ರೆ ಬಳಿ ರಾತ್ರಿ ವೇಳೆ ಸಶಸ್ತ್ರ ಮೀಸಲು ಪಡೆ ವಾಹನ ನಿಲ್ಲಿಸಿ ಸುರಕ್ಷತೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಉತ್ತರಿಸಿದರು.

ಜಿಲ್ಲಾ ಸರ್ಜನ್ ಡಾ.ನಾಗೇಂದ್ರಪ್ಪ, ಭದ್ರತಾ ಸಿಬ್ಬಂದಿಗಳನ್ನು ಹೆಚ್ಚುವರಿಯಾಗಿ ನಿಯೋಜಿಸುವುದರ ಜತೆಗೆ ಗೃಹರಕ್ಷಕ ಸಿಬ್ಬಂದಿಗಳನ್ನು ಒದಗಿಸುವಂತೆ ಎಸ್ಪಿಯಲ್ಲಿ ಮನವಿ ಮಾಡಲಾಗಿದೆ. ಸದ್ಯ 62 ಸಿಸಿ ಕ್ಯಾಮರಾಗಳಿದ್ದು, ಇನ್ನಷ್ಟು ಸಿಸಿ ಕ್ಯಾಮರಾ ಅಳವಡಿಸಲಾಗುತ್ತಿದೆ ಎಂದು ಸಭೆಯ ಗಮನಕ್ಕೆ ತಂದರು.

ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಮಾತನಾಡಿ, ಶೌಚಾಲಯಕ್ಕೆ (4ನೇ ಪುಟಕ್ಕೆ)

## ಸಿಎಂ ವಿರುದ್ಧ ಲೋಕಾಯುಕ್ತ ತನಿಖೆ

### ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಿಂದ ಮಹತ್ವದ ಆದೇಶ



ಬೆಂಗಳೂರು, ಸೆ.25- ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಬಿಡಿ ನಿವೇಶನ ಹಂಚಿಕೆ ಅಕ್ರಮ ಆರೋಪ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಎಫ್ಐಆರ್ ದಾಖಲಿಸಿ ಲೋಕಾಯುಕ್ತ ಪೊಲೀಸರು ತನಿಖೆ ನಡೆಸುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಇಂದಿಲ್ಲಿ ಮಹತ್ವದ ಆದೇಶ ನೀಡಿದೆ.

ಮುಡಾ ಹಗರಣವನ್ನು ಮೈಸೂರು ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ತನಿಖೆ ನಡೆಸಿ, ಡಿಸೆಂಬರ್ 24ರೊಳಗೆ ನ್ಯಾಯಾಲಯಕ್ಕೆ ವರದಿ ಸಲ್ಲಿಸುವಂತೆ ಆದೇಶಿಸಿದೆ.

ಹಗರಣಕ್ಕೆ ಸಂಬಂಧಿಸಿದಂತೆ ದೂರುದಾರ ಸ್ನೇಹಮಯಿ ಕೃಷ್ಣ ದಾಖಲಿಸಿದ್ದ ಖಾಸಗಿ ಕ್ರಿಮಿನಲ್ ದೂರಿನ ವಿಚಾರಣೆ ನಡೆಸಿ ಕಾಯ್ದಿರಿಸಿದ್ದ ತೀರ್ಪನ್ನು, ಶಾಸಕರ-ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ನ್ಯಾಯಾಲಯದ ನ್ಯಾಯಾಧೀಶ ಸಂತೋಷ ಗಜಾನನ ಭಟ್ ಇಂದು ತೀರ್ಪು ಪ್ರಕಟಿಸಿದರು.

ರಾಜ್ಯಪಾಲರು ನೀಡಿದ ಪ್ರಾಸಿಕ್ಯೂಷನ್ ಅನುಮತಿಯನ್ನು ಹೈಕೋರ್ಟ್‌ನ ಏಕಸದಸ್ಯ ಪೀಠ ನಿನ್ನೆಯಷ್ಟೇ ಎತ್ತಿಹಿಡಿದ ಬೆನ್ನಲ್ಲೇ ಇಂದು ಜನಪ್ರತಿನಿಧಿಗಳ ನ್ಯಾಯಾಲಯ ತನ್ನ ತೀರ್ಪು ಪ್ರಕಟಿಸಿತು.

ದೂರುದಾರ ಸ್ನೇಹಮಯಿ ಕೃಷ್ಣ ತಮ್ಮ ವಕೀಲರಾದ ಲಕ್ಷ್ಮಿ ಐಯ್ಯಂಗಾರ್ ಮುಖಾಂತರ ಹೈಕೋರ್ಟ್ ತೀರ್ಪನ್ನು ನ್ಯಾಯಾಧೀಶರಿಗೆ ತಲುಪಿಸಿದರು. ತದನಂತರ ನ್ಯಾಯಾಧೀಶರು ಕೋರ್ಟ್ ಹಾಲ್‌ನಲ್ಲೇ ತೀರ್ಪಿನ ಉಲ್ಲೇಖ ನೀಡಿ, ಕ್ರಿಮಿನಲ್ ಪ್ರಕರಣದ ಆರೋಪಿ ವಿರುದ್ಧ 153 (3)ರಡಿ ಎಫ್ಐಆರ್ ದಾಖಲಿಸಿ ತನಖೆ ನಡೆಸುವಂತೆ ಪೊಲೀಸರಿಗೆ ಆದೇಶಿಸಿದರು.

ಮುಖ್ಯಮಂತ್ರಿ ಅವರ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿರುವುದನ್ನು ಪ್ರಸ್ತಾಪಿಸಿ, ಪ್ರಕರಣದ ಬಗ್ಗೆ ತನಿಖೆ ನಡೆಸುವಂತೆಯೂ ಹೇಳಿದೆ.

ತನಿಖೆಗೆ ಮುಖ್ಯಮಂತ್ರಿ ಹಿಂಜರಿಕೆ ಏಕೆ ಎಂಬುದಾಗಿ ಹೈಕೋರ್ಟ್ ಉಲ್ಲೇಖಿಸಿರುವುದನ್ನು ನ್ಯಾಯಾಲಯದ ಗಮನಕ್ಕೆ ತಂದರು. ಸಿದ್ದರಾಮಯ್ಯ ಅವರು ಶಾಸಕರಾಗಿ, ಉಪಮುಖ್ಯಮಂತಿಯಾಗಿ, ಪ್ರತಿಪಕ್ಷದ ನಾಯಕರಾಗಿ ಮತ್ತೆ ಉಪಮುಖ್ಯಮಂತ್ರಿಯಾಗಿ, ಎರಡು ಬಾರಿ ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲೇ ಮುಡಾ ವತಿಯಿಂದ 14 ನಿವೇಶನ ಪಡೆಯುವ ಪ್ರಕ್ರಿಯೆ ನಡೆದಿದೆ.

ಮುಡಾ ಅಭಿವೃದ್ಧಿ ಪಡಿಸಿದ ಬಡಾವಣೆಯಲ್ಲಿ ಮೃತನ ಹೆಸರಿನಲ್ಲಿ 3.16 ಎಕರೆ ಭೂಮಿಯನ್ನು ಖರೀದಿ ಮಾಡಲಾಗಿದೆ. ನಂತರ ಈ ಭೂಮಿಯನ್ನು ಕೃಷಿ ಭೂಮಿಯಾಗಿ ಪರಿವರ್ತಿಸಿ, ಡಿ-ನೋಟಿಫಿಕೇಷನ್ ಮಾಡಿಸಿಕೊಂಡಿದ್ದಾರೆ. ಮುಖ್ಯಮಂತ್ರಿ ಅವರ ಪತ್ನಿ, ಅವರ ಸಹೋದರ ಖರೀದಿ ಮಾಡಿದ (4ನೇ ಪುಟಕ್ಕೆ)

### ತನಿಖೆ ಎದುರಿಸಲು ಸಿದ್ಧ, ಕಾನೂನು ಹೋರಾಟಕ್ಕೆ ರೆಡಿ

ಬೆಂಗಳೂರು, ಸೆ. 25- ಮುಡಾ ತನಿಖೆ ಎದುರಿಸಲು ಸಿದ್ಧ, ಕಾನೂನು ರೀತಿ ಹೋರಾಟ ಮಾಡಲು ತಯಾರಾಗಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 17ಎ ಪ್ರಕಾರ ತನಿಖೆ ಮಾಡಲು ನ್ಯಾಯಾಲಯ ಅನುಮತಿ ನೀಡಿದೆ. ಆದೇಶದ ಪ್ರತಿ ದೊರೆತಿಲ್ಲ. ತೀರ್ಪನ್ನು ಪೂರ್ಣವಾಗಿ ಓದಿದ ನಂತರ ನಾಳೆ ಬೆಳಗ್ಗೆ ಪ್ರತಿಕ್ರಿಯೆ ನೀಡುತ್ತೇನೆ ಎಂದರು.

ಮೈಸೂರು ಲೋಕಾಯುಕ್ತಕ್ಕೆ ಪ್ರಕರಣವನ್ನು ಶಿಫಾರಸ್ಸು ಮಾಡಲಾಗಿದೆ, ಮೈಸೂರಿನಲ್ಲಿಯೇ ದೂರು ನೀಡಲಾಗಿದ್ದು, ದೂರುದಾರರು ಮೈಸೂರಿನವರು, ಮುಡಾ ಕೂಡ ಅಲ್ಲಿಯೇ ಇರುವುದರಿಂದ ಮೈಸೂರಿಗೆ ಶಿಫಾರಸ್ಸು ಮಾಡಿರಬಹುದೆಂದು ಭಾವಿಸಿದ್ದೇನೆ.

ನ್ಯಾಯಾಲಯದ ಇಂದಿನ ಪೂರ್ಣ ಆದೇಶ ಲಭ್ಯವಾದ ಮೇಲೆ ವಕೀಲರೊಂದಿಗೆ ಚರ್ಚಿಸಿ ನಿರ್ಧರಿಸಲಾಗುವುದು, ಮುಡಾ ಪ್ರಕರಣದ ತನಿಖೆಗೆ ಸರ್ಕಾರ ರಚಿಸಿದ್ದ ನ್ಯಾಯಮೂರ್ತಿ ಪಿ. ಎನ್.ದೇಸಾಯಿ ಆಯೋಗದ ತನಿಖೆ ಮುಂದುವರೆಯಲಿದೆ ಎಂದರು.

## ಮಹಿಳೆ ಕೊಂದು 59 ತುಂಡು ಮಾಡಿದ್ದ ಹಂತಕ ಆತ್ಮಹತ್ಯೆ

ಬೆಂಗಳೂರು, ಸೆ.25- ಮಹಿಳೆಯನ್ನು ಹತ್ಯೆಗೈದು, ಆಕೆಯ ದೇಹವನ್ನು 59 ತುಂಡುಗಳಾಗಿ ಕತ್ತರಿಸಿದ ಹಂತಕ ಮುಕ್ತಿ ರಂಜನ್ ರಾಯ್ ಆತ್ಮಹತ್ಯೆಗೆ ಶರಣಾಗಿದ್ದಾನೆ.

ಕೊಲೆ ಬಳಿಕ ತಲೆಮರೆಸಿಕೊಂಡಿದ್ದ ಮುಕ್ತಿ ರಂಜನ್ ರಾಯ್ ಪಶ್ಚಿಮ ಬಂಗಾಳಕ್ಕೆ ಹೋಗಿದ್ದಾನೆ ಎಂದು ವರದಿಯಾಗಿತ್ತು. ಆದರೆ ಆರೋಪಿ ಒಡಿಶಾದಲ್ಲಿ ಅಡಗಿದ್ದಾನೆ ಎಂಬ ಮಾಹಿತಿ ಇದೆ. ಪೊಲೀಸರು ಆರೋಪಿಯ ಜಾಡು ಹಿಡಿದು ಒಡಿಶಾಗೆ ತೆರಳಿದ್ದಾರೆ ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ್ ತಿಳಿಸಿದ್ದರು.


ಇದೀಗ ಆರೋಪಿ ಒಡಿಶಾದಲ್ಲಿ ಮರವೊಂದಕ್ಕೆ ನೇಣುಬಿಗಿದು (4ನೇ ಪುಟಕ್ಕೆ)

## ಸಾಹಿತಿ ಸರೋಜ ನಾಗರಾಜ್ ಕವನ ದಾವಿವಿ ಪಠ್ಯಕ್ಕೆ ಆಯ್ಕೆ



ದಾವಣಗೆರೆ, ಸೆ. 25- ದಾವಣಗೆರೆ ವಿಶ್ವವಿದ್ಯಾನಿಲಯದ ಪ್ರಥಮ ವರ್ಷದ ಬಿಸಿಎ ಪ್ರಥಮ ಚಾತುರ್ಮಾಸದ ಕನ್ನಡ ಅರಿವು ಪಠ್ಯ ಪುಸ್ತಕಕ್ಕೆ ಜಿಲ್ಲೆಯ ಹಿರಿಯ ಸಾಹಿತಿ ಶ್ರೀಮತಿ ಕೆ.ಜಿ. ಸರೋಜ ನಾಗರಾಜ್ ಅವರ ಕವನ ಆಯ್ಕೆಯಾಗಿದೆ.

ಚನ್ನಗಿರಿ ತಾಲ್ಲೂಕು ಪಾಂಡೋಮಟ್ಟಿ ಗ್ರಾಮದವರಾದ ಸರೋಜ ನಾಗರಾಜ್ ಅವರ ರಚನೆಯ 'ಮಂದಿರ ಮಸೀದಿ ನನ್ನದೇ' ಕವನವನ್ನು ಪಠ್ಯಪುಸ್ತಕದಲ್ಲಿ ಮುದ್ರಿಸಲು ದಾವಣಗೆರೆ ವಿಶ್ವವಿದ್ಯಾಲಯದ ಸ್ನಾತಕ ಕನ್ನಡ ಅಧ್ಯಯನ ಮಂಡಳಿ (4ನೇ ಪುಟಕ್ಕೆ)



## ಭಾರತೀಯ ಸಂಸ್ಕೃತಿ ಪ್ರಸರಣ ಪ್ರತಿಯೊಬ್ಬರ ಕರ್ತವ್ಯ: ಸ್ವಾಮಿ ವೀರೇಶಾನಂದ ಸರಸ್ವತಿ

ದಾವಣಗೆರೆ, ಸೆ. 25- ಭಾರತೀಯ ಸಂಸ್ಕೃತಿ ಪ್ರಸರಣ ಪ್ರತಿಯೊಬ್ಬರ ಆದ್ಯ ಕರ್ತವ್ಯ. ವಿವೇಕಾನಂದರ ಚಿಂತನೆಗಳನ್ನು ಜನ ಸಾಮಾನ್ಯರಿಗೆ ತಲುಪಿಸುವ ಕೆಲಸವನ್ನು ಮಾಡಬೇಕಾಗಿದೆ ಎಂದು ತುಮಕೂರು ರಾಮಕೃಷ್ಣ-ವಿವೇಕಾನಂದ ಆಶ್ರಮದ ಅಧ್ಯಕ್ಷರಾದ ಶ್ರೀ ಸ್ವಾಮಿ ವೀರೇಶಾನಂದ ಸರಸ್ವತಿ ಹೇಳಿದರು.

ನಗರದ ವರ್ತುಲ ರಸ್ತೆಯಲ್ಲಿರುವ ಶ್ರೀ ಶಂಕರ ಸಮುದಾಯ ಭವನದಲ್ಲಿ ಇಂದು ಹಮ್ಮಿಕೊಂಡಿದ್ದ 'ವಿವೇಕಧಾರಾ' ಕೃತಿ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಉತ್ತಮ ಪುಸ್ತಕ ಪ್ರಸರಣಕ್ಕೆ ದಾರಿ ಮಾಡಿಕೊಡಬಲ್ಲದು. ಈ ನಿಟ್ಟಿನಲ್ಲಿ ಸ್ವಾಮಿ ವಿವೇಕಾನಂದರ ದಿವ್ಯ ವ್ಯಕ್ತಿತ್ವದ ವಿವಿಧ ಆಯಾಮಗಳನ್ನಾಧರಿಸಿ ಸುಮಾರು 37 ಲೇಖನಗಳನ್ನು ಪ್ರಮುಖ ದಿನಪತ್ರಿಕೆಗಳಲ್ಲಿ ಬರೆಯುವ ಸೌಭಾಗ್ಯ ನನ್ನದಾಯಿತು. ಈ ಎಲ್ಲಾ ಲೇಖನಗಳ ಸಂಗ್ರಹವೇ 'ವಿವೇಕಧಾರಾ' ಕೃತಿ ಎಂದು ಹೇಳಿದರು.

ಕೃತಿ ಮುದ್ರಣಕ್ಕೂ ಮುನ್ನವೇ 11,463 ಪುಸ್ತಕಗಳನ್ನು ಓದುಗರು ಕಾಯ್ದಿರಿಸಿದ್ದು, ಅಚ್ಚರಿಯ ಸಂಗತಿ. ರಾಜ್ಯದ ವಿವಿಧ ಕಡೆಗಳಿಂದಲೂ ಇನ್ನೂ ಬೇಡಿಕೆ ಹೆಚ್ಚಾಗುತ್ತಿದ್ದು, 25 ಸಾವಿರ ಪ್ರತಿಗಳು ಮುದ್ರಣಗೊಳ್ಳಲಿದ್ದು, ವಿವೇಕಾನಂದರ ಭಕ್ತರ (4ನೇ ಪುಟಕ್ಕೆ)

## ಕರ್ನಾಟಕದಲ್ಲಿ ಆಂತರಿಕ ಕಲಹ: ಪ್ರಧಾನಿ



ಸೋನಿಪತ್, ಸೆ. 25- ಹರಿಯಾಣದ ಸೋನಿಪತ್ ಜಿಲ್ಲೆಯ ಗೊಹಾನಾದಲ್ಲಿ ನಡೆದ ಚುನಾವಣಾ ರ‍್ಯಾಲಿಯನ್ನುದ್ದೇಶಿಸಿ ಮಾತನಾಡಿರುವ ಪ್ರಧಾನಿ ನರೇಂದ್ರ ಮೋದಿ, ಕರ್ನಾಟಕ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಕರ್ನಾಟಕದಲ್ಲಿ ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿ ನಡುವೆ ಅಧಿಕಾರಕ್ಕಾಗಿ ಆಂತರಿಕ ಕಲಹ ನಡೆಯುತ್ತಿದೆ. ಎಲ್ಲೆಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತದೆಯೋ ಅಲ್ಲೆಲ್ಲ ಅಧಿಕಾರಕ್ಕಾಗಿ ಆಂತರಿಕ ಕಲಹ ನಡೆಯುತ್ತಲೇ ಇದೆ. ಇದಕ್ಕೆ ಕಾಂಗ್ರೆಸ್ ಆಡಳಿತದಲ್ಲಿರುವ ಕರ್ನಾಟಕವೇ ನಿದರ್ಶನ. ತೆಲಂಗಾಣ ಮತ್ತು ಹಿಮಾಚಲ ಪ್ರದೇಶದಲ್ಲೂ ಇದೇ ಕತೆ ಎಂದು ಹೇಳಿದ್ದಾರೆ.

ರಾಜಸ್ಥಾನ ಮತ್ತು ಛತ್ತೀಸಗಢದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದಾಗಲೂ ಆಂತರಿಕ ಕಲಹ ಜೋರಾಗಿತ್ತು ಎಂದ ಅವರು, ಹರಿಯಾಣದ ಜನರು ಎಚ್ಚರದಿಂದ ಇರಬೇಕು. ಇಲ್ಲೇನಾದರೂ ತಪ್ಪಾಗಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಅಂತಃ ಕಲಹಗಳ ಮೂಲಕ ಅಸ್ಥಿರತೆ ಮೂಡುತ್ತದೆ. ಅದು ಈಗಾಗಲೇ ಹರಿಯಾಣ ಕಾಂಗ್ರೆಸ್‌ನಲ್ಲಿ ಗೋಚರಿಸುತ್ತಿದೆ ಎಂದು ಮೋದಿ ಆರೋಪಿಸಿದರು. (2ನೇ ಪುಟಕ್ಕೆ)

## ಕೋರ್ಟ್ ಆದೇಶಕ್ಕೆ ತಲೆ ಬಾಗಲಿ

ಬೆಂಗಳೂರು, ಸೆ.25- ಹೈಕೋರ್ಟ್ ತೀರ್ಪು ಹಾಗೂ ವಿಶೇಷ ನ್ಯಾಯಾಲಯದ ಆದೇಶಕ್ಕೆ ತಲೆಬಾಗಿ ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಿ ತನಿಖೆಗೆ ಸಹಕಾರ ನೀಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಇಂದಿಲ್ಲಿ ಒತ್ತಾಯಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಮುಖ್ಯಮಂತ್ರಿಗಳಾಗಿದ್ದ ಬಿ.ಎಸ್.ಯಡಿಯೂರಪ್ಪ ಅವರ ಮೇಲೆ ಆರೋಪಗಳು ಬಂದ ಸಂದರ್ಭದಲ್ಲಿ ಸಿದ್ದರಾಮಯ್ಯ ವಿರೋಧ ಪಕ್ಷದ ನಾಯಕರಾಗಿದ್ದರು, ಆಗ, ಅಧಿಕಾರದಲ್ಲಿ ಇದ್ದರೆ ತನಿಖೆ ಮೇಲೆ ಪ್ರಭಾವ ಬೀರುವ ಸಾಧ್ಯತೆಗಳಿರುವ ಕಾರಣ, ನ್ಯಾಯಯುತ ಮತ್ತು ನಿಷ್ಪಕ್ಷಪಾತ ತನಿಖೆ ಅಸಾಧ್ಯ, ಆದ್ದರಿಂದ ಯಡಿಯೂರಪ್ಪ ಅಧಿಕಾರದಲ್ಲಿ ಇರಬಾರದು, ಹಿ ಶುಡ್ ರಿಸೈನ್ ಇಮ್ಮೀಡಿಯೆಟ್ಲಿ ಎಂದಿದ್ದರು.

### ಸಿದ್ಧರಾಮಯ್ಯ ವಿಪಕ್ಷ ನಾಯಕರಾಗಿದ್ದಾಗ ಹೇಳಿದ್ದನ್ನು ನೆನಪಿಸಿಕೊಳ್ಳಲಿ - ಬಿ.ವೈ. ವಿಜಯೇಂದ್ರ

ಆದರೆ, ಈಗ ತನಿಖೆ ಎದುರಿಸಲು ಸಿದ್ಧ, ರಾಜೀನಾಮೆ ಕೊಡುವುದಿಲ್ಲ ಎಂದು ಮುಖ್ಯಮಂತ್ರಿ ಹೇಳುತ್ತಿದ್ದಾರೆ. ಭ್ರಷ್ಟ ಕಾಂಗ್ರೆಸ್ ಮತ್ತು ಭ್ರಷ್ಟ ಮುಖ್ಯಮಂತ್ರಿ ವಿರುದ್ಧ ಬಿಜೆಪಿ ನಿರಂತರ ಹೋರಾಟ ಮಾಡುತ್ತಾ ಬಂದಿದೆ, 'ಮೈಸೂರು ಚಲೋ' ಪಾದಯಾತ್ರೆ ನಡೆಸಿದ್ದೆವು.

ಖಾಸಗಿ ದೂರಿನ ಆಧಾರದ ಮೇಲೆ (4ನೇ ಪುಟಕ್ಕೆ)

## ವಿಆರ್‌ಎಲ್ ಹೆಸರಲ್ಲಿ ವ್ಯಕ್ತಿಗೆ ವಂಚನೆ

ದಾವಣಗೆರೆ, ಸೆ.25- ಬೆಂಗಳೂರಿನಿಂದ ದಾವಣಗೆರೆಗೆ ಮನೆಯ ವಸ್ತುಗಳನ್ನು ಸಾಗಾಣಿಕೆ ಮಾಡುವುದಾಗಿ ವಿಆರ್‌ಎಲ್ ಸಂಸ್ಥೆಯ ಹೆಸರನ್ನು ದುರ್ಬಳಕೆ ಮಾಡಿ ವಂಚಿಸಿರುವ ಘಟನೆ ನಡೆದಿದೆ.

ಬೆಂಗಳೂರಿನ ಖಾಸಗಿ ಕಂಪನಿಯೊಂದರ ಉದ್ಯೋಗಿಯೊಬ್ಬರು ದಾವಣಗೆರೆಗೆ ಸ್ಥಳಾಂತರಗೊಳ್ಳಲು ಬಯಸಿ, ತಮ್ಮ ಮನೆಯ ಸಾಮಾನುಗಳನ್ನು ಕಳಿಸಿಕೊಡಲು ಗೂಗಲ್‌ನಲ್ಲಿ ಹುಡುಕಾಟ ನಡೆಸಿದ್ದರು.

ಗೂಗಲ್‌ನಲ್ಲಿ ಅಗರವಾಲ್ ಮೂವರ್ಸ್ ಅಂಡ್ ಪ್ಯಾಕರ್ಸ್ ಸಂಸ್ಥೆಗೆ ಸಂಪರ್ಕಿಸಿದಾಗ ಅವರು 40 ಸಾವಿರ ರೂ.ಗಳ ಕೊಟೇಷನ್ ಕಳುಹಿಸಿದ್ದರು. ಇದು ಇಷ್ಟವಾಗದ ಕಾರಣ ಉದ್ಯೋಗಿ ಸುಮ್ಮನಾಗಿದ್ದರು.

ಇದಾಗಿ ಎರಡು ಗಂಟೆ ನಂತರ 'ವಿಆರ್‌ಎಲ್ ಲಾಜಿಸ್ಟಿಕ್ಸ್ ಪ್ಯಾಕರ್ಸ್ ಅಂಡ್ ಮೂವರ್ಸ್' ಹೆಸರಿನಲ್ಲಿ ವಾಟ್ಸಾಪ್ ಸಂದೇಶ ಬಂದಿತ್ತು, ನಾವು 12 ಸಾವಿರ ರೂ.ಗಳಿಗೆ ಪ್ಯಾಕಿಂಗ್ ಲೋಡಿಂಗ್, ಅನ್‌ಲೋಡಿಂಗ್ ಸೇವೆ ನೀಡುವುದಾಗಿ ಹೇಳಲಾಗಿತ್ತು. ಇದನ್ನು ನಂಬಿದ ಉದ್ಯೋಗಿ, ಸೆ. 18 ರಂದು 1 ಸಾವಿರ (2ನೇ ಪುಟಕ್ಕೆ)

## ಟ್ರಂಪ್ ಹತ್ಯೆ ಯತ್ನ: ಗುಪ್ತಚರ ಸಂಸ್ಥೆ ವೈಫಲ್ಯ

ವಾಷಿಂಗ್ಟನ್, ಸೆ.25- ಗುಪ್ತಚರ ಸಂಸ್ಥೆ ಸರಿಯಾಗಿ ಕಾರ್ಯನಿರ್ವಹಿಸಿದ್ದರೆ, ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹತ್ಯೆ ಯತ್ನ ತಡೆಯಬಹುದಿತ್ತು ಎಂದು ಸೆನೆಟ್ ಸಮಿತಿಯ ತನಿಖಾ ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಜುಲೈನಲ್ಲಿ ನಡೆದ ರ‍್ಯಾಲಿ ವೇಳೆ ತಮ್ಮ ಬೆಂಬಲಿಗರನ್ನು ಉದ್ದೇಶಿಸಿ ಮಾತನಾಡುತ್ತಿದ್ದ ಡೊನಾಲ್ಡ್ ಟ್ರಂಪ್ ಅವರನ್ನು ಹತ್ಯೆ ಮಾಡಲು ಬಂದೂಕುಧಾರಿಯೊಬ್ಬ ಅವರ ಮೇಲೆ ಗುಂಡು ಹಾರಿಸಿದ್ದ.

ಗುಂಡಿನ ದಾಳಿಗೂ ಮೊದಲು, ಟ್ರಂಪ್ ಅವರ ಭದ್ರತೆಗೆ ನಿಯೋಜಿಸಿದ್ದ ಭದ್ರತಾ ಸಿಬ್ಬಂದಿ ಮತ್ತು ಗುಪ್ತಚರ ಸೇವೆ ನಡುವಿನ ಸಂವಹನ, ಯೋಜನೆ... ಹೀಗೆ ಪ್ರತಿ ಹಂತದಲ್ಲೂ ಹಲವು ವೈಫಲ್ಯಗಳು ಆಗಿರುವುದನ್ನು ಸಮಿತಿ ಪತ್ತೆ ಮಾಡಿದೆ.

ಸೆನೆಟ್ ಸಮಿತಿಯ ತನಿಖಾ ವರದಿಯಲ್ಲಿ ಹೇಳಿರುವ ಅಂಶಗಳನ್ನೇ ತನಿಖಾ ಸಂಸ್ಥೆಯ ಆಂತರಿಕ (2ನೇ ಪುಟಕ್ಕೆ)

## ಕಲ್ಯಾಣ ಕರ್ನಾಟಕಕ್ಕೆ ಶಿಕ್ಷಕರ ನೇಮಕ

ಯಾದಗಿರಿ, ಸೆ. 25 - ಕಲ್ಯಾಣ ಕರ್ನಾಟಕ ಭಾಗಕ್ಕೆ ಶೀಘ್ರದಲ್ಲೇ 5 ಸಾವಿರ ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ಹೇಳಿದರು.

ತಾಲ್ಲೂಕಿನ ಅರಕೇರಾ ಕೆ. ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ 2024-25ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಪೂರ್ವ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ವಾರದಲ್ಲಿ 6 ದಿನಗಳು ಪೂರಕ ಪೌಷ್ಟಿಕ ಆಹಾರವನ್ನು ವಿತರಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು.

ಮುಂದಿನ 10 ವರ್ಷಗಳಲ್ಲಿ ಯಾದಗಿರಿ ಜಿಲ್ಲೆಯೂ ಎಸ್ಸೆಸ್ಸೆಲ್ಸಿ ಸೇರಿದಂತೆ ಶೈಕ್ಷಣಿಕ ಮಟ್ಟದಲ್ಲಿ ಮುಂದೆ ಬರುತ್ತದೆ. ಅಕ್ಷರ ಆವಿಷ್ಕಾರ ಯೋಜನೆಯಡಿ ಈ ಭಾಗದ ಶಾಸಕರು ಶೇ 25 ರಷ್ಟು ಅನುದಾನ ತೆಗೆದಿರಿಸಿದ್ದಾರೆ. ಇದರಿಂದ ಬಹಳಷ್ಟು ಅನುಕೂಲವಾಗುತ್ತಿದೆ ಎಂದರು.

ಕಲ್ಯಾಣ ಭಾಗದಲ್ಲಿ ಶೇ 80 ರಷ್ಟು ಶಿಕ್ಷಕರ ಹುದ್ದೆ ಭರ್ತಿ ಮಾಡಲಾಗುವುದು. 3ನೇ ಶನಿವಾರ ಬ್ಯಾಗ್ ಇಲ್ಲದ ದಿನವನ್ನು ಮಾಡಿದ್ದು, ಡಿಡಿಪಿಐಯವರು ಅನುಷ್ಠಾನ ಮಾಡುತ್ತಾರಾ, ಇಲ್ಲವಾ ಗಮನಿಸಬೇಕು ಎಂದು ಸೂಚಿಸಿದರು.

ನ 40 ದಿನದಲ್ಲಿ 40 ಸಾವಿರ ಮಕ್ಕಳು ಎಲ್ ಕೆ ಜಿಗೆ



ದಾಖಲಾಗಿದ್ದಾರೆ. ಇದು ಸಾಧನೆಯಾಗಿದೆ ಎಂದರು.

ರಾಜ್ಯದ 25 ಸಾವಿರ ಮಕ್ಕಳಿಗೆ ನೀಟ್ ಕೋಚಿಂಗ್ ನೀಡಲಾಗುತ್ತದೆ.

ತಂದೆ, ತಾಯಿ ಮಕ್ಕಳನ್ನು ಶಾಲೆಗೆ ಕಳುಹಿಸಿ. ಶಾಲೆಯಲ್ಲಿ ಮಕ್ಕಳು ಇಲ್ಲದಿದ್ದರೆ ಮುಚ್ಚಬೇಕಾಗುತ್ತದೆ. ಈ ಹಿಂದೆ ನಮ್ಮ ತಂದೆ ಎಸ್. ಬಂಗಾರಪ್ಪ ಅವರು ಶಾಲೆಗೆ ಮಕ್ಕಳು ಬರಲು 1 ರೂ. ನೀಡುತ್ತಿದ್ದರು. ಅದರಂತೆ ನಮ್ಮ ಸರ್ಕಾರ ಮಕ್ಕಳಿಗೆ 6 ದಿನವೂ ಮೊಟ್ಟೆ ವಿತರಿಸಲಾಗುತ್ತದೆ. ಜೊತೆಗೆ ಬಿಸಿಯೂಟ, ಸಮವಸ್ತ್ರ, ಶೂ, ಪಠ್ಯಪುಸ್ತಕ ನೀಡಲಾಗುತ್ತದೆ ಎಂದು ಹೇಳಿದರು.

## ಯುಪಿಎಸ್‌ಸಿ-ಕೆಪಿಎಸ್ಸಿ: ಸುಧಾರಣೆ

ಬೆಂಗಳೂರು, ಸೆ. 25- ಕೇಂದ್ರ ಲೋಕಸೇವಾ ಆಯೋಗ (ಯುಪಿಎಸ್‌ಸಿ) ಮಾದರಿ ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ನಿಗದಿತ ವೇಳಾಪಟ್ಟಿ ಅನ್ವಯ ಕಾರ್ಯನಿರ್ವಹಣೆಗೆ ಅನುಕೂಲವಾಗುವಂತಹ ಸುಧಾರಣಾ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಸೂಚಿಸಿದ್ದಾರೆ.

ನೇಮಕಾತಿ ಪ್ರಕ್ರಿಯೆ ವಿಳಂಬವಾಗಲು ಎದುರಾಗಿರುವ ಕಾನೂನು ತೊಡಕುಗಳು ಹಾಗೂ 371ಜೆ ಅಡಿ ಮೀಸಲಾತಿಗೆ ಸಂಬಂಧಿಸಿದ ವಿಷಯ ಕುರಿತ ಸಭೆಯಲ್ಲಿ ಅವರು ಸರ್ಕಾರದ ವಿವಿಧ ಹುದ್ದೆಗಳ ನೇಮಕಾತಿ ಪ್ರಗತಿ ಪರಿಶೀಲನೆ ನಡೆಸಿದರು.

ಪ್ರತಿ ವರ್ಷ ನೇಮಕಾತಿಗೆ ಏಕಕಾಲಕ್ಕೆ ಅಧಿಸೂಚನೆ ಹೊರಡಿಸಲು ಅನುವಾಗುವಂತೆ ಎಲ್ಲ ಇಲಾಖೆಗಳು ನಿಗದಿತ ಗಡುವಿನೊಳಗೆ ಪ್ರಸ್ತಾವನೆಗಳನ್ನು ಸಲ್ಲಿಸಬೇಕು ಹಾಗೂ ಪರೀಕ್ಷಾ ವೇಳಾಪಟ್ಟಿಯಲ್ಲಿ ಫಲಿತಾಂಶ ಪ್ರಕಟಣೆ ದಿನಾಂಕ ನಿಗದಿಪಡಿಸಬೇಕು.

ವಿವಿಧ ನೇಮಕಾತಿ ಪ್ರಾಧಿಕಾರಗಳ ಪರೀಕ್ಷೆಗಳು

### ಅನುಕೂಲ ಕ್ರಮಕ್ಕೆ ಸಿಎಂ ಸಿದ್ದರಾಮಯ್ಯ ಸೂಚನೆ

ಒಂದೇ ದಿನಾಂಕದಡಿ ಬರದಂತೆ ನೋಡಿಕೊಳ್ಳಬೇಕು, ವಿವಿಧ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳ ನ್ಯೂನತೆಯೂ ನೇಮಕಾತಿ ವಿಳಂಬಕ್ಕೆ ಕಾರಣವಾಗಿದೆ.

ಕಲ್ಯಾಣ ಕರ್ನಾಟಕ ಅಭ್ಯರ್ಥಿಗಳ ನೇಮಕಾತಿಗೆ ಸಂಬಂಧಿಸಿದ ಗೊಂದಲಗಳನ್ನು ಸವಿಸ್ತಾರವಾಗಿ ಪರಿಶೀಲಿಸಿ, ಸಚಿವ ಸಂಪುಟ ಉಪಸಮಿತಿ ಆದೇಶಗಳ ಪಾಲನೆಯ ಕುರಿತು ಸಚಿವ ಸಂಪುಟದ ಮುಂದೆ ವಿಷಯ ಮಂಡಿಸಬೇಕು.

ಸಚಿವ ಸಂಪುಟ ಉಪಸಮಿತಿ ಸೂಚನೆಗಳನ್ನು ಇಲಾಖಾ ಮುಖ್ಯಸ್ಥರು ಪಾಲಿಸಬೇಕು, ತಪ್ಪಿದಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು. ಮುಂದಿನ ವಾರ ಮತ್ತೊಮ್ಮೆ ಸಭೆ ನಡೆಸಿ ಸಂಪೂರ್ಣ ಮಾಹಿತಿ ಪಡೆದು ಚರ್ಚಿಸುವುದಾಗಿ ಅವರು ತಿಳಿಸಿದರು.


## ಭಾವಪೂರ್ಣ ಶ್ರದ್ಧಾಂಜಲಿ



ದೂಡಾ ಮಾಜಿ ಅಧ್ಯಕ್ಷರು ಹಾಗೂ ನಮ್ಮ ತುಂಬಿಗೆರೆ ಗ್ರಾಮದ ಶ್ರೀ ಆಂಜನೇಯ ಸ್ವಾಮಿ ಜೀರ್ಣೋದ್ಧಾರ ಸಮಿತಿಯ ಧರ್ಮದರ್ಶಿಗಳೂ ಆದ

**ಶ್ರೀ ಟಿ. ದಾಸಕರಿಯಪ್ಪ**

ಅವರು ದಿ.:22.09.2024ರಂದು ನಿಧನರಾಗಿದ್ದು, ಶ್ರೀಯುತರಿಗೆ ಭಾವಪೂರ್ಣ ಶ್ರದ್ಧಾಂಜಲಿ. ಮೃತರ ಆತ್ಮಕ್ಕೆ ಶಾಂತಿ ಸಿಗಲಿ ಹಾಗೂ ಅವರ ಅಗಲಿಕೆಯ ದುಃಖ ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೆ ಕರುಣಿಸಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇವೆ.

- ಶ್ರೀ ತುಂಬಿಗೆರೆ ಆಂಜನೇಯ ಸ್ವಾಮಿ ಜೀರ್ಣೋದ್ಧಾರ ಸಮಿತಿ ಧರ್ಮದರ್ಶಿಗಳು, ಕಾರ್ಯದರ್ಶಿಗಳು, ಖಜಾಂಚಿ ಹಾಗೂ ಸದಸ್ಯರುಗಳು, ತುಂಬಿಗೆರೆ.
- ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ನಿ., ತುಂಬಿಗೆರೆ. ಆಡಳಿತ ಮಂಡಳಿ ಅಧ್ಯಕ್ಷರು, ಉಪಾಧ್ಯಕ್ಷರು, ನಿರ್ದೇಶಕರುಗಳು ಹಾಗೂ ಸಿಬ್ಬಂದಿ ವರ್ಗ
- ತುಂಬಿಗೆರೆ ಹಾಲು ಉತ್ಪಾದಕರ ಸಹಕಾರ ಸಂಘ ನಿ., ತುಂಬಿಗೆರೆ ಅಧ್ಯಕ್ಷರು, ಉಪಾಧ್ಯಕ್ಷರು, ನಿರ್ದೇಶಕರುಗಳು ಹಾಗೂ ಸಿಬ್ಬಂದಿ ವರ್ಗ ಮತ್ತು ತುಂಬಿಗೆರೆ ಗ್ರಾಮಸ್ಥರು




# ಶೀಘ್ರ ಹೊನ್ನಾಳಿ- ತುಮ್ಮಿನಕಟ್ಟೆ ರಸ್ತೆ ಅಗಲೀಕರಣ ಸಾಧ್ಯತೆ

**ಹೊನ್ನಾಳಿ ತಾಲ್ಲೂಕು ವ್ಯವಸಾಯ ಉತ್ಪನ್ನ ಮಾರಾಟ ಸಹಕಾರ ಸಂಘದ ಕಾರ್ಯಕ್ರಮದಲ್ಲಿ ಶಾಸಕ ಡಿ.ಜಿ.ಶಾಂತನಗೌಡ**

ಹೊನ್ನಾಳಿ, ಸೆ. 25 - ಬರುವ 20 ದಿನಗಳ ಒಳಗಾಗಿ ಹೊನ್ನಾಳಿ-ತುಮ್ಮಿನಕಟ್ಟೆ ರಸ್ತೆ ಅಗಲೀಕರಣ ಮಾಡುವ ಸಾಧ್ಯತೆ ಇರುವ ಕಾರಣ ತಾಲ್ಲೂಕು ವ್ಯವಸಾಯ ಉತ್ಪನ್ನ ಮಾರಾಟ ಸಹಕಾರ ಸಂಘದ ವ್ಯಾಪ್ತಿಯಲ್ಲಿ ಬರುವ ತುಮ್ಮಿನಕಟ್ಟೆ ರಸ್ತೆ ಹಳೇ ಕಟ್ಟಡಗಳನ್ನು ಪೂರ್ಣ ತೆರವು ಮಾಡಿ ನೂತನ ಕಾಂಪ್ಲೆಕ್ಸ್ ನಿರ್ಮಾಣ ಮಾಡಲು ಸಂಘದ ಸರ್ವ ಸದಸ್ಯರು ಒಪ್ಪಿಗೆ ನೀಡಬೇಕಿದೆ ಎಂದು ಸಂಘದ ನಿರ್ದೇಶಕರೂ ಆಗಿರುವ ಶಾಸಕ ಡಿ.ಜಿ. ಶಾಂತನಗೌಡ ಹೇಳಿದರು.

ಹೊನ್ನಾಳಿ ತಾಲ್ಲೂಕು ವ್ಯವಸಾಯ ಉತ್ಪನ್ನ ಮಾರಾಟ ಸಹಕಾರ ಸಂಘದ ಆವರಣದಲ್ಲಿ ಹಮ್ಮಿಕೊಂಡಿದ್ದ ಸರ್ವ ಸದಸ್ಯರ ವಾರ್ಷಿಕ ಮಹಾ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪಟ್ಟಣದ ಹೃದಯ ಭಾಗವಾದ ತುಮ್ಮಿನಕಟ್ಟೆ ರಸ್ತೆ ಶೀಘ್ರ ಅಗಲೀಕರಣಗೊಳುತ್ತದೆ. ನಂತರ ಲಭ್ಯವಾಗುವ 3000 ಅಡಿ ಜಾಗದಲ್ಲಿ ನುರಿತ ಇಂಜಿನಿಯರ್‌ಗೆ ಬಹುಮಹಡಿ ಕಟ್ಟಡ ನಿರ್ಮಾಣಕ್ಕೆ ನೀಲಿ ನಕ್ಷೆ ತಯಾರಿಸಲು ಸೂಚಿಸಿ ವ್ಯಾಪಾರ ಮಳಿಗೆಗಳನ್ನು ನಿರ್ಮಾಣ ಮಾಡಲಾಗುವುದು ಎಂದರು.

ರಸ್ತೆ ಅಗಲೀಕರಣದ ಪರಿಹಾರದ ಮೊತ್ತ 32 ಲಕ್ಷ, ನಬಾರ್ಡ್‌ನಿಂದ 50 ಲಕ್ಷ, ಅಕ್ಕಿಗಿರಣಿ ಮಹಾ ಮಂಡಳಿಯಿಂದ 20 ಲಕ್ಷ ರೂ. ಮಂಜೂರು ಮಾಡಿಸುವ ಮೂಲಕ, ಇತರೆ ಬಾಬ್ತುಗಳಿಂದ ಹಣವನ್ನು ಸಂಗ್ರಹಿಸಿ ಉತ್ತಮವಾದ ಕಾಂಪ್ಲೆಕ್ಸ್ ನಿರ್ಮಾಣ ಮಾಡಲಾಗುವುದು ಎಂದರು.

ಈಗಿರುವ ತುಮ್ಮಿನಕಟ್ಟೆ ರಸ್ತೆ ಇಕ್ಕೆಲಗಳಲ್ಲಿ ದ್ವಿಚಕ್ರ ವಾಹನಗಳ ನಿಲುಗಡೆಯಿಂದ ತಾಲ್ಲೂಕು ಕಚೇರಿ ಸೇರಿದಂತೆ ಇತರೆ ಕಚೇರಿಗಳಿಗೆ ತೆರಳಲು ನಾಗರಿಕರಿಗೆ ಹಾಗೂ ದಾರಿಹೋಕರಿಗೆ ತೊಂದರೆಯಾಗುತ್ತಿದೆ. ಇದನ್ನು ತಪ್ಪಿಸಲು ಕಾಂಪ್ಲೆಕ್ಸ್ ನಿರ್ಮಾಣದ ನೆಲ ಮಹಡಿ ಹಂತದಲ್ಲಿ ದ್ವಿಚಕ್ರ ವಾಹನಗಳ ನಿಲುಗಡೆಗೆ ವ್ಯವಸ್ಥೆ ಕಲ್ಪಿಸಿ 2ನೇ ಮತ್ತು 3ನೇ ಮಹಡಿ ಕಟ್ಟಡಗಳ ಸಂಕೀರ್ಣ ನಿರ್ಮಿಸಲಾಗುವುದು. ಸಂಕೀರ್ಣದ ಮಳಿಗೆಗಳಿಗೆ ಉತ್ತಮ ಬಾಡಿಗೆ ಬಂದು ಸಂಘಕ್ಕೆ ಆದಾಯ ಬರುತ್ತದೆ ಹಾಗೂ ನೆಲ ಮಹಡಿಯಲ್ಲಿ ನಿಲುಗಡೆಗೊಳ್ಳಲು ದ್ವಿಚಕ್ರವಾಹನಗಳ ನಿಲುಗಡೆ ಟೆಂಡರ್ ಕರೆದು ಕರ ವಸೂಲಿ ವ್ಯವಸ್ಥೆ ಮಾಡಬಹುದಾಗಿದೆ ಎಂದು ಹೇಳಿದರು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ಎಚ್.ಬಸವರಾಜ್, 2023-24ನೇ ಸಾಲಿನಲ್ಲಿ 5,80000 ರೂ. ನಿವ್ವಳ ಲಾಭ ಗಳಿಸಿದೆ ಎಂದರು.

ಉಪಾಧ್ಯಕ್ಷ ಎಚ್.ಡಿ.ಬಸವರಾಜಪ್ಪ, ನಿರ್ದೇಶಕರು ಗಳಾದ ಎಂ.ಎಚ್.ಗಜೇಂದ್ರಪ್ಪ, ಡಿ. ಮಂಜುನಾಥ, ಎಚ್.ಪಿ.ಶೇಖರಪ್ಪ, ಎಚ್. ಜಿ.ಶಂಕರಮೂರ್ತಿ, ಕೆ.ಬಿ.ಸಿದ್ದನಗೌಡ, ಎಲ್. ಎಸ್.ಅನಂತನಾಯ್ಕ, ಎಂ.ಜಿ.ಹಾಲಪ್ಪ, ಕೆ. ಚೇತನ್, ಎಚ್.ಸಿ.ಪ್ರಕಾಶ್, ನಾಗಮ್ಮ, ಬಸಮ್ಮ, ಸಂಘದ ಮುಖ್ಯ ಕಾರ್ಯನಿರ್ವಾಹಕ ಜಿ.ಇ.ಮುರುಗೇಶ್ ಉಪಸ್ಥಿತರಿದ್ದರು.

# ಲಿಂ. ಶ್ರೀ ಶಿವಕುಮಾರ ಸ್ವಾಮೀಜಿಗಳದು ಪ್ರೀತಿಸುವ ಹೃದಯ

## 32ನೇ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಸಾಣೇಹಳ್ಳಿಯ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ

ಸಾಣೇಹಳ್ಳಿ, ಸೆ.25- ಧೀರತನವನ್ನು ಮೈಗೂಡಿಸಿ ಕೊಂಡಿದ್ದ ಲಿಂಗೈಕ್ಯ ಶ್ರೀ ಶಿವಕುಮಾರ ಸ್ವಾಮಿಗಳದು ಪ್ರೀತಿಸುವ ಹೃದಯವಾಗಿತ್ತು. ಜಾತಿ, ಮತ, ಲಿಂಗಭೇದ ಮಾಡದೇ ಎಲ್ಲರನ್ನೂ ಪ್ರೀತಿಸುವ ಹೃದಯ ವೈಶಾಲ್ಯತೆ ಅವರಲ್ಲಿತ್ತು ಎಂದು ಸಾಣೇಹಳ್ಳಿಯ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಇಲ್ಲಿನ ಶ್ರೀಮಠದ ಆವರಣದಲ್ಲಿ ನಡೆದ ಶ್ರೀ ತರಳಬಾಳು ಜಗದ್ಗುರು ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳ 32ನೇ ಶ್ರದ್ಧಾಂಜಲಿ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಯಾರನ್ನೂ ದ್ವೇಷ ಭಾವನೆಯಿಂದ ಕಾಣುವಂಥ ವರಲ್ಲ. ವೈರಿಯನ್ನೂ ಕೂಡ ಪ್ರೀತಿಸಬೇಕು ಎನ್ನುವ ಭಾವನೆಯನ್ನು ಬೆಳೆಸಿಕೊಂಡಂಥವರು. ಬಹುಶಃ ಅವರ ಪ್ರೇಮ ಸ್ಪರ್ಶಕ್ಕೆ ಒಳಗಾದವರು ಎಂದೂ ಅವರನ್ನು ಮರೆಯಲಿಕ್ಕೆ ಸಾಧ್ಯವಿಲ್ಲ. ಅವರ ಮನಸ್ಸು ವಜ್ರಕ್ಕಿಂತ ಕಠಿಣ, ಹೂವಿಗಿಂತ ಕೋಮಲ. ಅದು ಸಂತರ ಲಕ್ಷಣ. ಯಾರು ನಿಜವಾದ ಸಂತ ಆಗ್ತಾನೋ ಅವನು ವಜ್ರಕ್ಕಿಂತ ಕಠಿಣವಾದ ತೀರ್ಮಾನಗಳನ್ನು ತೆಗೆದುಕೊಳ್ತಾ ಹೋಗುತ್ತಾನೆ. ಆ ತೀರ್ಮಾನಗಳು ಪದೇ ಪದೇ ಬದಲಾವಣೆ ಮಾಡುವಂಥವುಗಳಲ್ಲ. ಅವರು ತೆಗೆದುಕೊಳ್ಳುವ ತೀರ್ಮಾನಗಳು ಆ ಕ್ಷಣಕ್ಕೆ ಜನರಿಗೆ ಒಪ್ಪಿಗೆ ಆಗದೇ ಇರಬಹುದು, ಆದರೆ ಕ್ರಮೇಣ ಅವು ಜನಮುಖಿಯಾದ, ಸಮಾಜ ಮುಖಿಯಾದ, ಲೋಕಲ್ಯಾಣ ಕಾರ್ಯ ಆಗಿರುತ್ತಿದ್ದವು ಎಂದು ಅವರು ಸ್ಮರಿಸಿದರು.



ಮಠಕ್ಕೆ ಹಾಗೂ ತಮಗಾಗದವರನ್ನು ಪ್ರೀತಿಯಿಂದ ಕರೆದು ಜೊತೆಗೆ ಕೂರಿಸಿಕೊಂಡು ಪ್ರಸಾದ ಮಾಡುತ್ತಿದ್ದರು. ಭಕ್ತರನ್ನು ಗೌರವಿಸು ತ್ತಿದ್ದರು, ಶಿಕ್ಷಿಸುತ್ತಿದ್ದರು. ಶಿಕ್ಷೆಯ ಉದ್ದೇಶ ಅವರ ಮನಃಪರಿವರ್ತನೆಗಾಗಿ. ಬಹುಶಃ ಒಬ್ಬ ಗುರುವಿಗೆ ಇರಬೇಕಾದ ಗುಣ ಇದು. ಪೀಠಕ್ಕೆ ಅಂಟಿಕೊಳ್ಳದೇ ಆದರ್ಶಗಳಿಗಾಗಿ, ತತ್ವಗಳಿಗಾಗಿ. ನೀತಿಗಾಗಿ ಅಂಟಿಕೊಂಡವರು. ಶ್ರೀಗಳವರಿಗೆ ಪೀಠ ಮುಖ್ಯವಾಗದೇ ಆದರ್ಶ ಮುಖ್ಯವಾಗಿತ್ತು. ಆದರ್ಶಗಳನ್ನು ಆಚರಣೆಗೆ ತರಲಿಕ್ಕೆ ಪೀಠವನ್ನು ಸದ್ಬಳಕೆ ಮಾಡಿಕೊಂಡರು ಎಂದರು.

ಶಿವ ಧ್ವಜಾರೋಹಣ ನೇರವೇರಿಸಿ ಮಾತನಾಡಿದ ಸಾಣೇಹಳ್ಳಿಯ ಕೃಷ್ಣಮೂರ್ತಿ, ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳವರು ಇರದೇ ಹೋಗಿದ್ದರೆ ಸಾಣೇಹಳ್ಳಿಯಲ್ಲಿ ಪ್ರಾಥಮಿಕ ಶಾಲೆ, ಪ್ರೌಢಶಾಲೆ, ಆಸ್ಪತ್ರೆ, ಮಠ ನೋಡಲಿಕ್ಕೆ ಸಾಧ್ಯವಾಗುತ್ತಿರಲಿಲ್ಲ. ಯಾವುದೋ ಒಂದು ಸೌಲಭ್ಯ ವಂಚಿತ ಹಳ್ಳಿಯಾಗಿ ಇವತ್ತಿಗೂ ಉಳಿದುಕೊಳ್ಳುತ್ತಿತ್ತೇನೋ. ಆದರೆ ಶಿವಕುಮಾರ ಶ್ರೀಗಳ ಆಶೀರ್ವಾದ ಹಾಗೂ ಪಂಡಿತಾರಾಧ್ಯ ಶ್ರೀಗಳ ಆಶೀರ್ವಾದದ ಫಲವಾಗಿ ಇಂದು ಸಾಣೇಹಳ್ಳಿ ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಾನ್ಯತೆ ಪಡೆಯಲಿಕ್ಕೆ ಸಾಧ್ಯವಾಗದೆ ಎಂದರು.

ಹಳ್ಳಿ ಹಳ್ಳಿಗಳಲ್ಲೂ ಶಾಲೆಗಳನ್ನು ತೆರೆದು ಎಲ್ಲರಿಗೂ ಶಿಕ್ಷಣ ದೊರಕುವಂತೆ ಮಾಡಿದರು. ಅಕ್ಕನ ಬಳಗ, ಅಣ್ಣನ ಬಳಗವನ್ನು ಸ್ಥಾಪಿಸಿ ಶರಣರ ವಿಚಾರಗಳನ್ನು ಪ್ರಸಾರ ಮಾಡಿದರು. ಜಾತಿ ಪದ್ಧತಿಯ ವಿರುದ್ಧ ಬಸವಣ್ಣನವರು 12ನೆಯ ಶತಮಾನದಲ್ಲಿ ಹೇಗೆ ಹೋರಾಟ ಮಾಡಿದರೋ ಹಾಗೆಯೇ 21ನೆಯ ಶತಮಾನದಲ್ಲಿ ಶ್ರೀ ಶಿವಕುಮಾರ ಶಿವಾಚಾರ್ಯ ಸ್ವಾಮಿಗಳವರು ಹೋರಾಟ ಮಾಡಿದ್ದಾರೆ ಎಂದರು.

ನಾಗರಾಜ್ ಹೆಚ್. ಎಸ್. ವಚನ ಗೀತೆಗಳನ್ನು ಹಾಡಿದರು. ಶಿಕ್ಷಕಿ ಸಂಧ್ಯಾ ಪಿ. ಎಲ್ ನಿರೂಪಿಸಿ ವಂದಿಸಿದರು. ಸುಧಾ ಎಂ ಸ್ವಾಗತಿಸಿದರು.

# ವಿಆರ್‌ಎಲ್ ಹೆಸರಲ್ಲಿ ವ್ಯಕ್ತಿಗೆ ವಂಚನೆ

**(1ನೇ ಪುಟದಿಂದ)** ರೂ. ಮುಂಗಡ ಹಣ ಪಾವತಿಸಿದ್ದಾರೆ. 22 ರಂದು ಬೆಳಗ್ಗೆ ಬೆಂಗಳೂರಿನ ಮನೆಯಿಂದ ವಸ್ತುಗಳನ್ನು ಪ್ಯಾಕಿಂಗ್ ಮಾಡಿಕೊಂಡು ಹೋಗಿದ್ದಾರೆ. ಅದಾದ ಸ್ವಲ್ಪ ಹೊತ್ತಿನಲ್ಲೇ ಮತ್ತೊಮ್ಮೆ ಕರೆ ಮಾಡಿ ಬಾಕಿ ಇರುವ 11 ಸಾವಿರ ರೂ. ಕಟ್ಟಿಸಿಕೊಂಡಿದ್ದಾರೆ.

ವಿಮೆ, ಸಾರಿಗೆ ವೆಚ್ಚ, ಜಿಎಸ್‌ಟಿ ಸೇರಿ ಒಟ್ಟು 29,926 ರೂ.ಗಳ ಬಿಲ್ ಕಳಿಸಿ, ಈಗಾಗಲೇ ಪಾವತಿಸಿರುವ 12 ಸಾವಿರ ರೂ. ಬಿಟ್ಟು ಉಳಿದ 17,926 ರೂ.ಗಳನ್ನು 3 ಗಂಟೆಯೊಳಗೆ ಪಾವತಿಸುವಂತೆ ಹೇಳಿದ್ದಾರೆ. ಗ್ರಾಹಕ ದಾವಣಗೆರೆ ತಲುಪಿದ ನಂತರ ಬೇರೊಬ್ಬರಿಂದ ಸಾಲ ಪಡೆದು ಬಾಕಿ ಹಣ ಪಾವತಿಸಿದ್ದಾರೆ. ಅಷ್ಟಾಗಿಯೂ 3 ದಿನ ಸತಾಯಿಸಿದ್ದು, ಬುಧವಾರ ಬೆಳಗ್ಗೆ ವಾಹನ ದಾವಣಗೆರೆಗೆ ಬಂದಿದೆ.

ಉದ್ಯೋಗಿಯು ಸೆ. 23 ರಂದು ಚಿತ್ರದುರ್ಗದ ವಿಆರ್‌ಎಲ್ ಶಾಖೆಗೆ ಹೋಗಿ ವಿಚಾರಿಸಿದಾಗ, ನಾವು ಆ ರೀತಿಯ ಸೇವೆ ನೀಡುವುದಿಲ್ಲ, ನೇರವಾಗಿ ಕಚೇರಿಗೇ ಬಂದು ಬುಕ್ ಮಾಡುವ ವ್ಯವಸ್ಥೆಯಿದೆ ಎಂದು ಹೇಳಿದಾಗ, ತಾನು ಮೋಸ ಹೋಗಿರುವುದು ಗೊತ್ತಾಗಿದೆ. ಸೋಮವಾರ ಬೆಂಗಳೂರಿನ ಚನ್ನಮ್ಮನ ಕೆರೆ ಅಚ್ಚುಕಟ್ಟು ಪೊಲೀಸ್ ಠಾಣೆಯಲ್ಲಿ ಗ್ರಾಹಕರು ಈ ಕುರಿತು ದೂರು ದಾಖಲಿಸಿದ್ದಾರೆ.

ವಿಆರ್‌ಎಲ್ ಹೆಸರು, ಲೋಗೋ, ಜಿಎಸ್‌ಟಿ ಮತ್ತು ಪಾನ್ ಸಂಖ್ಯೆ ಬಳಸಿ ವಂಚನೆ ಮಾಡಿರುವ ಬಗ್ಗೆ ದಾವಣಗೆರೆಯ ಆರ್.ಎಂ.ಸಿ. ಯಾರ್ಡ್ ಪೊಲೀಸ್ ಠಾಣೆಯಲ್ಲಿ ವಿಆರ್‌ಎಲ್ ದಾವಣಗೆರೆ ಶಾಖೆಯ ವ್ಯವಸ್ಥಾಪಕ ಬಿ.ಆರ್. ಮಧು ಸಹ ದೂರು ದಾಖಲಿಸಿದ್ದಾರೆ.

# ಟ್ರಂಪ್ ಹತ್ಯೆ ಯತ್ನ: ಗುಪ್ತಚರ ಸಂಸ್ಥೆ ವೈಫಲ್ಯ

**(1ನೇ ಪುಟದಿಂದ)** ತನಿಖೆ, ಸೆನೆಟ್ ಹೋಮ್‌ಲ್ಯಾಂಡ್ ಸೆಕ್ಯುರಿಟಿ ಮತ್ತು ಗವರ್ನಮೆಂಟ್ ಅಫೇರ್ಸ್ ಕಮಿಟಿಯ ಮಧ್ಯಂತರ ವರದಿಯಲ್ಲೂ ಹೇಳಲಾಗಿತ್ತು. 'ಆ ವೈಫಲ್ಯಗಳ ಪರಿಣಾಮಗಳು ಭೀಕರವಾಗಿವೆ' ಎಂದು ಹೋಮ್‌ಲ್ಯಾಂಡ್ ಪ್ಯಾನೆಲ್‌ನ ಡೆಮಾಕ್ರಟಿಕ್ ಅಧ್ಯಕ್ಷರಾದ ಮಿಷಿಗನ್ ಸೆನ್ ಗ್ಯಾರಿ ಪೀಟರ್ಸ್ ಹೇಳಿದ್ದಾರೆ.

# ಕರ್ನಾಟಕದಲ್ಲಿ ಆಂತರಿಕ ಕಲಹ : ಮೋದಿ

**(1ನೇ ಪುಟದಿಂದ)** ಕಾಂಗ್ರೆಸ್‌ಗೆ ಮತ ಹಾಕುವುದು ಎಂದರೆ ಸ್ಥಿರತೆ ಮತ್ತು ಅಭಿವೃದ್ಧಿಯನ್ನು ಪಣಕ್ಕಿಟ್ಟಂತೆ. ಆದ್ದರಿಂದ ರಾಜ್ಯವೇ ಹಾಳಾಗುತ್ತದೆ ಎಂದ ಅವರು, ಅದಕ್ಕೆ ಅವಕಾಶ ನೀಡಬೇಡಿ. ಮೀಸಲಾತಿಯನ್ನು ವಿರೋಧಿಸುವುದು ಮತ್ತು ದ್ವೇಷಿಸುವುದು ಕಾಂಗ್ರೆಸ್‌ನ ಡಿಎನ್‌ಎಯಲ್ಲಿಯೇ ಇದೆ ಎಂದು ಮೋದಿ ಟೀಕಿಸಿದರು.



# ಕೊಮಾರನಹಳ್ಳಿ : ಧರ್ಮಸ್ಥಳ ಗ್ರಾಮಾಭಿವೃದ್ಧಿ ಒಕ್ಕೂಟದ ಪದಾಧಿಕಾರಿಗಳ ಸಮಾವೇಶ

ಮಲೇಬೆನ್ನೂರು, ಸೆ.25- ಕೊಮಾರನಹಳ್ಳಿ ಗ್ರಾಮದ ಶ್ರೀ ಲಕ್ಷ್ಮಿ ರಂಗನಾಥ ಸ್ವಾಮಿ ಸಮುದಾಯ ಭವನದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸ್ವ-ಸಹಾಯ ಸಂಘಗಳ ಒಕ್ಕೂಟದ ಪದಾಧಿಕಾರಿಗಳ ತಾ. ಮಟ್ಟದ ಸಮಾವೇಶವನ್ನು ಯೋಜನೆಯ ಜಿಲ್ಲಾ ನಿರ್ದೇಶಕ ಎಂ.ಲಕ್ಷ್ಮಣ ಉದ್ಘಾಟಿಸಿದರು.

ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯರಾದ ಜಿ.ಮಂಜುನಾಥ್ ಪಟೇಲ್, ಜಿಗಳಿ ಪ್ರಕಾಶ್, ಕೊಕ್ಕನೂರು ಹನುಮಂತರಾಯ, ಮಲೇಬೆನ್ನೂರು ಯೋಜನಾಧಿಕಾರಿ ವಸಂತ್ ದೇವಾಡಿಗ, ವಲಯ ಮೇಲ್ವಿಚಾರಕರಾದ ರಕ್ಷಿತಾ, ಸಂಪತ್ ಲಕ್ಷ್ಮಿ, ರಂಜಿತಾ, ಸಂತೋಷಿನಿ, ಮಾರುತಿಗೌಡ, ಹರೀಶ್, ಚಂದ್ರಪ್ಪ, ಕೃಷಿ ಮೇಲ್ವಿಚಾರಕ ಮನೋಹರ್, ಜ್ಞಾನ ವಿಕಾಸ ಸಮಾನ್ವಯಾಧಿಕಾರಿ ಸವಿತಾ, ಕಚೇರಿಯ ಹಣಕಾಸು ಪ್ರಬಂಧಕ ಶ್ರೀಕಾಂತ್, ಆಡಳಿತ ಪ್ರಬಂಧಕಿ ಐಶ್ವರ್ಯ, ಸಂಘಗಳ ಲೆಕ್ಕ ಪರಿಶೋಧಕಿ ಆಶಾ ಸೇರಿದಂತೆ ಇತರರು ಭಾಗವಹಿಸಿದ್ದರು.

ಪ್ರವಚನಕಾರ ಸಿರಿಗೆರೆ ಸಿದ್ದೇಶ್ ವಿಶೇಷ ತರಬೇತಿ ನೀಡಿದರು.

# ಹರಪನಹಳ್ಳಿ : ಆರ್.ಎಸ್.ಎಲ್ ಶಾಲೆ ವಿದ್ಯಾರ್ಥಿ ಉಮರ್ ಫಾರೂಕ್ ಪ್ರಥಮ

ಹರಪನಹಳ್ಳಿ, ಸೆ. 25 - ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಆರ್.ಎಸ್.ಎಲ್. ಶಾಲೆಯ 7ನೇ ತರಗತಿಯ ಕೆ. ಉಮರ್ ಫಾರೂಕ್ 100 ಮೀಟರ್ ಓಟ, 200 ಮೀಟರ್ ಓಟ ಮತ್ತು ಉದ್ದ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿರುತ್ತಾನೆ. ಕೆ.ಸಿ.ಎ. ಆಂಗ್ಲ ಮಾಧ್ಯಮ ಪೌಢಶಾಲೆಯ 10ನೇ ತರಗತಿಯ ಕು. ಅಮೂಲ್ಯ ಕೆ.ಆರ್. ಮತ್ತು ಅನುಷ ಹೆಚ್. ಚದುರಂಗದಲ್ಲಿ ಪ್ರಥಮ ಸ್ಥಾನಗಳಿಸಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

# ಐಎಂಎ ಮಹಿಳಾ ವಿಭಾಗದಿಂದ ವಿಶ್ವ ಹೃದಯ ದಿನಾಚರಣೆ



ದಾವಣಗೆರೆ, ಸೆ. 25- ಐಎಂಎ ಮಹಿಳಾ ವಿಭಾಗದಿಂದ ವಿಶ್ವ ಹೃದಯ ದಿನಾಚರಣೆ ಪ್ರಯುಕ್ತ ಐ.ಎಂ.ಎ. ಹಾಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಹೃದಯ ತಜ್ಞ ಡಾ. ಮಲ್ಲೇಶ್ ಹೃದಯಾಘಾತದ ಬಗ್ಗೆ ಉಪನ್ಯಾಸ ನೀಡಿದರು.

ಪುರುಷ ಹಾಗೂ ಸ್ತ್ರೀಯರಲ್ಲಿನ ಹೃದಯಘಾತದ ಬಗ್ಗೆ ಸಂಕ್ಷಿಪ್ತವಾಗಿ ಅವರು ವಿವರಿಸಿದರು.

ವೇದಿಕೆಯಲ್ಲಿ ಅಧ್ಯಕ್ಷರಾದ ತ್ರಿವೇಣಿ ಮಲ್ಲೇಶ್, ಸಹ ಕಾರ್ಯದರ್ಶಿ ಸುಧಾ ಸತ್ಯನಾರಾಯಣ್ ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಅನಿತಾ ಬಸವರಾಜ್, ಶೈಲಾ ಆಲೂರ್, ಮಮತಾ ಕುಮಾರ್, ಪುಷ್ಪ ಮಲ್ಲಿಕಾರ್ಜುನ್, ಗೀತಾ ಶಾಂತಕುಮಾರ್ ನಡೆಸಿಕೊಟ್ಟರು

# ಕ್ಷೀಣಿಸುತ್ತಿರುವ ಮಹಿಳಾ ಅಸಮಾನತೆಗೆ ಶಿಕ್ಷಣ ಕಾರಣ

## ಹರಿಹರ : 'ಪೋಷಣ್ ಮಾಸ, ಭೇಟಿ ಬಚಾವೋ..' ಕಾರ್ಯಕ್ರಮದಲ್ಲಿ ಸಿಪಿಐ ಸುರೇಶ್ ಸಗರಿ

ಹರಿಹರ, ಸೆ.25- ಮಹಿಳೆಯರು ಇಂದು ಎಲ್ಲಾ ರಂಗದಲ್ಲಿಯೂ ಮೇಲುಗೈ ಸಾಧಿಸುತ್ತಿದ್ದು, ಸಮಾಜದಲ್ಲಿ ಅವರ ಬಗ್ಗೆ ಇದ್ದ ಅಸಮಾನತೆ, ಕೀಳರಿಮೆ ಮತ್ತು ತಾತ್ಸಾರ ಭಾವನೆಗಳು ಕಡಿಮೆಯಾಗಿವೆ ಇದಕ್ಕೆ ಶಿಕ್ಷಣವೇ ಮುಖ್ಯ ಕಾರಣವಾಗಿದೆ ಎಂದು ಸಿಪಿಐ ಸುರೇಶ್ ಸಗರಿ ಹೇಳಿದರು.



ನಗರದ ಗುರುಭವನದ ಸಭಾಂಗಣದಲ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ನಿನ್ನೆ ನಡೆದ 'ಪೋಷಣ್ ಮಾಸ' ಮತ್ತು 'ಭೇಟಿ ಬಚಾವೋ ಭೇಟಿ ಪಡಾವೋ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ತಾಯಿ ಗರ್ಭದಲ್ಲಿ ಹೆಣ್ಣು ಜನನ ಆಗುತ್ತದೆ ಎಂಬುದು ಗೊತ್ತಾದ ದಿನದಿಂದ ಹಿಡಿದು, ಮಣ್ಣಿನಲ್ಲಿ ಲೀನವಾಗುವವರೆಗೂ ಹೆಣ್ಣಿನ ಬಗ್ಗೆ ಅಸಮಾನತೆ, ತಾತ್ಸಾರದ ಮನೋಭಾವ ಇದ್ದವು. ಆದರೆ ಇತ್ತೀಚೆಗೆ ಮಹಿಳೆಯರು ಪುರುಷರಂತೆ ಎಲ್ಲಾ ರಂಗಗಳಲ್ಲಿ ತಮ್ಮನ್ನು ತೊಡಗಿಸಿಕೊಂಡು ತಮ್ಮದೇ ಆದ ಛಾಪನ್ನು ಮೂಡಿಸುತ್ತಾ ಪ್ರಗತಿಯ ಹಾದಿಯಲ್ಲಿ ಸಾಗುತ್ತಿರುವುರಿಂದ ಅಸಮಾನತೆ ಕಡಿಮೆ ಆಗುತ್ತಾ ಸಾಗಿದೆ. ಇದಕ್ಕೆ ಶಿಕ್ಷಣವೇ ಮುಖ್ಯ ಕಾರಣವಾಗಿದೆ ಎಂದು ಹೇಳಿದರು.

ಪೌರಾಯುಕ್ತ ಸುಬ್ರಹ್ಮಣ್ಯ ಶೆಟ್ಟಿ ಮಾತನಾಡಿ, ಲಿಂಗ ತಾರತಮ್ಯ ಹೋಗಲಾಡಿಸಲು ಸರ್ಕಾರ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳನ್ನು ಸರಿಯಾದ ರೀತಿಯಲ್ಲಿ ಅನುಷ್ಠಾನಕ್ಕೆ ತಂದಾಗ ಲಿಂಗ ತಾರತಮ್ಯ ಹೋಗಲಾಡಿಸಬಹುದು. ಅಲ್ಲದೇ ಇತ್ತೀಚಿನ ದಿನಗಳಲ್ಲಿ ಮಹಿಳೆಯರಿಗೂ ಸಮಾಜದಲ್ಲಿ ಪುರುಷರಿಗೆ ಸರಿ ಸಮಾನವಾದ ಗೌರವ ಸಿಗುವಂತಾಗಿದೆ ಎಂದು ಹೇಳಿದರು.

ನಗರಸಭೆ ಅಧ್ಯಕ್ಷೆ ಕವಿತಾ ಮಾರುತಿ ಬೇಡರ್ ಮಾತನಾಡಿ, ಮಹಿಳಾ ಮತ್ತು ಕುಟುಂಬ ಕಲ್ಯಾಣ ಇಲಾಖೆಯವರು ಮಕ್ಕಳು ಮತ್ತು ಮಹಿಳೆಯರ ಸುರಕ್ಷತೆಗೆ ಉತ್ತಮ ಕೆಲಸ ಮಾಡುತ್ತಿದ್ದಾರೆ. ಜೊತೆಗೆ ಅಂಗನವಾಡಿ ಶಿಕ್ಷಕಿಯರು ಹಾಗೂ ಸಹಾಯಕರು ಶ್ರಮವಹಿಸಿ ಕೆಲಸ ಮಾಡುತ್ತಿರುವ ಕಾರಣ ಸಮಾಜದಲ್ಲಿ ಮಹಿಳೆಯರಿಗೆ ಹೆಚ್ಚು ಗೌರವ ಸಿಗುವಂತಾಗಿದೆ ಎಂದು ಹೇಳಿದರು.


ಹೆಣ್ಣು ಮಕ್ಕಳಿಗೆ ಉತ್ತೇಜನ ನೀಡಲು ಮತ್ತು ಅವರಲ್ಲಿ ಇರುವಂತ ನಕಾರಾತ್ಮಕ ವಿಚಾರಗಳನ್ನು ನಿರ್ಮೂಲನೆ ಮಾಡುವುದರ ಜೊತೆಗೆ ಮಹಿಳೆಯರ ಸಬಲೀಕರಣಕ್ಕೆ ಹೆಚ್ಚು ಪ್ರೋತ್ಸಾಹ ನೀಡುವುದಕ್ಕಾಗಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಿಡಿಪಿಓ ಪೂರ್ಣಿಮಾ ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಎಡಿಸಿಪಿ ರಶೀದಾ, ಹೆಣ್ಣು ಮಗುವನ್ನು ಉಳಿಸಿ, ಅದನ್ನು ಓದಿಸಿ ಎಂಬ ಹೆಸರಿನಲ್ಲಿ ಕಾರ್ಯಕ್ರಮ ನಡೆಯುತ್ತಿದ್ದು, ಗಂಡು ಮಗುವಿನಂತೆ ಹೆಣ್ಣು ಮಗು ಹುಟ್ಟಿದಾಗಲು ಸಂಭ್ರಮಾಚರಣೆ ಇರಬೇಕು ಮತ್ತು ಪ್ರತಿಯೊಂದು ಮಗುವಿಗೂ ಅಪೌಷ್ಟಿಕತೆ ಹೋಗಲಾಡಿಸಿ, ರಕ್ತ ಹೀನತೆ ತಡೆದು ಸದೃಢ ದೇಹವನ್ನು ಹೊಂದುವಂತೆ ಮಾಡಿದಾಗ ಮಗುವಿನ ಆರೋಗ್ಯ ರಕ್ಷಣೆ ಮಾಡಿದಂತೆ ಆಗುತ್ತದೆ ಎಂದು ಹೇಳಿದರು

ನಗರಸಭೆ ಉಪಾಧ್ಯಕ್ಷ ಜಂಬಣ್ಣ ಗುತ್ತೂರು ಮಾತನಾಡಿ, ಹೆಣ್ಣು ಎಂಬುದು ಇನ್ನೊಂದು ಮನೆಯನ್ನು ಬೆಳಗುವ ನಂದಾದೀಪ ಎಂದು ಭಾವಿಸಿ, ಅಸಮಾನತೆ ಇರುತ್ತಿತ್ತು ಮತ್ತು ಹೆಣ್ಣು ಹುಟ್ಟಿದರೆ ಅಪಶಕುನ ಎಂಬ ಕೀಳರಮೆ ಇತ್ತು. ಆದರೆ ಇತ್ತೀಚೆಗೆ ಹೆಣ್ಣು ಸಂಸಾರವನ್ನು ಬೆಳಕಿನ ಕಡೆಗೆ ತೆಗೆದುಕೊಂಡು ಹೋಗುವಂತಹ ಕೆಲಸವನ್ನು ಮಾಡುತ್ತಿದ್ದಾಳೆ ಎಂಬುದನ್ನು ಅರಿಯಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಡಾ. ವಿಶ್ವನಾಥ್, ನ್ಯಾಯವಾದಿ ಜೆ.ಎಸ್. ಶುಭಾ, ಉಪನ್ಯಾಸಕರಾದ ವಾಣಿಶ್ರೀ ರೆಡ್ಡಿ, ನಾಗವೇಣಿ, ವೀರೇಶ್, ಅಂಗನವಾಡಿ ಕಾರ್ಯಕರ್ತರ ಸಂಘದ ರಾಜ್ಯ ಉಪಾಧ್ಯಕ್ಷೆ ಬಿ.ಎಸ್ ನಿರ್ಮಲ, ಮೇಲ್ವಿ ಚಾರಕರಾದ ಶೈಲಾ ಮೈದೂರು, ಗೀತಾ, ಮಂಜುಳಾ, ಲಕ್ಷ್ಮೀ ಹುಡೇದಮನಿ, ಶೋಭಾ ಪಾಟೀಲ್ ಇತರರು ಹಾಜರಿದ್ದರು.


# ನಾಲ್ಕನೇ ವರ್ಷದ ಪುಣ್ಯಸ್ಮರಣೆ



ದಿ. ಎಲ್. ಕೃಷ್ಣಮೂರ್ತಿ ಇವರ ಪುತ್ರ

**ಶ್ರೀ ರಾಜೀವ್ ಎಲ್.ಕೆ**

ಹಗಲು-ಇರುಳುಗಳು ಕಳೆದು, ಮೂಡುತ್ತಿರುವ ಹೊಸತಿನಂತೆ ನಿಮ್ಮ ನೆನಪು ನಮಗೆಲ್ಲಾ ದಾರಿ ದೀಪವಾಗಿದೆ. ನೀವು ಕಣ್ಮರೆಯಾಗಿ ಹೋದರೂ ನೀವು, ನಿಮ್ಮ ನೆನಪು ನಮ್ಮೆಲ್ಲರ ಹೃದಯಗಳಲ್ಲಿ ಶಾಶ್ವತವಾಗಿ ಉಳಿದಿದೆ. ಕಷ್ಟ-ಸುಖಗಳ ತೊಳಲಾಟದ ಬದುಕಿಗೆ ನಿಮ್ಮ ಮನೋಬಲ ನಮಗೆ ದೃಢತೆ ನೀಡಿದೆ. ನಿಮ್ಮ ಆತ್ಮಕ್ಕೆ ಆ ಶಿವ ಪರಮಾತ್ಮನು ಚಿರಶಾಂತಿಯನ್ನು ನೀಡಲೆಂದು ಪ್ರಾರ್ಥಿಸುವ.

**ಇಂತಿ ದುಃಖತಪ್ತರು**

ಧರ್ಮಪತ್ನಿ, ಮಕ್ಕಳು, ಸೊಸೆಯಂದಿರು, ಮೊಮ್ಮಕ್ಕಳು ಮತ್ತು ಲಿಂಗಪಲ್ಲಿ ವಂಶಸ್ಥರು ಹಾಗೂ ಬಂಧು-ಮಿತ್ರರು

ಅಮ್ಮ ನಿಲಯ, ಆಂಜನೇಯ ದೇವಸ್ಥಾನದ ಹಿಂಭಾಗದ ರಸ್ತೆ, ಎಂ.ಸಿ.ಸಿ 'ಬಿ' ಬ್ಲಾಕ್, ದಾವಣಗೆರೆ

**94814 18236, 97402 20332, 95915 93314**



# ಕೆ.ಎಸ್. ಸೋಮನಾಥ್ ನಿಧನ



ಚಿದಂಬರ ದೇವಸ್ಥಾನದ ಹತ್ತಿರ, ಡಿಸಿಎಂ ರಸ್ತೆ, ನಿಟುವಳ್ಳಿ, ದಾವಣಗೆರೆ ವಾಸಿಯಾದ

**ಅಡುಗೆ ಕಂಟ್ರ್ಯಾಕ್ಟರ್ ಕೆ.ಎಸ್. ಸೋಮನಾಥ್**

(55 ವರ್ಷ) ಇವರು ದಿನಾಂಕ : 24.09.2024 ರಂದು ಸಂಜೆ 6. ಗಂಟೆಗೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಪತ್ನಿ, ಇಬ್ಬರು ಪುತ್ರರು ಹಾಗೂ ಅಪಾರ ಬಂಧು-ಬಳಗದವರನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ : 26.09.2024ರ ಗುರುವಾರ ಮಧ್ಯಾಹ್ನ 12.ಕ್ಕೆ ವೈಕುಂಠ ಧಾಮದಲ್ಲಿ ನೆರವೇರಿಸಲಾಗುವುದು.

**ಇಂತಿ ದುಃಖತಪ್ತ ಕುಟುಂಬ ವರ್ಗದವರು :**

**ಫೋನ್ : 97406 81258, 91483 12928**


## ಬಸವರಾಜ ಎಸ್. ಚೌದರಿ ನಿಧನ



ದಾವಣಗೆರೆಯ ಬಸವರಾಜ ಆಗ್ರೋ ಟ್ರೇಡರ್ ಮಾಲೀಕರಾದ ಶ್ರೀ ಬಸವರಾಜ ಎಸ್. ಚೌದರಿ (58) ಅವರು ದಿನಾಂಕ 26-9-2024ರ ಗುರುವಾರ ಬೆಳಗಿನ ಜಾವ 12.32 ಕ್ಕೆ ನಿಧನರಾದರು. ಪತ್ನಿ, ಓರ್ವ ಪುತ್ರಿ, ಓರ್ವ ಪುತ್ರ ಹಾಗೂ ಅಪಾರ ಬಂಧುಗಳನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 26-9-2024 ರ ಗುರುವಾರ ಮಧ್ಯಾಹ್ನ 1.30 ಕ್ಕೆ ವಿಜಯಪುರ ಜಿಲ್ಲೆ ಸಿಂಧಗಿ ತಾಲ್ಲೂಕು ಕನ್ನೊಳ್ಳಿ ಗ್ರಾಮದಲ್ಲಿ ನೆರವೇರಿಸಲಾಗುವುದು.

**ರಕ್ತ ದಾನ ಶ್ರೇಷ್ಠ ದಾನ**

## ಜಿಲ್ಲಾ ಮಟ್ಟದ ಬಾಲಕಿಯರ ವಾಲಿಬಾಲ್

# ವಿಶ್ವಚೇತನ ವಿದ್ಯಾನಿಕೇತನ ವಸತಿಯುತ ಪ.ಪೂ. ಕಾಲೇಜು ರಾಜ್ಯಮಟ್ಟಕ್ಕೆ ಆಯ್ಕೆ



ದಾವಣಗೆರೆ, ಸೆ. 25- ನಗರದ ವಿಶ್ವಚೇತನ ವಿದ್ಯಾನಿಕೇತನ ವಸತಿಯುತ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಶೈಕ್ಷಣಿಕ ಸಾಲಿನಲ್ಲಿ ಪ.ಪೂ. ಶಿಕ್ಷಣ ಇಲಾಖೆಯಿಂದ ಈಚೆಗೆ ನಗರದಲ್ಲಿ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಬಾಲಕಿಯರ ವಾಲಿಬಾಲ್ ಪಂದ್ಯಾವಳಿಯಲ್ಲಿ ವಿಜೇತರಾಗಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಕಾಲೇಜು ಸಂಸ್ಥಾಪಕ ಅಧ್ಯಕ್ಷರಾದ ಡಾ. ವಿಜಯಲಕ್ಷ್ಮಿ ವೀರಚಮಾನೇನಿ, ಪ್ರಾಂಶುಪಾಲ ಜಿ. ವಿನೋದ್, ನಟರಾಜ್ ವಿಜೇತ ಮಕ್ಕಳಿಗೆ ಅಭಿನಂದಿಸಿದ್ದಾರೆ.

# ಪರಿಸರ ಸ್ವಚ್ಛತೆ ಪ್ರತಿಯೊಬ್ಬ ನಾಗರಿಕನ ಕರ್ತವ್ಯ : ನ್ಯಾ. ಆರ್. ಚೇತನ್



ಜಗಳೂರು, ಸೆ. 25 - 'ಪರಿಸರ ಸ್ವಚ್ಛತೆ ಪ್ರತಿಯೊಬ್ಬ ನಾಗರೀಕನ ಆದ್ಯ ಕರ್ತವ್ಯ' ಎಂದು ಜೆಎಂಎಫ್‌ಸಿ ಮತ್ತು ಸಿವಿಲ್ ನ್ಯಾಯಾಧೀಶ ಆರ್. ಚೇತನ್ ಹೇಳಿದರು.

ಪಟ್ಟಣದ ರಾಮಾಲಯ ರಸ್ತೆಯಲ್ಲಿ ಪಟ್ಟಣ ಪಂಚಾಯಿತಿ ವತಿಯಿಂದ ಹಮ್ಮಿಕೊಂಡಿದ್ದ ಸ್ವಚ್ಛತಾ ಅಭಿಯಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪಟ್ಟಣ ಪಂಚಾಯಿತಿ ಕಸದ ವಾಹನಗಳಲ್ಲಿ ಪ್ರತಿನಿತ್ಯ ಹಸಿಕಸ- ಒಣಕಸಗಳನ್ನು ವಿಂಗಡಿಸಿ ವಿಲೇವಾರಿ ಮಾಡಬೇಕಿದೆ. ಮನೆಯ ಸುತ್ತಮುತ್ತ ಸ್ವಚ್ಚತೆ ಕಾಪಾಡಿಕೊಂಡು ಪಟ್ಟಣವನ್ನು ಸಾಂಕ್ರಾಮಿಕ ರೋಗಗಳಿಂದ ಮುಕ್ತಗೊಳಿಸಬೇಕು' ಎಂದು ಸಲಹೆ ನೀಡಿದರು.

ಪೌರ ಕಾರ್ಮಿಕರು ಸ್ವಚ್ಛತಾ ಕಾರ್ಯದಲ್ಲಿ ತೊಡಗುವಾಗ ಸುರಕ್ಷಿತ ಕಿಟ್ ಗಳನ್ನು ಧರಿಸಿ, ವೈಯಕ್ತಿಕ ಆರೋಗ್ಯಕ್ಕೆ ಒತ್ತುಕೊಡಬೇಕು'ಎಂದು ಸಲಹೆ ನೀಡಿದರು.

ಪ.ಪಂ. ಮುಖ್ಯಾಧಿಕಾರಿ ಲೋಕ್ಯಾನಾಯ್ಕ ಮಾತನಾಡಿ, ಸರ್ಕಾರದ ನಿರ್ದೇಶನದಂತೆ ರಾಜ್ಯವ್ಯಾಪಿ ಸೆ.14 ರಿಂದ ಅ. 2 ರವರೆಗೆ ಸ್ವಭಾವ ಸ್ವಚ್ಛತೆ-ಸಂಸ್ಕಾರ ಸ್ವಚ್ಛತೆ ಅಭಿಯಾನಕ್ಕೆ ಸಾರ್ವಜನಿಕರು ಕೈಜೋಡಿಸಬೇಕು. ಪೌರ ಕಾರ್ಮಿಕನ್ನು ಪ್ರತಿಯೊಬ್ಬರೂ ಗೌರವಿಸಬೇಕು. ಪಟ್ಟಣದ ಸಾರ್ವಜನಿಕ ಸ್ಥಳಗಳಲ್ಲಿ ಅನಗತ್ಯವಾಗಿ ಮಲೀನಗೊಳಿಸದೆ ಸೌಂದರ್ಯ ಕಾಪಾಡಬೇಕು'ಎಂದರು.

ಈ ಸಂದರ್ಭದಲ್ಲಿ ಪ.ಪಂ. ಅಧ್ಯಕ್ಷ ನವೀನ್ ಕುಮಾರ್, ಮಾಜಿ ಅಧ್ಯಕ್ಷ ಸಿದ್ದಪ್ಪ, ವಕೀಲ ವಂಶಿ ಕೃಷ್ಣ ಪಂ. ಆರೋಗ್ಯ ನಿರೀಕ್ಷಕ ಪ್ರಶಾಂತ್ ಸೇರಿದಂತೆ ಪೌರ ಕಾರ್ಮಿಕರು ಇದ್ದರು.

## ರಾಜ್ಯ ಮಟ್ಟಕ್ಕೆ ರಾಘವೇಂದ್ರ ಕಾಲೇಜು

ದಾವಣಗೆರೆ, ಸೆ.25- ನಗರದ ಶ್ರೀ ಶಾರದಾ ಮೆಡಿಕಲ್ ಅಕಾಡೆಮಿ, ರಾಘವೇಂದ್ರ ಹೈಟೆಕ್ ಪಿಯು ಕಾಲೇಜು ವಿದ್ಯಾರ್ಥಿಗಳು ಇಂದು ನಡೆದ ಜಿಲ್ಲಾ ಮಟ್ಟದ ಟೆನ್ನಿಕಾಯ್ಟ್ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಗಳಿಸಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

# ರ್‍ಯಾಗಿಂಗ್ ಮರೆತು ವಿದ್ಯಾಭ್ಯಾಸದ ಕಡೆ ಗಮನಕೊಡಿ

## ಡಿಆರ್‌ಎಂ ಕಾಲೇಜಿನ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ನ್ಯಾ. ಮಹಾವೀರ ಕರೆಣ್ಣವರ ಕಿವಿಮಾತು

ದಾವಣಗೆರೆ, ಸೆ. 25- ರ್‍ಯಾಗಿಂಗ್ ಅನ್ನುವುದು ವಿದ್ಯಾರ್ಥಿ ಜೀವನದಲ್ಲಿ ಬರುವ ಪೆಡಂಭೂತ. ಇದು ಒಂದು ಸಮಾಜಘಾತುಕ ಚಟುವಟಿಕೆ. ಸಾಮಾಜಿಕ, ಬೌದ್ಧಿಕ, ಧಾರ್ಮಿಕ ಮತ್ತು ಮೌಲ್ಯಿಕ ಚಟುವಟಿಕೆಗಳಿಗೆ ವಿರೋಧವಾಗಿರುವ ರ್‍ಯಾಗಿಂಗ್ ಅನ್ನು ಸಮಾಜದಿಂದ ಹೊಡೆದೋಡಿಸಬೇಕು. ರ್‍ಯಾಗಿಂಗ್ ಮರೆತು ವಿದ್ಯಾಭ್ಯಾಸದ ಕಡೆ ಗಮನಕೊಡಿ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಕರೆಣ್ಣವರ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ನಗರದ ಡಿಆರ್‌ಎಂ ಕಾಲೇಜಿನಲ್ಲಿ ರ್‍ಯಾಗಿಂಗ್ ವಿರೋಧಿ ವಿಷಯ ಕುರಿತು ನಿನ್ನೆ ವಿದ್ಯಾರ್ಥಿಗಳಿಗೆ ಏರ್ಪಡಿಸಲಾಗಿದ್ದ ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ಜೀವನ ಅಂದರೆ ಹೇಗೆ ಇರಬೇಕು, ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ ತಂದೆ - ತಾಯಿ, ಪಾಲಕ-ಪೋಷಕರು, ಶಿಕ್ಷಕರು, ಶಿಕ್ಷಣ ಸಂಸ್ಥೆಗಳು ಮತ್ತು ಸರ್ಕಾರಗಳು ಏನೆಲ್ಲಾ ಕ್ರಮಗಳನ್ನು ತೆಗೆದುಕೊಳ್ಳುತ್ತಾರೆ ಎನ್ನುವ ಬಗ್ಗೆ ವಿವರವಾಗಿ ವಿದ್ಯಾರ್ಥಿಗಳಿಗೆ ಮನಮುಟ್ಟುವಂತೆ ವಿವರಿಸಿ ಹೇಳಿದರು.

ವಕೀಲರಾದ ಸಿ.ಪಿ. ಅನಿತಾ ಮತ್ತು ಎವಿಕೆ ಕಾಲೇಜಿನ ಪ್ರಾಂಶುಪಾಲರಾದ ಕಮಲಮ್ಮ ಸೊಪ್ಪಿನ ಮುಖ್ಯ ಅತಿಥಿಗಳಾಗಿ ಉಪಸ್ಥಿತರಿದ್ದು ಮಾತನಾಡಿ, ವಿದ್ಯಾರ್ಥಿ ವಿದ್ಯಾರ್ಥಿನಿಯರು ತಮ್ಮ ತಂದೆ-ತಾಯಿಯರ ಆಶಯದಂತೆ ಉತ್ತಮ ನಡುವಳಿಗಳನ್ನು ಹೊಂದಿ ಉತ್ತಮ ವಿದ್ಯಾಭ್ಯಾಸ ಮಾಡಬೇಕೆಂದು ಕರೆ ನೀಡಿದರು. ಯಾವುದೇ ಕಾರಣಕ್ಕೂ ಇನ್ನೊಬ್ಬರನ್ನು ರ್‍ಯಾಗಿಂಗ್ ಮಾಡುವ ಮೂಲಕವಾಗಲೀ ಅಥವಾ ಇನ್ನಾವುದೇ ರೀತಿಯಿಂದಾಗಲೀ ತೊಂದರೆ ಕೊಡುವುದನ್ನು ಶಿಕ್ಷಣ ಸಂಸ್ಥೆಗಳು ಮತ್ತು ಸರ್ಕಾರ ಸಹಿಸಿಕೊಳ್ಳುವುದಿಲ್ಲ ಎಂದು ತಿಳಿಸಿದರು.



ಡಿ.ಆರ್.ಎಂ. ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿ ರೂಪಶ್ರೀ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿಗಳು ಒಳ್ಳೆಯ ಸಂಸ್ಕಾರ ಬೆಳೆಸಿಕೊಂಡು ತಂದೆ-ತಾಯಿಯರಿಗೆ ಮತ್ತು ಕಾಲೇಜಿಗೆ ಒಳ್ಳೆಯ ಹೆಸರು ತರಬೇಕೆಂದು ತಿಳಿಸಿದರು. ಈಗಾಗಲೇ ಕಾಲೇಜಿನಲ್ಲಿ ರ್‍ಯಾಗಿಂಗ್ ನಿಷೇಧ ಕುರಿತು ಸಮಿತಿಯನ್ನು ರಚಿಸಲಾಗಿದ್ದು ಆ ಮೂಲಕ ಯಾವುದೇ ಅಹಿತರ ಚಟುವಟಿಕೆಗಳು ಕಂಡುಬಂದಲ್ಲಿ ಸೂಕ್ತ ಕ್ರಮ ಜರುಗಿಸಲಾಗುವುದೆಂದು ಮತ್ತೊಮ್ಮೆಮಾಹಿತಿ ನೀಡಿದರು.

ಕಾಲೇಜಿನ ಐ ಕ್ಯೂ ಎ ಸಿ ಸಂಚಾಲಕ ಡಾ. ಟಿ. ಮಂಜುರಾಜ್, ಹಿರಿಯ ಪ್ರಾಧ್ಯಾಪಕ ಡಾ. ವಸಂತ ನಾಯಕ್ ಟಿ. ಉಪಸ್ಥಿತರಿದ್ದರು. ಕೋಶದ ಸಂಚಾಲಕರಾದ ಡಾ. ಸೌಮ್ಯ ಸ್ವಾಗತಿಸಿದರು. ಕು. ಸೌಂದರ್ಯ ನಿರೂಪಿಸಿದರು.





# ಹಿರಿಯ ವಿದ್ಯಾರ್ಥಿಗಳಿಂದ ಕಲಾ ಅನಾವರಣ

## ದೃಶ್ಯಕಲಾ ಮಹಾವಿದ್ಯಾಲಯದಲ್ಲಿ ಚಿತ್ರ, ಶಿಲ್ಪ, ವ್ಯಂಗ್ಯಚಿತ್ರ, ಕ್ಯಾಲಿಗ್ರಫಿಗಳ ಕೌಶಲ್ಯ ಪ್ರದರ್ಶನ

ದಾವಣಗೆರೆ, ಸೆ. 25 – ನಗರದ ದೃಶ್ಯಕಲಾ ಮಹಾವಿದ್ಯಾಲಯದ ವಜ್ರ ಮಹೋತ್ಸವದ ಪ್ರಯುಕ್ತ ಭಾನುವಾರ ಆಯೋಜಿಸಲಾಗಿದ್ದ ಕಲಾ ಪ್ರಾತ್ಯಕ್ಷಿಕೆಯಲ್ಲಿ, ಮಹಾವಿದ್ಯಾಲಯದ ಹಿರಿಯ ವಿದ್ಯಾರ್ಥಿಗಳು ಚಿತ್ರಗಳು, ಶಿಲ್ಪ, ವ್ಯಂಗ್ಯಚಿತ್ರ ಹಾಗೂ ಕ್ಯಾಲಿಗ್ರಫಿ ಮೂಲಕ ತಮ್ಮ ಕಲೆಯನ್ನು ಅನಾವರಣಗೊಳಿಸಿದರು.

ದಾವಣಗೆರೆ ಕಲಾಶಾಲೆಯ ಹಳೆಯ ವಿದ್ಯಾರ್ಥಿಗಳ ಸಂಘದ ಸದಸ್ಯರು ಸ್ಥಳದಲ್ಲೇ ಚಿತ್ರ ಹಾಗೂ ವ್ಯಂಗ್ಯಚಿತ್ರಗಳನ್ನು ರಚಿಸುವ ಹಾಗೂ ಮಣ್ಣಿನ ಶಿಲ್ಪ ರೂಪಿಸುವ ಮೂಲಕ ಹಾಲಿ ವಿದ್ಯಾರ್ಥಿಗಳಿಗೆ ತಮ್ಮ ಅನುಭವದ ಮಾರ್ಗದರ್ಶನ ನೀಡಿದರು.

500ಕ್ಕೂ ಹೆಚ್ಚು ಹಳೆಯ ವಿದ್ಯಾರ್ಥಿಗಳು ಸಂಭ್ರಮದಿಂದ ದಿನವಿಡೀ ನಡೆದ ಸಮಾರಂಭದಲ್ಲಿ ಪಾಲ್ಗೊಂಡಿದ್ದರು. ಇದೇ ವೇಳೆ ಮಹಾವಿದ್ಯಾಲಯಕ್ಕೆ 60 ವರ್ಷ ತುಂಬಿದ ಸಂಕೇತವಾಗಿ, 60 ಸಸಿಗಳನ್ನು ನೆಡಲಾಗಿತ್ತು. ಈ ಸಸಿಗಳಿಗೆ ಮಹಾವಿದ್ಯಾಲಯ ಆರಂಭವಾದ ಇಲ್ಲಿಯವರೆಗಿನ ವರ್ಷಗಳ ಫಲಕ ಅಳವಡಿಸಲಾಗಿತ್ತು. ಆಯಾ ವರ್ಷದ ಹಳೆಯ ವಿದ್ಯಾರ್ಥಿಗಳು ಸಸಿಗಳ ಎದುರು ಚಿತ್ರ ತೆಗೆಸಿಕೊಳ್ಳುವ ಮೂಲಕ ಸಂಭ್ರಮಿಸಿದರು. ಹಳೆಯ ಮಿತ್ರರನ್ನು ಭೇಟಿ ಮಾಡಿ ಕುಶಲೋಪರಿ ಹಂಚಿಕೊಂಡರು.

ಈ ಸಂದರ್ಭದಲ್ಲಿ ಅಬ್‌ಸ್ಟ್ರಾಕ್ಟ್ ಮಾದರಿಯ ಚಿತ್ರ ರೂಪಿಸುವಲ್ಲಿ ತೊಡಗಿಕೊಂಡಿದ್ದ 2005ರ ತಂಡದ ಹಿರಿಯ ವಿದ್ಯಾರ್ಥಿ ಪ್ರವೀಣ್ ಕುಮಾರ್ ಡಿ. ಜಿಂಗಾಡೆ, ಮುಂಬೈ ಹಾಗೂ ದೆಹಲಿಯಲ್ಲಿ ಪ್ರತಿ ವಾರ ಹೊಸ ಹೊಸ ಕಲಾ ಪ್ರದರ್ಶನಗಳು ನಡೆಯುತ್ತವೆ. ಅಲ್ಲಿ ವಿದ್ಯಾರ್ಥಿಗಳು ಕಲಿಯಲು ಅಪಾರ ಅವಕಾಶ ಇರುತ್ತದೆ. ದಾವಣಗೆರೆಯಲ್ಲಿ ಹಳೆಯ ವಿದ್ಯಾರ್ಥಿಗಳು ಸಂಗಮಿಸಿರುವ ಕಾರಣ ವಿದ್ಯಾರ್ಥಿಗಳು ಕಲಿಯಲು ಅಂತಹ ಅವಕಾಶ ಸಿಕ್ಕಂತಾಗಿದೆ ಎಂದರು.

ಧಾರವಾಡದ ಹಿರಿಯ ಕಲಾವಿದ ಶಶಿಧರ ಮಹದೇವಪ್ಪ ಲೋಹಾರ್ ಮಾತನಾಡಿ, ಬೆಂಗಳೂರಿನ ಕಲಾ ಶಾಲೆಗಳಲ್ಲಿ ಉದ್ಯೋಗಕ್ಕಾಗಿ ಕ್ಯಾಂಪಸ್ ಸಂದರ್ಶನ ನಡೆಯುತ್ತದೆ. ಇದರಿಂದ ಯುವ ಕಲಾವಿದರಿಗೆ ಹೆಚ್ಚಿನ ಅವಕಾಶಗಳು ಸಿಗುತ್ತವೆ. ದಾವಣಗೆರೆ ದೃಶ್ಯಕಲಾ ಮಹಾವಿದ್ಯಾಲಯದಲ್ಲೂ ಅಂತಹ ವ್ಯವಸ್ಥೆ ಮಾಡಬೇಕು ಎಂದರು.

ಇದರ ಜೊತೆಗೆ ದೃಶ್ಯಕಲಾ ಮಹಾವಿದ್ಯಾಲಯ ದಲ್ಲಿರುವ ಕಲಾ ಗ್ಯಾಲರಿ ಹೆಚ್ಚು ಪ್ರಚಾರ ಪಡೆಯಬೇಕು. ಆಗ ಕಲೆ ಹಾಗೂ ಕಲಾವಿದರು ಹೆಚ್ಚು ಜನರಿಗೆ ತಲುಪಲು ಸಾಧ್ಯವಾಗುತ್ತದೆ ಎಂದರು.

ಮುಧೋಳದ ರವಿ. ಎಲ್. ಪೂಜಾರಿ ಮಾತನಾಡಿ, 1997ರಲ್ಲಿ ಈ ಕಾಲೇಜಿನಲ್ಲಿ ಪದವಿ ಪಡೆದಿದ್ದೆ. ಈಗ ವೃತ್ತಿಪರ ವ್ಯಂಗ್ಯಚಿತ್ರಕಾರನಾಗಿದ್ದೇನೆ. ಸಮಾರಂಭಗಳಲ್ಲಿ ವ್ಯಕ್ತಿಗಳ ವ್ಯಂಗ್ಯಚಿತ್ರ ರೂಪಿಸುತ್ತೇನೆ. ಮೂರು ಗಂಟೆಯ ಶ್ರಮಕ್ಕೆ 15ರಿಂದ 20 ಸಾವಿರ ರೂ.ಗಳ ಸಂಭಾವನೆ ದೊರೆಯುತ್ತಿದೆ ಎಂದರು.

2009ರ ತಂಡದ ಮಹಲಿಂಗ ಶಂಕರ ನಿಪ್ಪಾಣಿ ಮಾತನಾಡಿ, ಬೆಂಗಳೂರಿನಂತಹ ನಗರಗಳಲ್ಲಿ ಕಲಾವಿದರಿಗೆ ಹೆಚ್ಚಿನ ಬೇಡಿಕೆ ಇದೆ.

ಡಿಜಿಟಲ್ ತಂತ್ರಜ್ಞಾನ ಹಾಗೂ ಕಂಪ್ಯೂಟರ್‌ಗಳು ಅವಕಾಶದ ಬಾಗಿಲು ತೆರೆದಿವೆ. ಜಾಹೀರಾತು, 3ಡಿ, ವಿಎಫ್‌ಎಕ್ಸ್ ಮುಂತಾದ ವಲಯಗಳಲ್ಲಿ ಅವಕಾಶಗಳಿವೆ. ಕಲಾ ವಿದ್ಯಾರ್ಥಿಗಳು ಇಂತಹ ಅವಕಾಶಗಳನ್ನು ಹುಡುಕಿಕೊಂಡು ಮುಂದೆ ಬರಬೇಕಿದೆ ಎಂದರು.

# ದಾವಣಗೆರೆ - ಶಿವಮೊಗ್ಗ ನೇರ ಬಸ್ಸಿನ ಸಂಚಾರಕ್ಕೆ ಅಭಿನಂದಿಸಿದ ಪ್ರತಿಷ್ಠಾನ

ದಾವಣಗೆರೆ, ಸೆ. 25 - ನಗರದಿಂದ ಶಿವಮೊಗ್ಗ ನಗರಕ್ಕೆ ನೇರ ಬಸ್ಸಿನ ಅಭಾವದ ಬಗ್ಗೆ ಜಿಲ್ಲಾ ಮಂತ್ರಿಗಳಿಗೆ ಮತ್ತು ಸಂಸತ್ ಸದಸ್ಯರಿಗೆ ಮತ್ತು ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ ಕೆಲವೇ ದಿನಗಳಲ್ಲಿ ಬಸ್ ಸಂಚಾರ ಆರಂಭಿಸಿರುವುದಕ್ಕೆ ಕಿತ್ತೂರು ರಾಣಿ ಚೆನ್ನಮ್ಮ ಪ್ರತಿಷ್ಠಾನ ಅಭಿನಂದಿಸಿದೆ.

ನಗರದ ಬಸ್ ನಿಲ್ದಾಣಕ್ಕೆ ಚಾಲನೆ ನೀಡುವ ಮೂಲಕ ಸದರಿ ಬಸ್ ಸ್ಟ್ಯಾಂಡ್‌ಗೆ ಮಾಜಿ ನಗರ ಸಭಾಧ್ಯಕ್ಷರು, ಮಾಜಿ ಶಾಸಕರು ಆದ ಕಾಂ. ಪಂಪಾಪತಿ ಅವರ ಹೆಸರನ್ನು ನಾಮಕರಣ ಮಾಡುವುದಾಗಿ ಘೋಷಿಸಿರುವುದರಿಂದ ಶಾಸಕ ಶಾಮನೂರು ಶಿವಶಂಕರಪ್ಪ, ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಹಾಗೂ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರಿಗೆ ಪ್ರತಿಷ್ಠಾನದ ಪದಾಧಿಕಾರಿಗಳಾದ ಡಾ. ಕೆ.ಎಸ್. ಗಂಗಾಧರ, ಹೆಚ್. ಜಯಣ್ಣ, ಕಾಯಿಪೇಟೆ ಹಾಲೇಶ್, ಬಿ.ವಿ. ರಾಜಶೇಖರ, ಅಂಜಿನಪ್ಪ ವಕೀಲರು, ಎ.ಎಸ್. ಮೃತ್ಯುಂಜಯ, ಕೊಳೇನಹಳ್ಳಿ ಶರಣಪ್ಪ, ಮಲ್ಲಿಕಾರ್ಜುನ ಕಟ್ಟಿಮನಿ, ವಿ. ಶಿವಮೂರ್ತಿ ಸ್ವಾಮಿ, ಗೀತಾ ಪ್ರಶಾಂತ್, ಶ್ರೀಮತಿ ಶೈಲಜಾ, ಎಸ್.ಎಂ. ಚರಂತಿ ಮಠ್, ಪಿ. ಮಂಜುನಾಥ್, ಅಕ್ಕಿ ರಾಮಚಂದ್ರ ಹೆಚ್, ಕೋಗುಂಡಿ ಸುರೇಶ್, ಅಣಜಿ ಪ್ರಶಾಂತ್ ಶೆಟ್ರು ಅಭಿನಂದಿಸಿದ್ದಾರೆ.

# ನಗರದಲ್ಲಿ ವಚನಾಮೃತ ಬಳಗದಿಂದ ಶಿಕ್ಷಕರ ದಿನಾಚರಣೆ

ದಾವಣಗೆರೆ, ಸೆ. 25- ಪಂ. ಪುಟ್ಟರಾಜ ಸೇವಾ ಸಮಿತಿ, ಜಿಲ್ಲಾ ಮಹಿಳಾ ಘಟಕ ಹಾಗೂ ವಚನಾಮೃತ ಬಳಗದವರಿಂದ ಶಿಕ್ಷಕರ ದಿನಾಚರಣೆ ಮತ್ತು ಉಭಯ ಗುರುಗಳಾದ ಪುಟ್ಟರಾಜ ಗವಾಯಿಗಳ ಹಾಗೂ ಪಂಚಾಕ್ಷರಿ ಗವಾಯಿಗಳ ಸ್ಮರಣೋತ್ಸವವನ್ನು ಎಸ್.ಬಿ.ಸಿ. ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿತ್ತು.

ಸೌಮ್ಯ ಸತೀಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾಲೇಜಿನ ಹಿರಿಯ ಪ್ರಾಧ್ಯಾಪಕರಾದ ಭಾಗ್ಯಶ್ರೀ ಹುಬ್ಬೀಕರ್ ಅವರನ್ನು ಸನ್ಮಾನಿಸಿ, ಗೌರವಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಮಂಜುನಾಥ್ ಮಾತನಾಡಿ, ಶರಣ ಸಂಸ್ಕೃತಿ ಉಳಿಯಬೇಕು, ಅದಕ್ಕಾಗಿ ನಾವು ನೀವೆಲ್ಲಾ ಶ್ರಮಿಸಬೇಕು, ವಚನಗಳನ್ನು ಕಲಿಯಬೇಕು ಎಂದರು. ಮುಖ್ಯ ಅತಿಥಿಯಾಗಿ ಉಪಸ್ಥಿತರಿದ್ದ ಮಂಗಳ ಗೌರಿ, ಸುಶ್ರಾವ್ಯವಾಗಿ ಹಾಡು ಹೇಳಿ ವಿದ್ಯಾರ್ಥಿಗಳಿಗೆ ಗುರುಗಳ ಜೀವನ ಚರಿತ್ರೆ ತಿಳಿಸಿದರು.

ಮಮತಾ ನಾಗರಾಜ್ ಅವರು ಪ್ರಾಸ್ತಾವಿಕ ನುಡಿಯಲ್ಲಿ ವೇದಿಕೆ ಹಾಗೂ ಬಳಗದ ಚಟುವಟಿಕೆಗಳ ಬಗ್ಗೆ ಮತ್ತು ವಿದ್ಯಾರ್ಥಿಗಳು ಹಾಗೂ ಶಿಕ್ಷಕರ ಜವಾಬ್ದಾರಿ ಬಗ್ಗೆ ತಿಳಿಸಿದರು.




ಶಾಂತ ಶಿವಶಂಕರ್ ಸ್ವಾಗತಿಸಿದರು. ವಚನಾಮೃತ ಬಳಗದವರಿಂದ ಪ್ರಾರ್ಥನೆ ಸಲ್ಲಿಸಲಾಯಿತು. ಮಧುಮತಿ ಗಿರೀಶ್ ಹಾಗೂ ಸೌಮ್ಯ ಬಸರವರಾಜ್‌ವರು ಮುಖ್ಯ ಅತಿಥಿಗಳ ಪರಿಚಯ ಮಾಡಿದರು. ದೀಪ ಕಿರಣ್ ನಿರೂಪಿಸಿದರು.

ಶಶಿಕಲಾ ವಾಲಿ, ಶಾಂತ ಶಿವಶಂಕರ್, ಲತಾ ಕಪ್ಪಾಳಿ, ಸುಮಾ ಕೊಟ್ರೇಶ್, ಸತ್ಯಭಾಮ, ಗಿರಿಜಾ ಬಿಲ್ಲಳ್ಳಿ, ಬಳಗದ ಸದಸ್ಯರು ಮತ್ತು ಕಾಲೇಜಿನ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಎಲೆಬೇತೂರು ಶಾಲೆಯಲ್ಲಿ ಲಿಂ. ಶಿವಕುಮಾರ ಶ್ರೀಗಳಿಗೆ ಪುಷ್ಪಾಂಜಲಿ



ದಾವಣಗೆರೆ,ಸೆ. 25 - ಎಲೆಬೇತೂರಿನ ಶ್ರೀ ಕೊಂಡಜ್ಜಿ ಬಸಪ್ಪ ಪ್ರೌಢಶಾಲೆ ಮತ್ತು ಶ್ರೀ ತರಳಬಾಳು ಹಿರಿಯ ಪ್ರಾಥಮಿಕ ಶಾಲೆಗಳ ಸಂಯುಕ್ತಾಶ್ರಯದಲ್ಲಿ ಶ್ರೀ ಶಿವಕುಮಾರ ಶಿವಾಚಾರ್ಯ ಸ್ವಾಮಿಗಳ 32ನೇ ಶ್ರದ್ಧಾಂಜಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಸಮಾರಂಭದ ಅಧ್ಯಕ್ಷತೆಯನ್ನು ಪ್ರೌಢಶಾಲಾ ಸ್ಥಳೀಯ ಸಲಹಾ ಸಮಿತಿಯ ಅಧ್ಯಕ್ಷ ಎಂ. ಬಸವರಾಜಪ್ಪ ವಹಿಸಿದ್ದರು. ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಅಧ್ಯಾಪಕ ಹೆಚ್. ಎಸ್. ದ್ಯಾಮೇಶ್ ಅವರನ್ನು ಸನ್ಮಾನಿಸಿ, ಗೌರವಿಸಲಾಯಿತು. ಕನ್ನಡ ಸಾಹಿತ್ಯ ಪರಿಷತ್‌ನ ನಿರ್ದೇಶಕ ಷಡಕ್ಷರಪ್ಪ, ಸಲಹಾ ಸಮಿತಿಯ ಕಾರ್ಯದರ್ಶಿ ವಿರೂಪಾಕ್ಷಪ್ಪ, ಸದಸ್ಯರಾದ ನಾರದಮುನಿ ಗೌಡರು, ಹಳ್ಳಿಕೆರೆ ರಾಜಣ್ಣ, ಮುಖ್ಯೋಪಾಧ್ಯಾಯಿನಿ ಬಿ. ಎಂ. ಶಶಿಕಲಾ ಮೊದಲಾದವರು ಉಪಸ್ಥಿತರಿದ್ದರು.

ಆರಂಭದಲ್ಲಿ ಪ್ರೌಢಶಾಲೆಯ ವಿದ್ಯಾರ್ಥಿಗಳು 'ಶಿವಯೋಗಿ ಸಿದ್ಧರಾಮೇಶ್ವರ' ನಾಟಕ ಪ್ರದರ್ಶಿಸಿದರೆ, ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ವಚನ ನೃತ್ಯರೂಪಕ ನೀಡಿದರು. ಇದೇ ಸಂದರ್ಭದಲ್ಲಿ ಶಾಲಾ ಕಟ್ಟಡದ ಸ್ಥಳ ದಾನಿಗಳ ನಾಮಫಲಕವನ್ನು ಮಾಗೋಡು ಕೊಟ್ರೇಶ್ ಅನಾವರಣಗೊಳಿಸಿದರು. ಯಶವಂತ ವಚನಗೀತೆ ಹಾಡಿದರು. ಅಧ್ಯಾಪಕಿ ಎಸ್. ಅನಿತಾ ಸ್ವಾಗತಿಸಿದರೆ, ಎಸ್. ಆರ್. ನಾಗರಾಜ್ ವಂದಿಸಿದರು. ಅಧ್ಯಾಪಕ ಡಾ. ಎಸ್. ಓ. ಷಣ್ಮುಖಪ್ಪ ಕಾರ್ಯಕ್ರಮ ನಿರ್ವಹಿಸಿದರು. ಶಿವಕುಮಾರ ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾಂಜಲಿ ಅರ್ಪಿಸಲಾಯಿತು.

## ಸಾಹಿತಿ ಸರೋಜ ನಾಗರಾಜ್ ಕವನ ದಾವಿವಿ ಪಠ್ಯಕ್ಕೆ ಆಯ್ಕೆ

(1ನೇ ಪುಟದಿಂದ) ನಿರ್ಧರಿಸಿದೆ.

ಈ ಸಂಬಂಧ ಅಧ್ಯಯನ ಮಂಡಳಿ ಅಧ್ಯಕ್ಷ ಡಾ. ಜೋಗಿನಕಟ್ಟೆ ಮಂಜುನಾಥ ಮತ್ತು ಸಂಪಾದಕರಾಗಿರುವ ಚಳ್ಳಕೆರೆಯ ಹೆಚ್.ಪಿ.ಪಿ.ಸಿ. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸ್ನಾತಕೋತ್ತರ ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕ ಪ್ರೊ. ಎ.ಎಸ್. ಸತೀಶ್ ಅವರು ಕವನ ಪ್ರಕಟಣೆಗೆ ಸರೋಜ ನಾಗರಾಜ್ ಅವರ ಅನುಮತಿ ಪಡೆದಿದ್ದಾರೆ.

ತಮ್ಮ ಬಾಲ್ಯದಿಂದಲೇ ಸಾಹಿತ್ಯದ ಕೃಷಿ ಆರಂಭಿಸಿದ ಸರೋಜ ನಾಗರಾಜ್, ಸಾಹಿತ್ಯ ಕ್ಷೇತ್ರದ ಜೊತೆಗೆ ಹವ್ಯಾಸಿ ಪತ್ರಕರ್ತರೂ ಆಗಿದ್ದಾರೆ. ಅವರ ರಚನೆಯ ಕವಿತೆ ಮತ್ತು ಲೇಖನಗಳು ಜನತಾವಾಣಿ ಸೇರಿದಂತೆ ಹಲವಾರು ಪತ್ರಿಕೆಗಳಲ್ಲಿ ಪ್ರಕಟವಾಗಿವೆ.

ಹಲವು ಕೃತಿಗಳನ್ನು ಪ್ರಕಟಿಸಿರುವ ಸರೋಜ ಅವರ ಸಾಹಿತ್ಯ ಕ್ಷೇತ್ರದ ಸೇವೆಯನ್ನು ಪರಿಗಣಿಸಿ ಸಾಮಾಜಿಕ ಸಂಘಟನೆಗಳು ಪ್ರಶಸ್ತಿಗಳನ್ನು ನೀಡಿ ಗೌರವಿಸಿವೆ.

# ಗಾಂಧೀಜಿ ಆಶಯದಂತೆ ಶಾಂತಿ ಪ್ರಿಯರಾಗೋಣ

## ಮಾನವೀಯತೆಗಾಗಿ ನಡೆದ ಜಾಥಾಕ್ಕೆ ಚಾಲನೆ ನೀಡಿದ ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ



ದಾವಣಗೆರೆ, ಸೆ.25- ಗಾಂಧೀಜಿಯವರ ಆಶಯದಂತೆ 'ಮಾನವೀಯತೆಗಾಗಿ ನಡೆ' ಮೂಲಕ ನಾವೆಲ್ಲರೂ ಶಾಂತಿ ಪ್ರಿಯರಾಗೋಣ ಎಂದು ಜಿಲ್ಲಾಧಿಕಾರಿ ಹಾಗೂ ರೆಡ್ ಕ್ರಾಸ್ ಸೊಸೈಟಿಯ ಗೌರವಾಧ್ಯಕ್ಷ ಗಂಗಾಧರಸ್ವಾಮಿ ಜಿ.ಎಂ ತಿಳಿಸಿದರು.

ಜಿಲ್ಲಾಡಳಿತ ಹಾಗೂ ರೆಡ್ ಕ್ರಾಸ್ ಸಂಸ್ಥೆ ವತಿಯಿಂದ ವಿಶ್ವ ಶಾಂತಿ ದಿನಾಚರಣೆ ಅಂಗವಾಗಿ ಇಂದು ಹಮ್ಮಿಕೊಳ್ಳಲಾಗಿದ್ದ ಮಾನವೀಯತೆಗಾಗಿ ನಡೆದ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗಾಂಧೀಜಿಯವರನ್ನು ಇಂದಿನ ದಿನಮಾನಗಳಲ್ಲಿ ಮತ್ತು ಮುಂದಿನ ದಿನಮಾನಗಳಲ್ಲಿ ಯಾಕೆ ಅವರು ಜೀವಂತವಾಗಿದ್ದಾರೆ ಎಂಬುದಕ್ಕೆ, ಇವತ್ತು ನಾವೆಲ್ಲರೂ ಸೇರಿ ಮಾಡುತ್ತಿರುವ ಶಾಂತಿ ನಡೆಯೇ ಸಾಕ್ಷಿಯಾಗಿದೆ ಎಂದು ತಿಳಿಸಿದರು.

ಈ ದಿನ ರಾಜ್ಯದ 31 ಜಿಲ್ಲೆಗಳಲ್ಲೂ ವಿಶ್ವ ಶಾಂತಿ ದಿನಾಚರಣೆ ಪ್ರಯುಕ್ತ ಮಾನವೀಯತೆಗಾಗಿ ನಡಿಗೆ ಜಾಥಾ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಜಾಥಾದಲ್ಲಿ ಅಶಾಂತಿ ತೊಲಗಿ, ಶಾಂತಿ ನೆಲೆಸಲಿ, ರಷ್ಯಾ - ಉಕ್ರೇನ್ ಯುದ್ಧ ನಿಲ್ಲಲಿ. ಬಾಂಗ್ಲಾ ದೇಶದಲ್ಲಿ ಶಾಂತಿ ನೆಲೆಸಲಿ, ಇಸ್ರೇಲ್ ಪ್ಯಾಲೆಸ್ಟೈನ್ ಯುದ್ಧ ನಿಲ್ಲಲಿ, ಮಾನವೀಯತೆಯಿಂದ ಮಾತ್ರ ವಿಶ್ವ ಶಾಂತಿ ಸಾಧ್ಯ ಎಂಬ ಘೋಷವಾಕ್ಯದೊಂದಿಗೆ ಜಾಥಾ ಸಾಗಿತು.

ಜಾಥಾದಲ್ಲಿ ದಾವಣಗೆರೆ - ಹರಿಹರ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ, ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿಯಾದ ಎಂ.ವಿ. ಶಿವಕುಮಾರ್ ಹಾಗೂ ಕುಂದುವಾಡ ವಾಯುವಿಹಾರಿಗಳ ಬಳಗ, ಅಸಂಘಟಿತ ಕಾರ್ಮಿಕರ ಸಂಘ, ವಿ.ಎಸ್.ಪ್ಯಾರಾಮೆಡಿಕಲ್ ಕಾಲೇಜ್, ಎಂ.ಎಸ್.ವಿ ಕಾಲೇಜ್, ಮಾಕನೂರು ಮಲ್ಲೇಶಪ್ಪ ಕಾಲೇಜ್, ಸರ್ಕಾರಿ ಪ್ರಥಮ ದರ್ಜೆ ಕಾಲೇಜ್, ಡಿ.ಆರ್.ಎಂ ಕಾಲೇಜ್, ಜೈನ್ ಇಂಜಿನಿಯರಿಂಗ್ ಕಾಲೇಜು, ಸಿದ್ದಗಂಗಾ ಕಾಲೇಜ್, ಎಸ್.ಜೆ.ವಿ.ಪಿ ಕಾಲೇಜ್, ಎಂ.ಇ.ಎಸ್ ಕಾಲೇಜಿನ ವಿದ್ಯಾರ್ಥಿಗಳು, ರೆಡ್ ಕ್ರಾಸ್ ಸಿಬ್ಬಂದಿಗಳು ಇದ್ದರು.

## ಮಹಿಳೆ ಕೊಂದು 59 ತುಂಡು ಮಾಡಿದ್ದವ ಹಂತಕ ಆತ್ಮಹತ್ಯೆ

(1ನೇ ಪುಟದಿಂದ) ಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ ಎಂದು ತಿಳಿದುಬಂದಿದೆ.

ಮಹಾಲಕ್ಷ್ಮಿ ಜೊತೆ ಫ್ಯಾಷನ್ ಫ್ಯಾಕ್ಟರಿಯಲ್ಲಿ ಕೆಲಸ ಮಾಡುತ್ತಿದ್ದ ಟೀಮ್ ಹೆಡ್ ಮುಕ್ತಿ ರಂಜನ್ ರಾಯ್ ಆಕೆಯನ್ನು ಕೊಂದಿದ್ದಾನೆ ಎಂಬ ಸತ್ಯಾಂಶ ಬಯಲಾಗಿತ್ತು.

ನಿನ್ನೆ ಭದ್ರಕ್ ಗ್ರಾಮಕ್ಕೆ ಬಂದಿದ್ದ ಮುಕ್ತಿ ರಂಜನ್ ಕೆಲಕಾಲ ಮನೆಯಲ್ಲಿದ್ದ ಬಳಿಕ ರಾತ್ರಿ ಮನೆಯಿಂದ ಹೊರ ಹೋಗಿದ್ದನು. ಇಂದು ಬೆಳಗ್ಗೆ ಕುಳೇಪದ ಸ್ಮಶಾನದ ಬಳಿ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ತಿಳಿದುಬಂದಿದೆ.

# ಕೊಬ್ಬು ಬಳಸಿ ಲಡ್ಡು ತಯಾರಿಕೆ : ಕ್ರಮಕ್ಕೆ ರಾಣೇಬೆನ್ನೂರು ಧಾರ್ಮಿಕ ಸಂಘದ ಆಗ್ರಹ



ರಾಣೇಬೆನ್ನೂರು

ರಾಣೇಬೆನ್ನೂರು, ಸೆ.25 - ಆಂಧ್ರಪ್ರದೇಶದ ಶ್ರೀ ಬಾಲಾಜಿ ದೇವಸ್ಥಾನದಲ್ಲಿ ವಿತರಿಸಲಾಗುವ ಲಡ್ಡು ತಯಾರಿಕೆಯಲ್ಲಿ ಪ್ರಾಣಿಗಳ ಕೊಬ್ಬು ಬಳಸಿದ ಹಿಂದೂ ವಿರೋಧಿಗಳಿಗೆ ಕಠಿಣ ಶಿಕ್ಷೆ ಕೊಡಿಸುವಂತೆ ದೇಶದ ಪ್ರಧಾನ ಮಂತ್ರಿಗಳಿಗೆ ಒತ್ತಾಯಿಸಿದ ಮನವಿ ಪತ್ರವನ್ನು ದೇವಸ್ಥಾನ, ಮಠ ಹಾಗೂ ಧಾರ್ಮಿಕ ಮಹಾ ಸಂಘದ ವತಿಯಿಂದ ತಹಶೀಲ್ದಾರರಿಗೆ ಸಲ್ಲಿಸಲಾಯಿತು.

ಆಂಧ್ರ ಪ್ರದೇಶದ ಮಾಜಿ ಮುಖ್ಯಮಂತ್ರಿ ಜಗನ್‌ಮೋಹನ್ ರೆಡ್ಡಿ ಅವರ ತಂದೆ ರಾಜಶೇಖರ ರೆಡ್ಡಿ ಕ್ರಿಶ್ಚಿಯನ್ ಧರ್ಮ ಸ್ವೀಕರಿಸಿದ್ದು, ಆ ಧರ್ಮದ ಪ್ರಚಾರಕ್ಕೆ ಅರ್ಚಕರ ನೇಮಕ, ಲಾಡು ತಯಾರಿಕೆ ಗುತ್ತಿಗೆ ಮುಂತಾದ ಚಟುವಟಿಕೆ ನಡೆಸಿ ಹಿಂದೂಗಳ ಧಾರ್ಮಿಕ ಶ್ರದ್ಧಾ ಭಕ್ತಿಗಳಿಗೆ ಅವಮಾನ ಮಾಡಿದ್ದರು. ನಂತರದಲ್ಲಿ ಮುಖ್ಯಮಂತ್ರಿಗಳಾದ ಜಗನ್‌ಮೋಹನ್ ರೆಡ್ಡಿ ಸಹ ತಂದೆಯಂತೆ ಹಿಂದೂ ವಿರೋಧಿ ಭಾವನೆ ಹೊಂದಿದವರಾಗಿದ್ದು ಪ್ರಧಾನಮಂತ್ರಿಗಳು ಈ ಬಗ್ಗೆ ಸೂಕ್ತ ಕ್ರಮ ಜರುಗಿಸುವಂತೆ ಒತ್ತಾಯಿಸಿ ಹಲವು ಬೇಡಿಕೆಗಳನ್ನು ಮನವಿಯಲ್ಲಿ ಪ್ರಸ್ತಾಪಿಸಲಾಗಿದೆ.

ಸಂಘಟನೆಗಳ ಮುಖ್ಯಸ್ಥರಾದ ಜಿ.ಜಿ. ಹೊಟ್ಟಿಗೌಡ್ರ, ಪ್ರಕಾಶ ಬುರಡಿಕಟ್ಟಿ, ಹನುಮಂತಪ್ಪ ಹೆದ್ದೇರಿ, ಶಿವಾನಂದ ಸಾಲಗೇರಿ, ವಿಜಯ ಹುಗ್ಗಿ, ಶಿವಯೋಗಿ ಹಳ್ಳಳ್ಳಿ, ಮಾಲತೇಶ ತಳವಾರ, ಬಸವರಾಜ ಅಂತರವಳ್ಳಿ ಮತ್ತಿತರರಿದ್ದರು.

## ಬೆಳವನೂರಿನ ದೇವಸ್ಥಾನಕ್ಕೆ ಧರ್ಮಸ್ಥಳದಿಂದ 2 ಲಕ್ಷ ರೂ. ಚೆಕ್



ದಾವಣಗೆರೆ,ಸೆ.25- ಹದಡಿ ವಲಯದ ಬೆಳವನೂರು ಗ್ರಾಮದ ಮರುಳಸಿದ್ದೇಶ್ವರ ಮತ್ತು ದಾನಪ್ಪ ನಗರದಲ್ಲಿ ನಿರ್ಮಾಣ ಗೊಳ್ಳುತ್ತಿರುವ ಶ್ರೀ ವಿನಾಯಕ, ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳದಿಂದ 2 ಲಕ್ಷ ರೂ. ಚೆಕ್ಕನ್ನು ನೀಡಲಾಯಿತು. ಬೆಳವನೂರು ಗ್ರಾಮ ಪಂಚಾಯ್ತಿ ಉಪಾಧ್ಯಕ್ಷ ಮಹೇಂದ್ರನಾಥ, ಮಾಜಿ ಉಪಾಧ್ಯಕ್ಷ ಎಂ.ಪಿ. ನವೀನ್ ಕುಮಾರ್, ಜಿಲ್ಲಾ ಜನ ಜಾಗೃತಿ ವೇದಿಕೆಯ ಮಹಾಂತೇಶ್, ತಾಲ್ಲೂಕು ಯೋಜನಾಧಿಕಾರಿ ಶ್ರೀನಿವಾಸ್, ಮೇಲ್ವಿಚಾರಕರಾದ ಶಿವಪ್ರಸಾದ್, ದೇವಸ್ಥಾನ ಕಮಿಟಿ ಅಧ್ಯಕ್ಷ ಪ್ರಭುದೇವ, ಉಪಾಧ್ಯಕ್ಷ ನಾಗರಾಜ್ ಇತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಅಡಿಕೆ ದರ ಕುಸಿದರೆ, ನೀರು ಸಿಗದಿದ್ದರೆ ಕಷ್ಟ

**(1ನೇ ಪುಟದಿಂದ)** ಅನುದಾನದ ಕೊರತೆ ಇಲ್ಲ. ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಅಗತ್ಯ ಅನುದಾನ ಕಲ್ಪಿಸಲಾಗುತ್ತಿದೆ. ಎಲ್ಲಾ ತಾಲೂಕು ಕಚೇರಿಗಳಲ್ಲಿ ಜನರ ಬಳಕೆಗೆ ಶೌಚಾಲಯ ತೆರೆದಿರಿಸಲಾಗಿದೆ ಎಂದರು.

ಮುಂದಿನ ದಿನಗಳಲ್ಲಿ ದಸರಾ ಹಬ್ಬ ಸೇರಿದಂತೆ, ಅನೇಕ ಕಡೆ ಗಣೇಶಮೂರ್ತಿ ವಿಸರ್ಜನೆ ಇರುವುದರಿಂದ ಹೆಚ್ಚಿನ ನಿಗಾವಹಿಸಬೇಕು. ಕೆಲವು ಗ್ರಾಮೀಣ ಭಾಗದಲ್ಲಿ ಮನೆಯಿಂದ ಹೋದ ಒಂದು ಗಂಟೆಯಲ್ಲೇ ಕಳ್ಳತನ ಮಾಡಲಾಗಿದೆ ಎಂಬ ವರದಿಯಾಗಿದೆ. ಇದಾಗದಂತೆ ತಡೆಗಟ್ಟುವ ಮೂಲಕ ಮಹಿಳೆಯರ ಸರಗಳ್ಳತನ, ಮಹಿಳೆಯರು ಒಂಟಿಯಾಗಿ ಹೋಗುವಾಗ ಬೆದರಿಕೆ ಒಡ್ಡುವವರ ಮೇಲೆ ನಿಗಾವಹಿಸಲು ಕ್ಯಾಮೆರಾಗಳನ್ನು ಹೆಚ್ಚಳ ಮಾಡಲು ತಿಳಿಸಿ ಇದಕ್ಕಾಗಿ ಅಗತ್ಯವಿರುವ ಅನುದಾನದ ಅವಕಾಶ ಮಾಡಿಕೊಳ್ಳುವಂತೆ ಸಂಸದರು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ದಸರಾ ಹಬ್ಬ : ಸಂಚಾರ ದಟ್ಟಣೆ ಕಡಿಮೆಗೆ ರೈಲುಗಳಿಗೆ ತಾತ್ಕಾಲಿಕ ಹೆಚ್ಚುವರಿ ಬೋಗಿಗಳ ಜೋಡಣೆ

ದಸರಾ ಹಬ್ಬದ ಸಮಯದಲ್ಲಿ ಪ್ರಯಾಣಿಕರ ನಿರೀಕ್ಷಿತ ಹೆಚ್ಚುವರಿ ದಟ್ಟಣೆಯನ್ನು ಕಡಿಮೆಗೊಳಿಸುವ ಸಲುವಾಗಿ, ನೈಋತ್ಯ ರೈಲ್ವೆಯು 34 ರೈಲುಗಳಿಗೆ ತಾತ್ಕಾಲಿಕವಾಗಿ ಹೆಚ್ಚುವರಿ ಬೋಗಿಗಳನ್ನು ಜೋಡಿಸಲು ನಿರ್ಧರಿಸಲಾಗಿದೆ.

ಅಕ್ಟೋಬರ್ 4 ರಿಂದ 15 ರವರೆಗೆ ರೈಲು ಸಂಖ್ಯೆ 17301 ಮೈಸೂರು-ಬೆಳಗಾವಿ ಎಕ್ಸ್‌ಪ್ರೆಸ್, ಅಕ್ಟೋಬರ್ 1 ರಿಂದ 12 ರವರೆಗೆ ಬೆಳಗಾವಿ-ಮೈಸೂರು ಎಕ್ಸ್‌ಪ್ರೆಸ್ (17302), ಅಕ್ಟೋಬರ್ 2 ರಿಂದ 13 ರವರೆಗೆ ಮೈಸೂರು-ಚಾಮರಾಜನಗರ-ಮೈಸೂರು ಎಕ್ಸ್‌ಪ್ರೆಸ್ (06233/06234), ಅಕ್ಟೋಬರ್ 2 ರಿಂದ 13 ರವರೆಗೆ ಮೈಸೂರು-ಬಾಗಲಕೋಟೆ ಬಸವ ಎಕ್ಸ್‌ಪ್ರೆಸ್ (17307) ಮತ್ತು ಅಕ್ಟೋಬರ್ 3 ರಿಂದ 14 ರವರೆಗೆ ಬಾಗಲಕೋಟೆ-ಮೈಸೂರು ಬಸವ ಎಕ್ಸ್‌ಪ್ರೆಸ್ (17308), ಅಕ್ಟೋಬರ್ 1 ರಿಂದ 12 ರವರೆಗೆ ಎಸ್‌ಎಸ್‌ಎಸ್ ಹುಬ್ಬಳ್ಳಿ-ಮೈಸೂರು ಹಂಪಿ ಎಕ್ಸ್‌ಪ್ರೆಸ್ (16591), ಅಕ್ಟೋಬರ್ 4 ರಿಂದ 15 ರವರೆಗೆ ಮೈಸೂರು-ಎಸ್‌ಎಸ್‌ಎಸ್ ಹುಬ್ಬಳ್ಳಿ ಹಂಪಿ ಎಕ್ಸ್‌ಪ್ರೆಸ್ (16592), ಅಕ್ಟೋಬರ್ 2 ರಿಂದ 13 ರವರೆಗೆ ಮೈಸೂರು-ಪಂಢರಪುರ ಗೋಲಗುಂಬಜ್ ಎಕ್ಸ್‌ಪ್ರೆಸ್ (16535) ಮತ್ತು ಅಕ್ಟೋಬರ್ 3 ರಿಂದ 14 ರವರೆಗೆ ಪಂಢರಾಪುರ ಗೋಲಗುಂಬಜ್ ಎಕ್ಸ್‌ಪ್ರೆಸ್ (16536) ರೈಲುಗಳಿಗೆ ತಲಾ ಒಂದು ಸ್ಲೀಪರ್ ಕ್ಲಾಸ್ ಹೆಚ್ಚುವರಿ ಬೋಗಿಗಳನ್ನು ಜೋಡಿಸಲಾಗುತ್ತಿದೆ.

ಅಕ್ಟೋಬರ್ 3 ರಿಂದ 12 ರವರೆಗೆ ರೈಲು ಸಂಖ್ಯೆ 16227 ಮೈಸೂರು-ತಾಳಗುಪ್ಪ ಎಕ್ಸ್‌ಪ್ರೆಸ್ ಮತ್ತು ಅಕ್ಟೋಬರ್ 4 ರಿಂದ 13 ರವರೆಗೆ ತಾಳಗುಪ್ಪ-ಮೈಸೂರು



ಎಕ್ಸ್‌ಪ್ರೆಸ್ (16228) ರೈಲುಗಳಿಗೆ ತಲಾ ಎರಡು ಸ್ಲೀಪರ್ ಕ್ಲಾಸ್ ಹೆಚ್ಚುವರಿ ಬೋಗಿಗಳನ್ನು ಜೋಡಿಸಲಾಗುತ್ತಿದೆ.

ಅಕ್ಟೋಬರ್ 4 ರಿಂದ 13 ರವರೆಗೆ ರೈಲು ಸಂಖ್ಯೆ 06543/06544 ಮೈಸೂರು-ಚಾಮರಾಜನಗರ-ಮೈಸೂರು ಪ್ಯಾಸೆಂಜರ್ ಸ್ಪೆಷಲ್, ಅಕ್ಟೋಬರ್ 4 ರಿಂದ 13 ರವರೆಗೆ ತಾಳಗುಪ್ಪ-ಮೈಸೂರು ಕುವೆಂಪು ಎಕ್ಸ್‌ಪ್ರೆಸ್ (16221), ಅಕ್ಟೋಬರ್ 3 ರಿಂದ 12 ರವರೆಗೆ ಮೈಸೂರು-ತಾಳಗುಪ್ಪ ಕುವೆಂಪು ಎಕ್ಸ್‌ಪ್ರೆಸ್, ಅಕ್ಟೋಬರ್ 3 ರಿಂದ 12 ರವರೆಗೆ ಕೆಎಸ್‌ಆರ್ ಬೆಂಗಳೂರು-ಅರಸೀಕೆರೆ-ಕೆಎಸ್‌ಆರ್ ಬೆಂಗಳೂರು ಪ್ಯಾಸೆಂಜರ್ (06273/06274), ಅಕ್ಟೋಬರ್ 3 ರಿಂದ 12 ರವರೆಗೆ ಕೆಎಸ್‌ಆರ್ ಬೆಂಗಳೂರು-ಚನ್ನಪಟ್ಟಣ-ಕೆಎಸ್‌ಆರ್ ಬೆಂಗಳೂರು ಪ್ಯಾಸೆಂಜರ್ (06581/06582), ಅಕ್ಟೋಬರ್ 3 ರಿಂದ 12 ರವರೆಗೆ ಅರಸೀಕೆರೆ-ಮೈಸೂರು ಪ್ಯಾಸೆಂಜರ್ (06213), ಅಕ್ಟೋಬರ್ 5 ರಿಂದ 14 ರವರೆಗೆ ಮೈಸೂರು-ಅರಸೀಕೆರೆ ಪ್ಯಾಸೆಂಜರ್ (06214), ಅಕ್ಟೋಬರ್ 3 ರಿಂದ 12 ರವರೆಗೆ ಮೈಸೂರು-ಶಿವಮೊಗ್ಗ ಟೌನ್ ಎಕ್ಸ್‌ಪ್ರೆಸ್ (16225), ಅಕ್ಟೋಬರ್ 5 ರಿಂದ 14 ರವರೆಗೆ ಶಿವಮೊಗ್ಗ ಟೌನ್-ಮೈಸೂರು ಎಕ್ಸ್‌ಪ್ರೆಸ್ (16226), ಅಕ್ಟೋಬರ್ 3 ರಿಂದ 12 ರವರೆಗೆ ಶಿವಮೊಗ್ಗ ಟೌನ್-ಚಿಕ್ಕಮಗಳೂರು ಪ್ಯಾಸೆಂಜರ್ (07365), ಅಕ್ಟೋಬರ್ 5 ರಿಂದ 14 ರವರೆಗೆ ಚಿಕ್ಕಮಗಳೂರು-ಶಿವಮೊಗ್ಗ ಟೌನ್ ಪ್ಯಾಸೆಂಜರ್ (07366), ಅಕ್ಟೋಬರ್ 4 ರಿಂದ 13 ರವರೆಗೆ ಚಿಕ್ಕಮಗಳೂರು-ಯಶವಂತಪುರ-ಚಿಕ್ಕಮಗಳೂರು ಎಕ್ಸ್‌ಪ್ರೆಸ್ (16239/16240), ಅಕ್ಟೋಬರ್ 1 ರಿಂದ 12 ರವರೆಗೆ ಅರಸೀಕೆರೆ-ಮೈಸೂರು ಪ್ಯಾಸೆಂಜರ್ (06267), ಅಕ್ಟೋಬರ್ 4 ರಿಂದ 15 ರವರೆಗೆ ಮೈಸೂರು-ಅರಸೀಕೆರೆ ಪ್ಯಾಸೆಂಜರ್ (06268), ಅಕ್ಟೋಬರ್ 1 ರಿಂದ 12 ರವರೆಗೆ ಮೈಸೂರು-ಎಸ್‌ಎಂವಿಟಿ ಬೆಂಗಳೂರು ಪ್ಯಾಸೆಂಜರ್ (06269), ಅಕ್ಟೋಬರ್ 3 ರಿಂದ 14 ರವರೆಗೆ ಎಸ್‌ಎಂವಿಟಿ ಬೆಂಗಳೂರು-ಮೈಸೂರು (06270), ಅಕ್ಟೋಬರ್ 2 ರಿಂದ 13 ರವರೆಗೆ ಎಸ್‌ಎಂವಿಟಿ ಬೆಂಗಳೂರು-ಕಾರೈಕಲ್ ಎಕ್ಸ್‌ಪ್ರೆಸ್ (16529) ಮತ್ತು ಅಕ್ಟೋಬರ್ 3 ರಿಂದ 14 ರವರೆಗೆ ಕಾರೈಕಲ್-ಎಸ್‌ಎಂವಿಟಿ ಬೆಂಗಳೂರು ಎಕ್ಸ್‌ಪ್ರೆಸ್ ರೈಲುಗಳಿಗೆ ತಲಾ ಒಂದು ಸಾಮಾನ್ಯ ದ್ವಿತೀಯ ದರ್ಜೆ ಹೆಚ್ಚುವರಿ ಬೋಗಿಗಳನ್ನು ಜೋಡಿಸಲಾಗುತ್ತಿದೆ.

-ಡಾ. ಮಂಜುನಾಥ ಕನಮಡಿ
ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ
ನೈರುತ್ಯ ರೈಲ್ವೆ, ಹುಬ್ಬಳ್ಳಿ

# ನಂಜುಂಡ ಸ್ವಾಮಿ ಬಣದ ರೈತರಿಂದ ಪ್ರತಿಭಟನೆ



**ಜಗಳೂರು**

ಜಗಳೂರು, ಸೆ. 25 - ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ನಂಜುಂಡಸ್ವಾಮಿ ಬಣದ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ಪ್ರವಾಸಿ ಮಂದಿರದಿಂದ ಹೊರಟ ಪ್ರತಿಭಟನಾಕಾರರು ಅಧಿಕಾರಿಗಳ ವಿರುದ್ಧ ಘೋಷಣೆ ಕೂಗುತ್ತಾ ಮಹಾತ್ಮಗಾಂಧಿ ವೃತ್ತ, ಅಂಬೇಡ್ಕರ್ ವೃತ್ತದ ಮೂಲಕ ತಾಲ್ಲೂಕು ಪಂಚಾಯಿತಿ ಕಛೇರಿ ಮುಂಭಾಗ ಜಮಾಯಿಸಿ ತಾ.ಪಂ.ಇಓಗೆ ಮನವಿ ಸಲ್ಲಿಸಿದರು.

ತಾಲ್ಲೂಕು ಅಧ್ಯಕ್ಷ ಕೆ. ಬಸವರಾಜಪ್ಪ ಮಾತನಾಡಿ, ತಾಲ್ಲೂಕಿನ 22 ಗ್ರಾಮ ಪಂಚಾಯಿತಿಗಳಲ್ಲಿ ಅಧಿಕಾರಿಗಳು ಸಕ್ರಿಯವಾಗಿ ಕಾರ್ಯ ನಿರ್ವಹಿಸದೇ ಅಭಿವೃದ್ದಿ ಕುಂಠಿತವಾಗಿದೆ. ಪಿಡಿಓಗಳು ಸಾರ್ವಜನಿಕರ ಅಹವಾಲುಗಳನ್ನು ಸಕಾಲದಲ್ಲಿ ಸ್ವೀಕರಿಸಿ, ವಿಲೇವಾರಿಗೊಳಿಸದೇ ವಿಳಂಬ ಮಾಡುತ್ತಿದ್ದಾರೆ.

ಬೆಳೆಗಳು ಕಟಾವಿಗೆ ಬಂದಿದ್ದು ಪ್ರತಿ ಪಂಚಾಯಿತಿ ವ್ಯಾಪ್ತಿಯಲ್ಲಿ ರೈತರ ಜಮೀನುಗಳ ರಸ್ತೆ ಪಕ್ಕದಲ್ಲಿ ಜಂಗಲ್ ಕಟ್ಟಿಂಗ್ ಮಾಡುತ್ತಿಲ್ಲ. ಇ ಸ್ವತ್ತು ನೀಡಲು ಹಣದ ಬೇಡಿಕೆಯ ಕೂಗು ಕೇಳಿಬರುತ್ತಿವೆ. ಸಮರ್ಪಕ ಕುಡಿಯುವ ನೀರಿನ ಪೂರೈಕೆ, ಗ್ರಾಮಗಳಲ್ಲಿ ವಿದ್ಯುತ್ ದೀಪ, ಚರಂಡಿ ನಿರ್ಮಾಣ, ಸೇರಿದಂತೆ ಅಗತ್ಯ ಮೂಲಸೌಕರ್ಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಸಂಘಟನೆ ಜಂಟಿ ಕಾರ್ಯದರ್ಶಿ ಭರಮ ಸಮುದ್ರ ಕುಮಾರ್ ಮಾತನಾಡಿ,'ತಾಲ್ಲೂಕಿನ ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 14 ಮತ್ತು 15ನೇ ಹಣಕಾಸು ಅನುದಾನ ಸದ್ಬಳಕೆಯಾಗಬೇಕು. ಮನರೇಗಾ ಯೋಜನೆಯ ಕೂಲಿ ಕಾರ್ಮಿಕರ ಖಾತೆಗೆ ಸಕಾಲದಲ್ಲಿ ಹಣಪಾವತಿ ಯಾಗಬೇಕಿದೆ ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಂಘಟನೆ ಗೌರವಾಧ್ಯಕ್ಷ ಗುರುಸಿದ್ದಪ್ಪ, ಉಪಾಧ್ಯಕ್ಷ ಲೋಕೇಶ್, ಆರ್. ವಕೀಲ ಓಬಳೇಶ್ ಪ್ರಧಾನ ಕಾರ್ಯದರ್ಶಿ ಲಕ್ಷ್ಮಣನಾಯಕ, ಪದಾಧಿಕಾರಿಗಳಾದ ಖಾಸಿಂ ಸಾಹೇಬ್, ಪರಸಪ್ಪ ಚೌಡಪ್ಪ, ಮಂಜುನಾಥ್, ಪಾಲನಾಯಕ, ಶಿವಪ್ಪ, ಅಂಜಿನಪ್ಪ, ಸೇರಿದಂತೆ ಇದ್ದರು.

## ಹಲಗೇರಿ ಶ್ರೀ ಬನಶಂಕರಿ ಸಮಿತಿಗೆ ಆಯ್ಕೆ

ರಾಣೇಬೆನ್ನೂರು,ಸೆ.25- ತಾಲ್ಲೂಕಿನ ಹಲಗೇರಿ ಗ್ರಾಮದ ಶ್ರೀ ಬನಶಂಕರಿ ದೇವಸ್ಥಾನ ಸೇವಾ ಸಮಿತಿಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಅವಿರೋಧವಾಗಿ ನಡೆಯಿತು.

ನಿನ್ನೆ ನಡೆದ ಸರ್ವ ಸದಸ್ಯರ ಸಭೆಯಲ್ಲಿ ಬದ್ರೇಶ ಹೆದ್ದೇರಿ ಅಧ್ಯಕ್ಷ, ಸುಬ್ರಹ್ಮಣ್ಯ ಮಲ್ಲಾಡದ ಉಪಾಧ್ಯಕ್ಷ, ರವಿಕಿರಣ ಮಲ್ಲಾಡದ ಕಾರ್ಯದರ್ಶಿ, ಚೇತನ ರಿತ್ತಿ ಖಜಾಂಚಿ, ಅನಿಲ ಶಿಗ್ಲಿ, ಬಸವರಾಜ ಮಲ್ಲಾಡದ, ಚಂದ್ರಮ್ಮ ಹತ್ತಿಕಾಳ, ಕಿರಣ ಶಾಡಂಬಿ, ಶಿವಲೀಲಾ ಶಿಗ್ಲಿ, ಗಿರೀಶ ಮಲ್ಲಾಡದ, ಶಿವಾನಂದ ಬಾವಿಕಟ್ಟಿ, ಲಕ್ಷ್ಮಿ ಶಿಗ್ಲಿ, ನಾಗರಾಜ ಮಲ್ಲಾಡದ ಸದಸ್ಯರಾಗಿ ಆಯ್ಕೆಯಾಗಿದ್ದಾರೆ.

# ಧನಲಕ್ಷ್ಮಿ ಕ್ರೆಡಿಟ್ ಕೋ-ಆಪ್ ಸೊಸೈಟಿ ವಾರ್ಷಿಕ ಮಹಾಸಭೆ




ದಾವಣಗೆರೆ, ಸೆ.25- ನಗರದ ಧನಲಕ್ಷ್ಮಿ ಕ್ರೆಡಿಟ್‌ಕೋ-ಆಪರೇಟಿವ್‌ಸೊಸೈಟಿಯ ಮೂರನೇ ವಾರ್ಷಿಕ ಮಹಾಸಭೆಯು ವಿನೋಬನಗರ 2ನೇ ಮುಖ್ಯರಸ್ತೆ ಯಲ್ಲಿರುವ ಸೊಸೈಟಿ ಕಚೇರಿಯಲ್ಲಿ ಜರುಗಿತು.

ಸೊಸೈಟಿ ಅಧ್ಯಕ್ಷ ಮಂಜುನಾಥ್ ಎಸ್.ಭಟ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಂಸ್ಥೆಯು ಇನ್ನಷ್ಟು ಲಾಭದಾಯಕವಾಗಿ ಅಭಿವೃದ್ಧಿ ಸಾಧಿಸಲು ಎಲ್ಲ ಸದಸ್ಯರ ಸಹಕಾರ ಅಗತ್ಯವಾಗಿದ್ದು, ಬರಲಿರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಪ್ರಗತಿಗೆ ಆಡಳಿತ ಮಂಡಳಿಯವರು ಶ್ರಮಿಸಲಿದ್ದಾರೆ ಎಂದರು.

2023-24ನೇ ಸಾಲಿನ ವರದಿ ಮಂಡಿಸಿದ ಸಂಸ್ಥೆಯ ಕಾರ್ಯದರ್ಶಿ ರಾಮು ಬೆಳ್ಳೂಡಿ ನಾಗರಾಜ ಅವರು ನಿವ್ವಳ ಲಾಭ ವಿಲೇವಾರಿಯ ಅನಮೋದನೆ ಪಡೆದರು.

ಉಪಾಧ್ಯಕ್ಷ ಸತೀಶ್ ಜಿ.ರಾಯ್ಕರ್, ನಿರ್ದೇಶಕರಾದ ಪ್ರವೀಣ ರಾಯ್ಕರ್, ಸುಮಂಗಲ ಪಿ.ಭಟ್, ಸೂರಜ್ ಕೆ.ಎ, ಅರುಣ ಎಂ.ರಾಯ್ಕರ್, ನೀತಾ ಎಸ್.ಜಿ, ಉಷಾ ಎಂ, ರಾಘವೇಂದ್ರ ಕೆ. ರೇವಣಕರ್, ಜ್ಯೋತಿ ಲಕ್ಷ್ಮಿ ಬಿ.ಟಿ, ಮತ್ತು ವಾಣಿ ಎಂ.ಇ ಉಪಸ್ಥಿತರಿದ್ದರು.

ಬಿ.ಲೋಕೇಶ್ ಪ್ರಾರ್ಥಿಸಿದರು. ರೇಖಾ ರೇವಣಕರ್ ಸ್ವಾಗತಿಸಿದರು. ಬೆಟ್ಟಪ್ಪ ವಂದಿಸಿದರು. ಶ್ವೇತಾ ಪೈ ನಿರೂಪಿಸಿದರು.

# ಆದೇಶಕ್ಕೆ ತಲೆ ಬಾಗಲಿ

**(1ನೇ ಪುಟದಿಂದ)** ರಾಜ್ಯಪಾಲರು ತನಿಖೆಗೆ ಅನುಮತಿ ನೀಡಿದ್ದನ್ನು ರಾಜ್ಯ ಹೈಕೋರ್ಟ್ ಕ್ರಮಬದ್ಧ ಎಂದು ಹೇಳಿದೆ. ಇದೀಗ ವಿಶೇಷ ನ್ಯಾಯಾಲಯವೂ ಮುಡಾ ಹಗರಣದ ತನಿಖೆಗೆ ಸೂಚಿಸಿದ್ದು, ಸಿದ್ದರಾಮಯ್ಯ ವಿರೋಧ ಪಕ್ಷದ ನಾಯಕರಾಗಿದ್ದಾಗ ಹೇಳಿದ ಮಾತನ್ನು ನೆನಪಿಸಿಕೊಳ್ಳಬೇಕು ಎಂದರು.

ಮುಖ್ಯಮಂತ್ರಿಗಳ ತವರು ಜಿಲ್ಲೆ ಮೈಸೂರಿನ ಲೋಕಾಯುಕ್ತ ಪೊಲೀಸರಿಂದ ನ್ಯಾಯಯುತ ತನಿಖೆ ಅಸಾಧ್ಯ, ಮುಖ್ಯಮಂತ್ರಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ಸ್ವತಂತ್ರ ತನಿಖಾ ಸಂಸ್ಥೆ ಸಿಬಿಐ ತನಿಖೆಗೆ ವಹಿಸಿದಾಗ ಸಿದ್ದರಾಮಯ್ಯ ಗೌರವ ಹೆಚ್ಚುತ್ತದೆ.

ಮೈಸೂರಿನ ಸಾಮಾಜಿಕ ಕಾರ್ಯಕರ್ತ ಮತ್ತು ದೂರುದಾರ ಸ್ನೇಹಮಯಿ ಕೃಷ್ಣ ಅವರ ಅರ್ಜಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಮುಂದಿತ್ತು, ಕಳೆದ ತಿಂಗಳು ನ್ಯಾಯಾಲಯದಲ್ಲಿ ಸಮಗ್ರ ವಾದ ಮಂಡನೆಯೂ ಆಗಿತ್ತು.

ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯಪಾಲರ ಆದೇಶ ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ್ದರು, ಕೆಳ ನ್ಯಾಯಾಲಯದಿಂದ ಕಾಯ್ದಿರಿಸಿದ ತೀರ್ಪು ಪ್ರಕಟಿಸದಂತೆ ತಡೆ ಇತ್ತು, ರಾಜ್ಯಪಾಲರ ನಿರ್ಣಯ ಸರಿಯಾಗಿದೆ, ಕ್ರಮಬದ್ಧವಾಗಿದೆ ಎಂದು ಹೈಕೋರ್ಟ್ ಹೇಳಿದೆ.

ವಿಶೇಷ ಕೋರ್ಟ್ ತೀರ್ಪು ಪ್ರಕಟಣೆಗೆ ಇದ್ದ ತಡೆಯಾಜ್ಞೆಯನ್ನೂ ಹೈಕೋರ್ಟ್ ತೆರವುಗೊಳಿಸಿತ್ತು, ಇಂದು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವೂ ಮೈಸೂರಿನ ಮುಡಾ ಹಗರಣದಲ್ಲಿ ಮಹತ್ವದ ಆದೇಶ ಪ್ರಕಟಿಸಿದೆ.

ಮುಡಾ ಹಗರಣ ಕೇವಲ 14 ನಿವೇಶನಗಳಿಗೆ ಸೀಮಿತವಲ್ಲ, ಮುಡಾದಲ್ಲಿ 4ರಿಂದ 5 ಸಾವಿರ ಕೋಟಿ ರೂ. ಬೆಲೆ ಬಾಳುವ ನಿವೇಶನಗಳು ರಿಯಲ್ ಎಸ್ಟೇಟ್, ದಲ್ಲಾಳಿಗಳ ಪಾಲಾಗಿದೆ, ಇವೆಲ್ಲವುಗಳ ಸಮಗ್ರ ತನಿಖೆ ಸಿಬಿಐನಿಂದ ಮಾತ್ರ ಸಾಧ್ಯ ಎಂದರು.

ಆದೇಶದ ಪ್ರತಿ ತಲುಪುತ್ತಿದ್ದಂತೆ ಮೈಸೂರಿನ ಲೋಕಾಯುಕ್ತ ಪೊಲೀಸರು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಎಫ್ಐಆರ್ ದಾಖಲಿಸಿ ತನಿಖೆ ಪ್ರಾರಂಭಿಸಲಿದ್ದಾರೆ ಎಂದರು.

## ಜಿಲ್ಲಾ ಮಟ್ಟದ ಬಾಲಕರ ಬಾಲ್ ಬ್ಯಾಡ್ಮಿಂಟನ್ ವಿಶ್ವಚೇತನ ವಿದ್ಯಾನಿಕೇತನ ವಸತಿಯುತ ಪ.ಪೂ. ಕಾಲೇಜು ರಾಜ್ಯಮಟ್ಟಕ್ಕೆ ಆಯ್ಕೆ



ದಾವಣಗೆರೆ, ಸೆ. 25- ನಗರದ ವಿಶ್ವಚೇತನ ವಿದ್ಯಾನಿಕೇತನ ವಸತಿಯುತ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಶೈಕ್ಷಣಿಕ ಸಾಲಿನಲ್ಲಿ ಪ.ಪೂ. ಶಿಕ್ಷಣ ಇಲಾಖೆಯಿಂದ ಈಚೆಗೆ ನಗರದಲ್ಲಿ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಬಾಲಕರ ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ವಿಜೇತರಾಗಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ.

ಕಾಲೇಜು ಸಂಸ್ಥಾಪಕ ಅಧ್ಯಕ್ಷರಾದ ಡಾ. ವಿಜಯಲಕ್ಷ್ಮಿ ವೀರಮಾಚನೇನಿ, ಪ್ರಾಂಶುಪಾಲ ಜಿ. ವಿನೋದ್, ನಟರಾಜ್ ವಿಜೇತ ಮಕ್ಕಳಿಗೆ ಅಭಿನಂದಿಸಿದ್ದಾರೆ.

## ನಗರದಲ್ಲಿ ಇಂದು

## ಕೋಳಿ, ಕುರಿ ಸಾಕಾಣಿಕೆ ತರಬೇತಿ

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ ನಗರದ ಪಶು ಆಸ್ಪತ್ರೆ ಆವರಣದ ಪಶು ಪಾಲನಾ ಮತ್ತು ಪಶು ವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಆಧುನಿಕ ಹೈನು ಗಾರಿಕೆ, ಕೋಳಿ, ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಶಿಬಿರ ಆಯೋಜಿಸಲಾಗಿದೆ. ಆಧುನಿಕ ಹೈನುಗಾರಿಕೆ ತರ ಬೇತಿಯು ಇಂದು ನಡೆಯಲಿವೆ. ಸಂಪರ್ಕಿಸಿ : 08192-233787.

# ಭಾರತೀಯ ಸಂಸ್ಕೃತಿ ಪ್ರಸರಣ ಪ್ರತಿಯೊಬ್ಬರ ಕರ್ತವ್ಯ

**(1ನೇ ಪುಟದಿಂದ)** ಸಹಕಾರ ಸ್ಮರಣೀಯ ಎಂದರು.

ಉತ್ತಮ ಪುಸ್ತಕಗಳ ಸಂಗ್ರಹದೊಟ್ಟಿಗೆ ಉನ್ನತ ಚಿಂತನೆಗಳನ್ನು ಮಾಡುವತ್ತ ಚಿತ್ತ ಹರಿಸ ಬೇಕಾಗಿದೆ. ವಿವೇಕಾನಂದರ ಬದುಕಿನ ಹಲವು ಆಯಾಮಗಳನ್ನು ಅಧ್ಯಯನ ಮಾಡುವುದೇ ಒಂದು ವಿಸ್ಮಯ ಎಂದು ಹೇಳಿದರು.

ಇಂಜಿನಿಯರಿಂಗ್ ಪದವೀಧರನಾದ ನನಗೆ ಕನ್ನಡ ಭಾಷೆ ಮತ್ತು ಸಾಹಿತ್ಯದಲ್ಲಿ ಆಸಕ್ತಿ ಮೂಡಿಸಿದವರು ಸ್ವಾಮಿ ಪುರುಷೋತ್ತಮಾನಂದರು. ನನ್ನ ಮಾತೃಭಾಷೆ ತೆಲುಗು. ಆದರೂ ಕನ್ನಡ ಭಾಷೆಯಲ್ಲಿ ಬರೆಯಲು ಪ್ರೇರೇಪಿಸಿದರು ಎಂದು ಅಭಿಮಾನಪೂರ್ವಕವಾಗಿ ನುಡಿದರು.

'ವಿವೇಕಧಾರಾ' ಕೃತಿ ಲೋಕಾರ್ಪಣೆ ಮಾಡಿದ ದಾವಣಗೆರೆ ರಾಮಕೃಷ್ಣ ಮಿಷನ್ ಕಾರ್ಯದರ್ಶಿ ಸ್ವಾಮಿ ತ್ಯಾಗೀಶ್ವರಾನಂದ ಜೀ ಮಹಾರಾಜ್ ಮಾತನಾಡಿ, 'ವಿವೇಕಧಾರಾ' ಕೃತಿಯನ್ನು ಅಧ್ಯಯನ ಮಾಡುವ ಜೊತೆಗೆ ಅಮೃತಧಾರೆಯನ್ನಾಗಿಸಬೇಕಾಗಿದೆ. ಅಧ್ಯಾತ್ಮಿಕ ಮೌಲ್ಯಗಳನ್ನು ಮತ್ತು ಸ್ವಾಮಿ ವಿವೇಕಾನಂದರ ಚಿಂತನೆಗಳನ್ನು ಜನರಿಗೆ ತಲುಪಿಸುವ ಕೆಲಸ ಮಾಡಬೇಕೆಂದರು.

ಕಸಾಪ ಜಿಲ್ಲಾಧ್ಯಕ್ಷ ಬಿ. ವಾಮದೇವಪ್ಪ ಮಾತನಾಡಿ, ಭಾರತೀಯ ಸಂಸ್ಕೃತಿ, ಸನಾತನ ಧರ್ಮವನ್ನು ಇಡೀ ಜಗತ್ತಿಗೇ ಬೋಧಿಸಿದ ಕೀರ್ತಿ ಸ್ವಾಮಿ ವಿವೇಕಾನಂದರಿಗೆ ಸಲ್ಲುತ್ತದೆ. ಚಿಕಾಗೋ ಭಾಷಣದಿಂದ ಅನೇಕರು ಪ್ರಭಾವಿತರಾಗಿದ್ದರು ಎಂದರು.

ಹಿಂದೂ ಧರ್ಮ ಎಲ್ಲಾ ಧರ್ಮಗಳಿಗೆ ಬುನಾದಿಯಾಗಿದ್ದು, ವಿವೇಕಾನಂದರ ವ್ಯಕ್ತಿತ್ವ ಎಲ್ಲರ ಮೇಲೂ ಪ್ರಭಾವ ಬೀರಿತ್ತು. ಅವರ ಚಿಂತನೆಗಳನ್ನು ಪ್ರತಿಯೊಬ್ಬರೂ ಸಹ ಅಳವಡಿಸಿಕೊಳ್ಳಬೇಕಾಗಿದೆ ಎಂದು ಹೇಳಿದರು.

ರಾಣೇಬೆನ್ನೂರಿನ ಪ್ರಕಾಶಾನಂದ ಜೀ, ಹರಿಹರದ ಶಾರದೇಶಾನಂದ ಜೀ ಮಹಾರಾಜ್, ಸರ್ ಎಂ.ವಿ. ಕಾಲೇಜಿನ ಕಾರ್ಯದರ್ಶಿ ಎಸ್.ಜೆ. ಶ್ರೀಧರ್, ಎಸ್.ಎಸ್.ಆಸ್ಪತ್ರೆ ಉಪ ಪ್ರಾಚಾರ್ಯರಾದ ಡಾ. ಶಶಿಕಲಾ ಕೃಷ್ಣಮೂರ್ತಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಡಾ. ಬಿ.ಟಿ. ಅಚ್ಯುತ್, ವೀರೇಶ್, ಎನ್.ಎಂ. ಶಾಂತಿನಥ್, ನಳಿನಾ ಅಚ್ಯುತ್ ಮತ್ತಿತರರು ಭಾಗವಹಿಸಿದ್ದರು.

## ಸಿಎಂ ವಿರುದ್ಧ ಲೋಕಾಯುಕ್ತ ತನಿಖೆ

**(1ನೇ ಪುಟದಿಂದ)** ಭೂಮಿಯನ್ನು ತಮ್ಮ ಸಹೋದರಿಗೆ ದಾನವಾಗಿ ನೀಡಿದ್ದಾರೆ. ಇದಾದ ನಂತರ ಮುಡಾದಿಂದ 50:50ರ ಅನುಪಾತದಲ್ಲಿ ಹಳೆಯ ಬಡಾವಣೆಯಲ್ಲಿ 14 ನಿವೇಶನಗಳನ್ನು ಪಡೆದಿದ್ದಾರೆ. ಎಲ್ಲಾ ಸಂದರ್ಭಗಳಲ್ಲೂ ಸಿದ್ದರಾಮಯ್ಯ ಒಂದಲ್ಲಾ ಒಂದು ಅಧಿಕಾರದ ಹುದ್ದೆಯಲ್ಲಿದ್ದರು. ಅವರಲ್ಲದೆ, ಬೇರೆ ಸಾಮಾನ್ಯ ವ್ಯಕ್ತಿಯಿಂದ ಈ ಮಟ್ಟದ ಪ್ರಕ್ರಿಯೆಗಳನ್ನು ನಡೆಸಲು ಸಾಧ್ಯವಿಲ್ಲ ಎಂದರು.

ರಾಷ್ಟ್ರದಲ್ಲಿ ಪ್ರಸ್ತುತ ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಜಾರಿಯಲ್ಲಿದ್ದರೂ ಈ ಕೃತ್ಯಗಳು ನಡೆದಾಗ ಅಪರಾಧ ದಂಡ ಸಂಹಿತೆ (ಸಿಆರ್‌ಪಿಸಿ) ಜಾರಿಯಲ್ಲಿತ್ತು. ಆದ್ದರಿಂದ ಸಿಆರ್‌ಪಿಸಿ ಅಡಿಯಲ್ಲೇ ತನಿಖೆ ನಡೆಸುವಂತೆಯೂ ನ್ಯಾಯಾಧೀಶರು ಆದೇಶ ಮಾಡಿದರು. ಆರೋಪಿಯ ಬಂಧನ ಸೇರಿದಂತೆ ತನಿಖೆಯ ಸಂಪೂರ್ಣ ಅಧಿಕಾರವನ್ನು ಮೈಸೂರು ಲೋಕಾಯುಕ್ತ ಎಸ್‌ಪಿ ಅವರಿಗೆ ನೀಡಿರುವ ನ್ಯಾಯಾಧೀಶರು, ಅವಶ್ಯಕತೆಗೆ ಅನುಸಾರವಾಗಿ ತನಿಖಾಧಿಕಾರಿ ಅಧಿಕಾರ ಬಳಸಬಹುದು ಎಂದು ಆದೇಶದಲ್ಲಿ ತಿಳಿಸಿದ್ದಾರೆ.

**ಸೈಟ್ ಮಾರಾಟಕ್ಕೆ (KHB)**
ಕರ್ನಾಟಕ ಗೃಹ ಮಂಡಳಿ
50x80 ಪಶ್ಚಿಮ, 2550-00 ಅಡಿಗೆ
40x60 (61 ಲಕ್ಷ) 40 ಅಡಿ ರಸ್ತೆಗೆ
ಕಿರಣ್ ಬೂಸ್ನೂರ್ (ಏಜೆಂಟ್)
97315 63409, 98440 63409
120 ರಸ್ತೆ, ಕಮರ್ಷಿಯಲ್ ಆಗುವಂತಹ
40x60 ಉತ್ತರ (93 ಲಕ್ಷ)

**ಸೈಟುಗಳು ಮಾರಾಟಕ್ಕಿವೆ**
ಹದಡಿ ರಸ್ತೆ, ಶಿರಮಗೊಂಡನಹಳ್ಳಿ
ಸುತ್ತ-ಮುತ್ತ 30x50 ಪಶ್ಚಿಮ
ಅಕ್ಕ-ಪಕ್ಕ, 30x46 ಪೂರ್ವ ಅಕ್ಕ-ಪಕ್ಕ,
30x50 ಪೂರ್ವ, 30x40 ಪಶ್ಚಿಮ.
ಸ್ವಾಮಿ ಏಜೆಂಟ್, ವಿದ್ಯಾನಗರ
97421 44715

**3BHK/2BHK ಮನೆ ಬಾಡಿಗೆಗಿದೆ**
ವಾಸ್ತು ಪ್ರಕಾರದ, ಪೂರ್ವ-ಮುಖಿದ, ಸ್ವತಂತ್ರವಾದ ಮನೆ: ಸಸ್ಯಾಹಾರಿಗಳ ವಾಸಕ್ಕೆ,ವಿದ್ಯಾರ್ಥಿಗಳಿಗೆ, ಮೆಸ್, ಪಿಜಿ ಸೆಂಟರ್, ಮಕ್ಕಳ ಶಾಲೆ, ಕಛೇರಿ, ಸಂಗೀತ- ನರ್ತನ ಶಾಲೆ, ವ್ಯಾಯಾಮ ಶಾಲೆ (Gym), ಆಶ್ರಮ ಹಾಗೂ ಇತರೆ ಉದ್ದೇಶಗಳಿಗೆ, ಹೌಸಿಂಗ್ ಬೋರ್ಡ್ ಕಾಲೋನಿ, ಮೆಡಿಕಲ್ ಹಾಸ್ಟೆಲ್ ಪಕ್ಕ, Extended MCC 'B' Block. Students (Ladies)Preferred.
63015 58346

**ಕೆಲಸಕ್ಕೆ ಬೇಕಾಗಿದ್ದಾರೆ**
ಹೋಲ್‌ಸೇಲ್ ಔಷಧಿ ಅಂಗಡಿಯಲ್ಲಿ ಕೆಲಸ ಮಾಡಲು ಮಹಿಳೆಯರು ಬೇಕಾಗಿದ್ದಾರೆ. ಅನುಭವ ಇರುವವರಿಗೆ ಹಾಗೂ ದಾವಣಗೆರೆಯಲ್ಲಿ ವಾಸವಿರುವವರಿಗೆ ಆದ್ಯತೆ
ವೆಂಕಟೇಶ್ವರ ಫಾರ್ಮಾಸ್ಯೂಟಿಕಲ್ಸ್
2ನೇ ಮೇನ್, ಕೆಟಿಜೆ ನಗರ, ದಾವಣಗೆರೆ-2.
86607 75329

**ಬೇಕಾಗಿದ್ದಾರೆ**
ಅನುಭವವುಳ್ಳ ಮಹಿಳಾ ನರ್ಸ್‌ಗಳು ಬೇಕಾಗಿದ್ದಾರೆ.
ಆಕರ್ಷಕ ವೇತನ ನೀಡಲಾಗುವುದು.
ಸಂಪರ್ಕಿಸಿ : ಅನುಗ್ರಹ ಆಸ್ಪತ್ರೆ
ಎಂ.ಸಿ.ಸಿ.'ಬಿ' ಬ್ಲಾಕ್, ದಾವಣಗೆರೆ.
ಮೊ : 80735 15690

**ಬೇಕಾಗಿದ್ದಾರೆ**
ಮನೆ ಕೆಲಸ ಮಾಡಲು
ಗಂಡ-ಹೆಂಡತಿ ಫ್ಯಾಮಿಲಿ
ಬೇಕಾಗಿದ್ದಾರೆ. ವಸತಿ ಸೌಲಭ್ಯವಿದೆ.
63639 54459

**ಡ್ರೈವರ್ ಬೇಕಾಗಿದ್ದಾರೆ**
ಡ್ರೈವಿಂಗ್‌ನಲ್ಲಿ ಅನುಭವವುಳ್ಳ ನುರಿತ ಡ್ರೈವರ್ ಬೇಕಾಗಿದ್ದಾರೆ
97429 97555

**ಶಿಕ್ಷಕ/ ಶಿಕ್ಷಕಿಯರು ಬೇಕಾಗಿದ್ದಾರೆ**
ನಿಸರ್ಗ ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆ ಎಸ್‌ಓಜಿ ಬಡಾವಣೆ, ದಾವಣಗೆರೆ.
1) NTC/RBST/ PUC :- 01
2) BCom/BSc :- 01
3) BSc BEd:-01
4) BPEd/CPEd:-01. ಸಂಪರ್ಕಿಸಿ:
87927 02690, 99862 26454

**TUITIONS**
ಗುರುದತ್ತ ಬಿ. ನಾಡಿಗೇರ್
Class 6 ಇಂದ Class 10
CBSE / ICSE Boards,
NEET / IIT - JEE / Olympiads
Memory Techniques + Hand Writing
97398 65711, 94822 44114

**TUITIONS**
ಗುರುದತ್ತ ಬಿ. ನಾಡಿಗೇರ್
PUC I / PUC II / Longterm / PCMB
NEET / IIT - JEE / KCET /
CLAT - Printed Notes +
Study Materials
97398 65711, 94822 44114

**WANTED**
OFFICE BOY-1 SSLC
Office Assistant In Tally Ladies
Gaurav Communications
Davangere
94487 28866, 88613 68296

**ಟ್ಯಾಂಕ್ ಕ್ಲೀನಿಂಗ್**
ಮನೆಯ ನೀರಿನ ತೊಟ್ಟಿ, ಟ್ಯಾಂಕ್‌ಗಳು ಗಲೀಜಾಗಿದ್ದರೆ ಯಂತ್ರಗಳನ್ನು ಬಳಸಿ ನಾವು ಕ್ಲೀನ್ ಮಾಡುತ್ತೇವೆ.
ಅತ್ಯುತ್ತಮ ಸೇವೆಗೆ ಸಂಪರ್ಕಿಸಿ
99863 61250
80739 48857

**ರಕ್ತ ದಾನ ಶ್ರೇಷ್ಠ ದಾನ**

**ಓದುಗರ ಗಮನಕ್ಕೆ**
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ. ಆದರೂ ಅವುಗಳಲ್ಲಿನ ಪ್ರತಿಪಾದಿತವಾದ ವಸ್ತು, ವಿಷಯ, ವಿಚಾರಗಳು, ಜಾಹೀರಾತುದಾರರ ಅಭಿಪ್ರಾಯ ಆಗಿರುತ್ತವೆಯೇ ಹೊರತು ಆ ಅಭಿಪ್ರಾಯಗಳಿಗೆ ಪತ್ರಿಕೆ ಯಾವುದೇ ರೀತಿಯಲಿ ಹೊಣೆಯಲ್ಲ.
ಅವುಗಳಲ್ಲಿನ ಮಾಹಿತಿ - ವಸ್ತು ಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

**ಲಿಂಗಾಯತ ವಧು ಬೇಕಾಗಿದೆ**
ಲಿಂಗಾಯತ ಡಾಕ್ಟರ್ MBBS., MS in ENT ಸುಂದರ 29 ವರ್ಷದ ವರನಿಗೆ, ಸೂಕ್ತ MBBS., MD., MS. ಪೂರೈಸಿದ ಡಾಕ್ಟರ್ ವಧು ಬೇಕಾಗಿದೆ.
98807 29108

**ಸೈಟು ಮಾರಾಟಕ್ಕಿದೆ**
ಹೈಟೆಕ್ ಹಾಸ್ಪಿಟಲ್ ಹಿಂಭಾಗ ಪಾಮೇನಹಳ್ಳಿ ಹತ್ತಿರ ಫೈನಲ್ ಅಪ್ರೂವ್ಡ್ ಸೈಟು ಮಾರಾಟಕ್ಕಿದೆ
40x45 ಪೂರ್ವ ಉತ್ತರ ಕಾರ್ನರ್ ಸೈಟು.
ದರ 2,350/- ಬ್ಯಾಂಕ್ ಲೋನ್ ಆಗುತ್ತದೆ.
97402 58276

**ಬಾಡಿಗೆಗೆ ಇದೆ**
ಎವಿಕೆ ಕಾಲೇಜು ರಸ್ತೆಯಲ್ಲಿ 18x30 ಅಳತೆಯ ಸೆಲ್ಲರ್ ಮಳಿಗೆ ಬಾಡಿಗೆಗೆ ಇದೆ. ಸಂಪರ್ಕಿಸಿ :
63639 54459

**ಬೇಕಾಗಿದ್ದಾರೆ**
PUC ಆದ ಮಹಿಳೆಯರು ಸ್ಟಾಕ್ ತೆಗೆಯಲು, ಹೋಲ್ ಸೇಲ್ ಫಾರ್ಮಾ ದಲ್ಲಿ ಬಿಲ್ಲಿಂಗ್ ಮಾಡಿರುವ ಅನುಭವವುಳ್ಳ ಮಹಿಳೆಯರು ಬೇಕಾಗಿದ್ದಾರೆ.
ಭೇಟಿ ಯ ಸಮಯ ಸಂಜೆ 6:30 ರ ನಂತರ
ಶ್ರೀ ಗುರು ಎಂಟರ್ ಪ್ರೈಸಸ್
#579, 6ನೇ ಮುಖ್ಯ ರಸ್ತೆ, ಪಿಜೆ ಬಡಾವಣೆ, ದಾವಣಗೆರೆ.

**ಸ್ಕೂಲ್ ಮಾರಾಟಕ್ಕಿದೆ**
ನರ್ಸರಿ ಮತ್ತು 1 ರಿಂದ 8 ರವರೆಗೆ, ಇಂಗ್ಲಿಷ್ ಮೀಡಿಯಂ ಪರ್ಮಿಷನ್
ಸಂಪರ್ಕಿಸಿ :
ಹಗೇದಿಬ್ಬ ಸರ್ಕಲ್, ದಾವಣಗೆರೆ-2.
98866 78178

**ಬೇಕಾಗಿದ್ದಾರೆ**
ರೂಂ ಬಾಯ್ ಮತ್ತು ಸೂಪರ್‌ವೈಸರ್ ಬೆಳಗಿನ ಪಾಳ್ಯಕ್ಕೆ ಬೇಕಾಗಿದ್ದಾರೆ
63639 54459

**ಸ್ವಾಮಿ ಅಯ್ಯಪ್ಪ ಟ್ರಾವೆಲ್ಸ್**
ದಿ : 01.10.2024 to 08.10.2024ರ ವರೆಗೆ
7 ದಿನಗಳ ದಕ್ಷಿಣ ಭಾರತದ ಪ್ರವಾಸ
ಮಧುರೈ, ಪಳನಿ, ರಾಮೇಶ್ವರ, ಕನ್ಯಾಕುಮಾರಿ
ಕೇವಲ 10 ಸೀಟುಗಳಿವೆ ಆಸಕ್ತಿಯುಳ್ಳವರು ಕರೆ ಮಾಡಿ.
90086 26473, 94485 33928

**DUPLEX HOUSE FOR RENT**
40 × 60 fully furnished 5 BHK
Duplex house, 4 attached washroom including Corporation water & Borewell water.
Vidyanagar last city bus stop, Davangere
8951938228, 8050222181

**ತಕ್ಷಣ ಬೇಕಾಗಿದ್ದಾರೆ**
ಪಿಗ್ಮಿ ಏಜೆಂಟರು
ಹುಡುಗ-ಹುಡುಗಿಯರು,
ಟೆಲಿಕಾಲರ್ ಮಹಿಳೆಯರು
ಸಹಾಯಕ ಮಹಿಳೆಯರು ಬೇಕಾಗಿದ್ದಾರೆ.
88614 38237

**ಬೇಕಾಗಿದ್ದಾರೆ**
SK ಹೋಂ ನರ್ಸಿಂಗ್ ಸರ್ವೀಸ್
ವಯೋವೃದ್ಧರನ್ನು ಮತ್ತು ಅನಾರೋಗ್ಯ ವಯೋವೃದ್ಧರನ್ನು ನೋಡಿಕೊಳ್ಳಲು ಬೇಕಾಗಿದ್ದಾರೆ. ವಿದ್ಯಾಭ್ಯಾಸ : 7 ರಿಂದ 12ನೇ ತರಗತಿ ಮುಗಿಸಿರಬೇಕು.
ಸ್ಥಳ : ದಾವಣಗೆರೆ, ಚಿತ್ರದುರ್ಗ, ಶಿವಮೊಗ್ಗ ಭಾಷೆ : ಕನ್ನಡ, ಇಂಗ್ಲಿಷ್, ಹಿಂದಿ. ಆಫೀಸ್ : ಮೌನೇಶ್ವರ ಬಡಾವಣೆ, ನಿಟ್ಟುವಳ್ಳಿ 60 Feet Road. ಸಂಪರ್ಕಿಸಿ :
99027 15642
85500 48673, 85500 48672

**FLAT FOR LEASE**
3 BHK, Sqft :1888
AM Apartment
Nainika Prime Rose
Vidyanagar last city bus stop
Davanagere.
89519 38228, 80502 22181

**SSLC/PUC ಪರೀಕ್ಷೆಯಲ್ಲಿ ಮತ್ತು ಅವಕಾಶ ವಂಚಿತ ವಿದ್ಯಾರ್ಥಿಗಳಿಗೆ ಸುವರ್ಣಾವಕಾಶ**
ದೂರ ಶಿಕ್ಷಣದ ಮುಖಾಂತರ ಆನ್‌ಲೈನ್ ಪರೀಕ್ಷೆ ಮುಖಾಂತರ ಉತ್ತಮ ಫಲಿತಾಂಶಕ್ಕಾಗಿ ಮುಂದಿನ ವಿದ್ಯಾಭ್ಯಾಸ ಮುಂದುವರೆಸಲು/ಸರ್ಕಾರಿ/ಖಾಸಗಿ ಉದ್ಯೋಗಾವಕಾಶ ಪಡೆಯಬಹುದಾದ ಕರ್ನಾಟಕ ಸರ್ಕಾರದ ಪ.ಪೂ. ಮಾರ್ಗಸೂಚಿ ಪಟ್ಟಿಯಲ್ಲಿ (ಸಿಬಿಎಸ್‌ಇ) ಅನುಮೋದಿತಗೊಂಡಿದೆ.
BOSSE-SIKKIM (ಪ್ರವೇಶ ಪ್ರಾರಂಭವಾಗಿದೆ)
SHREYAS CORRESPONDENCE COLLEGE,
DCM TownShip, Davangere.
97317 40827, 83107 47112, 97432 20274

**ಮನೆ ಲೀಸ್‌ಗೆ ಇದೆ**
'ಎ' ಬ್ಲಾಕ್ ಮೂರನೇ ಕ್ರಾಸ್, ಕೋರ್ಟ್ ಹಿಂಭಾಗ, ದೇವರಾಜ್ ಅರಸ್ ಬಡಾವಣೆ, 2 ಬೆಡ್ ರೂಮ್, 1ನೇ ಫ್ಲೋರ್, ಸಸ್ಯಹಾರಿಗಳಿಗೆ ಮಾತ್ರ.
74111 56285, 81055 57433

**LEARN PROGRAMMING**
`C' Language,
OOP'S with C++
Niyam Computers
PJ Extn. Davanagere
Call for more Info :
90367 19573

# ತನಿಖೆಗೆ ಆದೇಶಿಸಿದ ತಕ್ಷಣ ತಪ್ಪಿತಸ್ಥರೆಂಬ ಭಾವನೆ ಸರಿಯಲ್ಲ




## ಹರಿಹರ ಕಾಂಗ್ರೆಸ್ ಮುಖಂಡ ನಂದಿಗಾವಿ ಶ್ರೀನಿವಾಸ್ ಅಭಿಮತ

ಹರಿಹರ, ಸೆ.25- ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮುಡಾ ಹಗರಣದ ಆರೋಪ ಮಾಡಿ ವಿಪಕ್ಷದವರು ದೊಡ್ಡ ಜಯ ಸಿಕ್ಕಂತೆ ವರ್ತನೆ ಮಾಡುತ್ತಿದ್ದು, ನ್ಯಾಯಾಲಯವು ತನಿಖೆ ಮಾಡಿ ಎಂದು ಆದೇಶ ನೀಡಿದ ತಕ್ಷಣವೇ ಸಿದ್ದರಾಮಯ್ಯ ತಪ್ಪಿತಸ್ಥರು ಎಂದು ಭಾವಿಸಿ, ರಾಜೀನಾಮೆ ನೀಡಬೇಕೆಂದಿಲ್ಲ ಎಂದು ಕಾಂಗ್ರೆಸ್ ಮುಖಂಡ ನಂದಿಗಾವಿ ಶ್ರೀನಿವಾಸ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಮೇಲೆ ಮುಡಾ ನಿವೇಶನ ವಿಚಾರಕ್ಕೆ ಸಂಬಂಧಿಸಿದಂತೆ ಪ್ರಜಾಪ್ರತಿನಿಧಿ ನ್ಯಾಯಾಲಯವು ಲೋಕಾಯುಕ್ತ ತನಿಖೆಗೆ ಆದೇಶವನ್ನು ನೀಡಿದೆ. ಆದೇಶ ನೀಡಿದ ತಕ್ಷಣವೇ ತಪ್ಪಿತಸ್ಥರೆಂದು ನಿರ್ಣಯಿಸುವುದು ಸರಿಯಲ್ಲ.

ಸಿದ್ದರಾಮಯ್ಯನವರು ಬಡವರಿಗೆ ಗ್ಯಾರಂಟಿ ಯೋಜನೆಗಳ ಮೂಲಕ ಸಾಕಷ್ಟು ಒಳ್ಳೆಯ ಕೆಲಸ ಮಾಡಿಕೊಂಡು ಹೋಗುತ್ತಿದ್ದಾರೆ. ಇವರ ಆಡಳಿತ ವೈಖರಿ ನೋಡಿ ಇತರೆ ರಾಜ್ಯದ ಜನತೆ ನಮ್ಮರಾಜ್ಯಕ್ಕೆ ಈ ತರಹದ ಸಿಎಂ ಇರಬೇಕಿತ್ತು ಎಂದು ಮಾತನಾಡುತ್ತಿದ್ದಾರೆ. ಇಂತಹ ದಕ್ಷ ಆಡಳಿತಗಾರರನ್ನು ಅಧಿಕಾರದಿಂದ ಕೆಳಗೆ ಇಳಿಸಬೇಕು ಎಂದು ಬಿಜೆಪಿ ಹಿಂದಿನಿಂದ ಅವರ ಹೆಸರಿಗೆ ಕಳಂಕವನ್ನು ತರುವಂತ ಕೆಲಸ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಹೆಚ್.ಡಿ. ಕುಮಾರ ಸ್ವಾಮಿ, ಮಾಜಿ ಸಚಿವ ಜನಾರ್ದನ್ ರೆಡ್ಡಿಯವರು ರಾಜ್ಯ ಮತ್ತು ವಿದೇಶದಲ್ಲಿ ಬೇಕಾದಷ್ಟು ಆಸ್ತಿ ಹೊಂದಿದ್ದಾರೆ. ಅವರ ಮೇಲೆ ಪ್ರಕರಣಗಳಿದ್ದರೂ ಸಹ, ರಾಜ್ಯಪಾಲರು ಯಾವುದೇ ರೀತಿಯ ಕಾನೂನು ಕ್ರಮಗಳನ್ನು ಕೈಗೊಳ್ಳದೆ, ಸಿದ್ದರಾಮಯ್ಯ ವಿರುದ್ಧ ಕ್ರಮಕ್ಕೆ ಆದೇಶ ನೀಡಿದ್ದಾರೆ. ಇದನ್ನು ಗಮನಿಸಿದರೆ ಬಿಜೆಪಿ ದುರಹಂಕಾರದ ವರ್ತನೆ ಯನ್ನು ಮಾಡುತ್ತಿದ್ದು, ಇದು ಅವರ ಕೊನೆಯ ಘಳಿಗೆ ಹತ್ತಿರ ಬಂದಂತೆ ಕಾಣಿಸುತ್ತದೆ ಎಂದರು.

ನಗರಸಭೆ ಮಾಜಿ ಅಧ್ಯಕ್ಷ ಬಿ.ರೇವಣಸಿದ್ದಪ್ಪ ಮಾತನಾಡಿ, ಯಾವುದೇ ಒಂದು ಕಪ್ಪು ಚುಕ್ಕೆ ಇಲ್ಲದೆ ರಾಜಕೀಯ ಮಾಡಿಕೊಂಡು ಬಂದಿರುವ ಸಿದ್ದರಾಮಯ್ಯ ಮುಡಾ ಹಗರಣದಲ್ಲಿ ಭಾಗಿಯಾಗಿಲ್ಲ. ಪ್ರಭಾವ ಬೀರಿಲ್ಲ. ಅಷ್ಟೊಂದು ಪ್ರಾಮಾಣಿಕತೆಯಿಂದ ರಾಜಕೀಯ ಮಾಡಿಕೊಂಡು ಬಂದಿದ್ದಾರೆ. ಅಂತಹ ದಕ್ಷ ಆಡಳಿತಗಾರರಿಗೆ ಹರಿಹರ ತಾಲ್ಲೂಕು ಕಾಂಗ್ರೆಸ್ ಪಕ್ಷ ಬೆಂಬಲವಾಗಿ ನಿಲ್ಲುವ ಮೂಲಕ ಅವರನ್ನು ಯಾವುದೇ ಕಾರಣಕ್ಕೂ ರಾಜೀನಾಮೆ ನೀಡುವುದಕ್ಕೆ ಬಿಡುವುದಿಲ್ಲ ಎಂದು ಹೇಳಿದರು.

ಪಕ್ಷದ ಮುಖಂಡರಾದ ಮಲ್ಲಿನಾಥ್, ನಗರಸಭೆ ಮಾಜಿ ಸದಸ್ಯರಾದ ಮಹಮ್ಮದ್ ಫೈರೋಜ್, ಮಹಮ್ಮದ್ ಸಿಗ್ಬತ್ ಉಲ್ಲಾ ಮಾತನಾಡಿದರು.

ಈ ಸಂದರ್ಭದಲ್ಲಿ ತಾಪಂ ಮಾಜಿ ಅಧ್ಯಕ್ಷ ಟಿ.ಜೆ. ಮುರುಗೇಶಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಲ್.ಬಿ. ಹನುಮಂತಪ್ಪ, ಅಬಿದಾಲಿ, ಕುರುಬ ಸಮಾಜದ ಮಾಜಿ ಅಧ್ಯಕ್ಷ ಕೆ. ಜಡಿಯಪ್ಪ, ಕುಣೆಬೆಳಕೆರೆ ರುದ್ರಪ್ಪ, ಕೊಟ್ರೇಶ್ ನಾಯ್ಕ್ ಯಲವಟ್ಟಿ, ರಾಹುಲ್, ಮಂಜುನಾಥ್, ಭಾಗ್ಯಮ್ಮ ಇತರರಿದ್ದರು.

# ಮೆಕ್ಯಾನಿಕಲ್ ಇಂಜಿನಿಯರ್‌ಗಳಿಗೆ ಹೆಚ್ಚಿದ ಬೇಡಿಕೆ



## ಬಿಐಇಟಿ ಸ್ವಾಯತ್ತ ಸಂಸ್ಥೆ ಉದ್ಘಾಟನೆಯಲ್ಲಿ ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ಕುಲಪತಿ ಡಾ. ವಿದ್ಯಾಶಂಕರ್

ದಾವಣಗೆರೆ, ಸೆ.25- ಉತ್ಪಾದನಾ ವಲಯ ವಿಸ್ತರಣೆಯಾಗುತ್ತಿರುವುದರಿಂದ ಮೆಕ್ಯಾನಿಕಲ್ ಇಂಜಿನಿಯರಿಂಗ್ ಪದವೀಧರರಿಗೆ ಬೇಡಿಕೆ ಹೆಚ್ಚಾಗಲಿದೆ. ದೇಶ ಮತ್ತು ರಾಜ್ಯದಲ್ಲಿ ಮೆಕ್ಯಾನಿಕಲ್ ಕ್ಷೇತ್ರದ ಬೆಳವಣಿಗೆಯ ವೇಗ ಕೂಡ ಹೆಚ್ಚುತ್ತಿದೆ ಎಂದು ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ಕುಲಪತಿ ಡಾ.ಎಸ್. ವಿದ್ಯಾಶಂಕರ್ ಹೇಳಿದರು.

ನಗರದ ಬಿಐಇಟಿ ಕಾಲೇಜು ಆವರಣದಲ್ಲಿರುವ ಎಸ್.ಎಸ್. ಮಲ್ಲಿಕಾರ್ಜುನ್ ಸಾಂಸ್ಕೃತಿಕ ಕೇಂದ್ರದಲ್ಲಿ ಬಿಐಇಟಿ ಸ್ವಾಯತ್ತ ಸಂಸ್ಥೆ ಉದ್ಘಾಟನೆ ಹಾಗೂ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್‌ಗೆ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ಇಂಜಿನಿಯರಿಂಗ್ ಕೋರ್ಸ್‌ಗಳ ಬೇಡಿಕೆ ಚಕ್ರ ಬದಲಾಗುತ್ತಿದೆ. ಮೆಕ್ಯಾನಿಕಲ್ ವಿದ್ಯಾರ್ಥಿಗಳಿಗೆ ಮುಂದೆ ಉತ್ತಮ ಭವಿಷ್ಯ ಇದೆ ಎಂದರು. ಭವಿಷ್ಯದ ಬದಲಾವಣೆಗಳನ್ನು ಗಮನಿಸಿ ಕೋರ್ಸ್‌ಗಳ ಆಯ್ಕೆ ಮಾಡಿಕೊಳ್ಳಿ ಎಂದು ಸಲಹೆ ನೀಡಿದರು.

ಇಂಜಿನಿಯರಿಂಗ್ ಶಿಕ್ಷಣದ ಗುಣಮಟ್ಟ ಕುಸಿದರೆ ಪದವೀಧರರು ಕೈಗಾರಿಕಾ ವಲಯದಲ್ಲಿ ಉದ್ಯೋಗ ಪಡೆಯಲು ಸಾಧ್ಯವಾಗದು. ಉತ್ತೀರ್ಣತೆಯ ಪ್ರಮಾಣ ಹೆಚ್ಚಿಸಲು ಶಿಕ್ಷಣದ ಗುಣಮಟ್ಟದಲ್ಲಿ ರಾಜೀ ಸಲ್ಲದು ಎಂದರು.

ಕೆಲವು ಸ್ವಾಯತ್ತ ಸಂಸ್ಥೆಗಳಲ್ಲಿ ಪಠ್ಯಕ್ರಮದ ಗುಣಮಟ್ಟ ಕಳಪೆಯಾಗಿರುವುದು ಕಂಡು ಬರುತ್ತಿದೆ. ಇದು ಆಗಬಾರದು. ಮುಂದಿನ ದಿನಗಳಲ್ಲಿ ಸ್ವಾಯತ್ತ ಇಂಜಿನಿಯರಿಂಗ್ ಕಾಲೇಜುಗಳ ಪ್ರಶ್ನೆಪತ್ರಿಕೆಗಳ ಗುಣಮಟ್ಟದ ಬಗ್ಗೆ ತೀವ್ರ ನಿಗಾವಹಿಸಲು ಸಮಿತಿ ರಚಿಸಲಾಗುವುದು ಎಂದು ಹೇಳಿದರು.

ಸ್ವಾಯತ್ತ ಸಂಸ್ಥೆಗಳಲ್ಲಿ ಉತ್ತೀರ್ಣರಾಗುವುದು ಸುಲಭ ಎನ್ನುವ ಭಾವನೆ ಇದೆ. ಅಂತಹ ಮನಸ್ಥಿತಿಯಲ್ಲಿ ವಿದ್ಯಾರ್ಥಿಗಳು ಓದು ಮುಂದುವರೆಸಿದರೆ ಪದವಿ ನಂತರ ಉದ್ಯೋಗ ಪಡೆಯುವುದು ಕಷ್ಟವಾಗಲಿದೆ. ಐಐಟಿಯಂತಹ ಉನ್ನತ ಸಂಸ್ಥೆಗಳಲ್ಲಿ ಓದಿದರೂ ಶೇ. 50 ರಷ್ಟು ಪದವೀಧರರಿಗೆ ಉದ್ಯೋಗ ಸಿಕ್ಕಿಲ್ಲ. ಹಾಗಾಗಿ ಎಲ್ಲಾ ಸ್ವಾಯತ್ತ ಇಂಜಿನಿಯರಿಂಗ್ ಕಾಲೇಜುಗಳು ಗುಣಮಟ್ಟದ ಕಡೆ ಗಮನಹರಿಸುವಂತೆ ಸಲಹೆ ನೀಡಿದರು.

ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿ, ಇಂಜಿನಿಯರಿಂಗ್ ಪದವಿ ನಂತರ ಉದ್ಯೋಗ ಹುಡುಕಿ ಹೋಗುವ ಬದಲು ಉದ್ಯೋಗ ಸೃಷ್ಟಿ ಮಾಡುವ ಮೂಲಕ ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕೆಂದು ಕರೆ ನೀಡಿದರು.

ಸಾಮಾನ್ಯ ಜನರಿಗೂ ಅನುಕೂಲವಾಗುವ ನಿಟ್ಟಿನಲ್ಲಿ ಸಂಶೋಧನೆಗಳಾಗಬೇಕು. ಸರ್ಕಾರಿ ಸವಲತ್ತುಗಳು ಅರ್ಹರಿಗೆ ತಲುಪುವುದಕ್ಕೆ ನೆರವಾಗುವ ತಂತ್ರಜ್ಞಾನ ಅಭಿವೃದ್ಧಿಪಡಿಸಬೇಕೆಂದು ಹೇಳಿದರು.

ಸರ್ಕಾರಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಿದ ಕನ್ನಡ ಮಾಧ್ಯಮ ವಿದ್ಯಾರ್ಥಿಗಳಿಗೆ ವೃತ್ತಿ ಕೌಶಲ್ಯ ಶಿಕ್ಷಣಕ್ಕೆ ಪೂರಕವಾದ ಕಾರ್ಯಕ್ರಮಗಳನ್ನು ರೂಪಿಸುವಂತೆ ಸಲಹೆ ನೀಡಿದರು.

ವಿಟಿಯು ಕುಲಸಚಿವ ಡಾ. ಬಿ.ಇ. ರಂಗಸ್ವಾಮಿ, ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಹೆಚ್.ಬಿ. ಅರವಿಂದ್, ಮಹಾವಿದ್ಯಾಲಯದ ನಿರ್ದೇಶಕ ಪ್ರೊ. ವೈ. ವೃಷಭೇಂದ್ರಪ್ಪ ಸೇರಿದಂತೆ, ಇತರೆ ಗಣ್ಯರು ಉಪಸ್ಥಿತರಿದ್ದರು.



# ಹರಪನಹಳ್ಳಿ : ಬೇಟಿ ಪಡಾವ್ ಬೇಟಿ ಬಚಾವ್ ಅರಿವು, ಪೋಷಣ್ ಕಾರ್ಯಕ್ರಮದ ಉದ್ಘಾಟನೆ

ಹರಪನಹಳ್ಳಿ, ಸೆ. 25 - ಮಹಿಳೆಯರು ಮತ್ತು ಮಕ್ಕಳಲ್ಲಿ ಅಪೌಷ್ಟಿಕತೆ ಹೋಗಲಾಡಿಸಿ, ಪೌಷ್ಟಿಕತೆ ತುಂಬಲು ಪೋಷಣ್ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದು ಸಿಡಿಪಿಓ ಅಶೋಕ್ ಹೇಳಿದರು.

ಉಚ್ಚಂಗಿದುರ್ಗ ಗ್ರಾಮದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ವತಿಯಿಂದ ಆಯೋಜಿಸಿದ್ದ ಬೇಟಿ ಪಡಾವ್ ಬೇಟಿ ಬಚಾವ್ ಅರಿವು ಹಾಗೂ ಪೋಷಣ್ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪೋಷಣ್ ಮಾಸಾಚರಣೆಯನ್ನು ಏಳನೇ ರಾಷ್ಟ್ರೀಯ ಕಾರ್ಯಕ್ರಮವಾಗಿ ವಿವಿಧ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ನಡೆಸಲಾಗುತ್ತಿದೆ. ಇಂದಿನ ಜೀವನ ಪದ್ಧತಿಯಿಂದ ಕಿಶೋರಿ ಹಂತದಲ್ಲಿ ರಕ್ತ ಹೀನತೆಯು ಹೆಚ್ಚಾಗಿ ಕಂಡು ಬರುತ್ತಿದೆ. ವಯಸ್ಸಿಗೆ ತಕ್ಕಂತೆ ಎತ್ತರ, ತೂಕ ಇಲ್ಲದಿರುವುದು ಅಪೌಷ್ಟಿಕತೆಯ ಮುಖ್ಯ ಲಕ್ಷಣವಾಗಿದೆ.

ಹೆಣ್ಣು ಮಕ್ಕಳ ಶಿಕ್ಷಣದ ಜೊತೆಗೆ ಅವರ ರಕ್ಷಣೆ ಮಾಡುವುದು ಪ್ರತಿಯೊಬ್ಬರ ಕರ್ತವ್ಯ ಆಗಿದೆ. ಹೆಣ್ಣು ಮಕ್ಕಳ ಶೈಕ್ಷಣಿಕ ಫಲಿತಾಂಶ ಉತ್ತಮವಾಗಿದ್ದರೂ ಹೆಣ್ಣು ಮಕ್ಕಳು ಶೇ. 68 ರಷ್ಟು ಮಾತ್ರ ಮಹಿಳೆಯರು ಶಿಕ್ಷಣ ಪಡೆಯುತ್ತಿದ್ದಾರೆ.ಪೋಷಕರು ಹೆಣ್ಣುಮಕ್ಕಳ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡಬೇಕು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷೆ ಗಂಗಮ್ಮ ರಮೇಶ್, ಪಿಡಿಓ ಪರಮೇಶ್ವರಪ್ಪ, ಪ್ರಾಂಶುಪಾಲ ಚೌಡಪ್ಪ, ಉಪಾಧ್ಯಕ್ಷ ಮಡ್ರಳ್ಳಿ ಕೆಂಚಪ್ಪ, ಸಂಯೋಜಕ ಲಿಂಗರಾಜ್, ಮೇಲ್ವಿಚಾರಕಕರಾದ ಜಯಶ್ರೀ, ಮುಖಂಡ ಉಮೇಶ್ ನಾಯ್ಕ, ರಮೇಶ, ಹನುಮಂತಪ್ಪ ಇತರರು ಇದ್ದರು.

# ಹರಪನಹಳ್ಳಿ : ಬಾಗಳಿ ಶಾಲೆ ಜಿಲ್ಲಾ ಮಟ್ಟಕ್ಕೆ ಆಯ್ಕೆ



ಹರಪನಹಳ್ಳಿ.ಸೆ.25- ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ನಡೆದ ತಾಲೂಕು ಮಟ್ಟದ ಖೋ ಖೋ ಪಂದ್ಯಾವಳಿಯಲ್ಲಿ ಬಾಗಳಿ ಡಾ. ಅಂಬೇಡ್ಕರ್ ಶಾಲೆಯ ವಿದ್ಯಾರ್ಥಿಗಳು ವಿಜೇತರಾಗಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಕುಂಚೂರು ವಲಯ ಶಾಲೆಯ ವಿದ್ಯಾರ್ಥಿಗಳ ಖೋ ಖೋ ತಂಡದ ವಿರುದ್ದ ಬಾಗಳಿ ಡಾ.ಅಂಬೇಡ್ಕರ್ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಗೆಲುವು ಸಾಧಿಸಿದ್ದಾರೆ. ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳನ್ನು ಬಿಇಓ ಲೇಪಾಕ್ಷಪ್ಪ, ಬಿಆರ್‌ಸಿ, ಸಿಆರ್‌ಪಿ, ಹಾಗೂ ಶಾಲೆಯ ಮುಖ್ಯ ಶಿಕ್ಷಕ ಪೂಜಾರ ಮಂಜಪ್ಪ, ಶಿಕ್ಷಕರಾದ ಸಿ. ನಾಗರಾಜ್, ಬಿ.ಎಸ್.ರಾಮಚಂದ್ರಪ್ಪ, ಟಿ.ಕೆ.ಎಂ.ಮಂಜುನಾಥ್ ಮತ್ತಿತರರು ಅಭಿನಂದಿಸಿದ್ದಾರೆ.

# ರಾಣೇಬೆನ್ನೂರು : ಸಾಲ ವಸೂಲಾತಿಯಲ್ಲಿ ಉತ್ತಮ ಸಾಧನೆ



ರಾಣೇಬೆನ್ನೂರು, ಸೆ. 25 - ಸಾಲ ವಸೂಲಾತಿಯಲ್ಲಿ ಉತ್ತಮ ಸಾಧನೆ ಮಾಡಿದ ತಾಲ್ಲೂಕಿನ ಕಾಕೋಳ ಗ್ರಾಮದ ಪ್ರಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಪ್ರಶಸ್ತಿ ಕೆಸಿಸಿ ಬ್ಯಾಂಕ್ ವತಿಯಿಂದ ಕೊಡಲಾಯಿತು. ಕೆಸಿಸಿ ಬ್ಯಾಂಕ್ ನಿರ್ದೇಶಕ ಮಳ್ಳಪ್ಪ ನಿಂಗಜ್ಜನವರ ಹಾಗೂ ತಿರುಪತಿ ಅಜ್ಜನವರ ಹಾಗೂ ಇತರರು ಪಾಲ್ಗೊಂಡಿದ್ದರು.

## ಹೊಸಕೆರೆಯಲ್ಲಿಂದು ಆರೋಗ್ಯ ತಪಾಸಣೆ

ಆರ್‌ಕೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಪ್ರೀತಿ ಆರ್‌ಕೆ ಟ್ರಸ್ಟ್ (ದಾವಣಗೆರೆ), ಶ್ರೀನಿಧಿ ಚಾರಿಟಬಲ್ ಟ್ರಸ್ಟ್ ಇವರುಗಳ ಸಂಯುಕ್ತಾಶ್ರಯದಲ್ಲಿ ಜಗಳೂರು ತಾಲ್ಲೂಕು ಹೊಸಕೆರೆಯಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ ಇಂದು ನಡೆಯಲಿದೆ.

ಶಿಬಿರವು ಹೊಸಕೆರೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬೆಳಿಗ್ಗೆ 10 ರಿಂದ ಮಧ್ಯಾಹ್ನ 3ರವರೆಗೆ ನಡೆಯಲಿದೆ. ವಿವರಕ್ಕೆ ಸಂಪರ್ಕಿಸಿ : 97317 82463, 84315 41487, 91644 65550.




# ಗುರುಕುಲ ಶಾಲೆಯ 13 ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ

ದಾವಣಗೆರೆ, ಸೆ. 25 - ವಸತಿಯುತ ಶಾಲೆಯ ವಿದ್ಯಾರ್ಥಿಗಳು ಶಿಕ್ಷಣ ಇಲಾಖೆಯ ಜಿಲ್ಲಾ ಮಟ್ಟದ 17/17 ವಯೋಮಿತಿಯೊಳಗಿನ ಕ್ರೀಡಾಕೂಟದಲ್ಲಿ ನಗರದ ಗುರುಕುಲ ವಸತಿ ಶಾಲೆ ವಿದ್ಯಾರ್ಥಿಗಳು ಭಾಗವಹಿಸಿ, ವಿವಿಧ ಕ್ರೀಡೆಗಳಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಸುಭಾಷ್ ಚಂದ್ರಬೋಸ್ ಒಳಾಂಗಣ ಕ್ರೀಡಾಕೂಟದಲ್ಲಿ ನಡೆದ ಈಜು ಸ್ಪರ್ಧೆಯಲ್ಲಿ ಬಿ. ಸೃಜನ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಶಟಲ್ ಬ್ಯಾಡ್ಮಿಂಟನ್ ಸ್ಪರ್ಧೆಯಲ್ಲಿ ಅಭಿಷೇಕ್, ಗಗನ್, ಚೇತನ್, ಚೇತನ್ ಪವಾರ್ ಆಯ್ಕೆಯಾಗಿದ್ದಾರೆ.

ಜಿಲ್ಲಾ ಕುಸ್ತಿ ಒಳಾಂಗಣಂ ಕ್ರೀಡಾಂಗಣದಲ್ಲಿ ನಡೆದ ಜ್ಯೂಡೋ ಸ್ಪರ್ಧೆಯಲ್ಲಿ ಪ್ರಥಮ್, ರಮೇಶ್, ಆರುಷ್ ತನ್ವಿತ್, ಸೈಯದಾ ಅಜ್ರ, ಪೂರ್ವಿತಾ, ಭೂಮಿಕಾ ಪ್ರಥಮ ಸ್ಥಾನ ಪಡೆದಿದ್ದಾರೆ.

# ಸಿದ್ದರಾಮಯ್ಯ ರಾಜೀನಾಮೆ ನೀಡಲಿ



ದಾವಣಗೆರೆ, ಸೆ.25- ಕಳಂಕ ಹೊತ್ತ ಸಿದ್ದರಾಮಯ್ಯ ಅವರು ಸಿಎಂ ಕುರ್ಚಿಯಲ್ಲಿ ಕೂರುವುದು ಶೋಭೆಯಲ್ಲ. ಆದ್ದರಿಂದ ಅವರು ಕೂಡಲೇ ರಾಜೀನಾಮೆ ನೀಡಬೇಕು ಎಂದು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಒತ್ತಾಯಿಸಿದರು.

ಇಂದಿಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ಅಧಿಕಾರದಲ್ಲಿ ಮುಂದುವರೆದರೆ ಪ್ರಕರಣದ ತನಿಖೆಯಲ್ಲಿ ಹಸ್ತಕ್ಷೇಪ ಆಗುವ ಸಾಧ್ಯತೆ ಇದೆ. ಹಾಗಾಗಿ ಕಳಂಕ ರಹಿತರಾಗಿ ಬಂದು ಮತ್ತೆ ಅಧಿಕಾರ ಸ್ವೀಕರಿಸಲಿ. ಅಲ್ಲಿಯವರೆಗೂ ಅವರು ಅಧಿಕಾರದಲ್ಲಿ ಮುಂದುವರೆಯಬಾರದು ಎಂದು ಹೇಳಿದರು.

ಈ ಹಿಂದೆ ಬಿ.ಎಸ್.ಯಡಿಯೂರಪ್ಪ ಅವರ ವಿರುದ್ಧ ದಾಖಲಾಗಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಕೂಡಲೇ ಅವರ ರಾಜೀನಾಮೆಗೆ ಸಿದ್ದರಾಮಯ್ಯ ಒತ್ತಾಯಿಸಿದ್ದರು. ಅದೇ ರೀತಿ ನೀವು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಮುಖ್ಯಮಂತ್ರಿ ಹುದ್ದೆಗೆ ಕಾಂಗ್ರೆಸ್ ಪಕ್ಷದಲ್ಲೇ ಕೆಲವರು ಕಣ್ಣಿಟ್ಟಿದ್ದಾರೆ ಎಂದ ಅವರು, ಈ ಪಕ್ಷದಲ್ಲಿ ಒಳ ಜಗಳ ಪ್ರಾರಂಭವಾಗಿದೆ. ಆದ್ದರಿಂದ ನೂರಕ್ಕೆ ನೂರು ಸರ್ಕಾರ ಪತನವಾಗಿ, ಬಿಜೆಪಿ ಅಧಿಕಾರಕ್ಕೆ ಬರಲಿದೆ. ಆಗ ಅಮಾಯಕ ಹಿಂದೂ ಕಾರ್ಯಕರ್ತರ ವಿರುದ್ಧ ದಾಖಲಾದ ಪ್ರಕರಣ ಇತ್ಯರ್ಥಗೊಳಿಸಲಿದ್ದೇವೆ ಎಂದು ಹೇಳಿದರು.

ಪ್ರಿಯಾಂಕ್ ಖರ್ಗೆ ಸೂಪರ್ ಸಿಎಂ ಆಗಿದ್ದಾರೆ. ಎಲ್ಲದರಲ್ಲೂ ಹಸ್ತಕ್ಷೇಪ ಮಾಡುತ್ತಿದ್ದಾರೆ. ಅವರ ವಿರುದ್ಧ ಕೂಡ ಭ್ರಷ್ಟಾಚಾರ ಆರೋಪ ಇದೆ ಎಂದರು.

ಹಂಸರಾಜ ಭಾರಧ್ವಾಜ್ ಅವರು ಇರುವಾಗ ರಾಜಭವನದ ಪಾವಿತ್ರ್ಯತೆ ಇತ್ತೇ ಎಂದ ಅವರು, ಯಡಿಯೂರಪ್ಪ ವಿರುದ್ಧ ನೀವು ದ್ವೇಷದ ರಾಜಕಾರಣ ಮಾಡಿದ್ದೀರಿ. ಆದರೆ, ಬಿಜೆಪಿ ಯಾವತ್ತೂ ದ್ವೇಷದ ರಾಜಕಾರಣ ಮಾಡುವುದಿಲ್ಲ ಎಂದು ಹೇಳಿದರು.

ಈ ವೇಳೆ ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಎನ್. ರಾಜಶೇಖರ್, ಕೊಳೇನಹಳ್ಳಿ ಬಿ.ಎಂ.ಸತೀಶ್, ಮಾಜಿ ಮೇಯರ್ ಬಿ.ಜೆ.ಅಜಯ್ ಕುಮಾರ್, ಮುಖಂಡರಾದ ಧನಂಜಯ್ ಕಡ್ಲೇಬಾಳು, ರಾಜು (ವೀರಣ್ಣ), ಪ್ರವೀಣ್ ಜಾಧವ್ ಇದ್ದರು.

# ಮಲೇಬೆನ್ನೂರು : ಮಳೆಗೆ ಕುಸಿದು ಬಿದ್ದ ದೇವಸ್ಥಾನ

ಮಲೇಬೆನ್ನೂರು, ಸೆ.25- ಗುಳದಹಳ್ಳಿ ಗ್ರಾಮದಲ್ಲಿ ಬುಧವಾರ ಸುರಿದ ಮಳೆಗೆ ಶ್ರೀ ವೀರಭದ್ರೇಶ್ವರ ದೇವಸ್ಥಾನ ಕುಸಿದು ಬಿದ್ದಿದ್ದು, ಈ ಘಟನೆಯಲ್ಲಿ ಯಾವ ಪ್ರಾಣಹಾನಿ ಆಗಿಲ್ಲ ಎನ್ನಲಾಗಿದೆ.

# ಚಿತ್ರದುರ್ಗದಲ್ಲಿ ಯೋಗ-ಆರೋಗ್ಯ-ಅಧ್ಯಾತ್ಮ ಆರಂಭ

ಚಿತ್ರದುರ್ಗ, ಸೆ.25- ನಗರದ ಶ್ರೀ ಜಗದ್ಗುರು ಮುರುಘ ರಾಜೇಂದ್ರ ಬೃಹನ್ಮಠದ ವತಿ ಯಿಂದ ಅ.5ರಿಂದ 13ರ ವರೆಗೆ 'ಶರಣ ಸಂಸ್ಕೃತಿ ಉತ್ಸವ' ಹಾಗೂ ಜಗದ್ಗುರು ಜಯದೇವ ಮುರುಘ ರಾಜೇಂದ್ರ ಶ್ರೀಗಳ 150ನೇ ಜಯಂತ್ಯುತ್ಸವ ನಡೆಯಲಿದೆ. ಉತ್ಸವದ ಪೂರ್ವ ವಿಶೇಷ ಪ್ರವಚನ ಮಾಲೆ ಏರ್ಪಡಿಸಿದ್ದು, ಸೆ.25ರಿಂದ ಅ.4ರ ವರೆಗೆ ಯೋಗ ಗುರು ವೈದ್ಯಶ್ರೀ ಚನ್ನಬಸ ವಣ್ಣನವರ ಮಾರ್ಗದರ್ಶ ನದಲ್ಲಿ 10 ದಿನಗಳ ಯೋಗ-ಆರೋಗ್ಯ-ಅಧ್ಯಾತ್ಮ ಶಿಬಿರ ಏರ್ಪಡಿಸಲಾ ಗಿದೆ.

ಮುರುಘಾ ಮಠದ ಅನು ಭವ ಮಂಟಪದಲ್ಲಿ ಪ್ರತಿ ದಿನ ಬೆಳಗ್ಗೆ 5.30ರಿಂದ 7ರ ವರೆಗೆ ಮತ್ತು ಸಂಜೆ 6.30ರಿಂದ 7.30ರ ವರೆಗೆ ಯೋಗ-ಆರೋಗ್ಯ- ಅಧ್ಯಾತ್ಮ ಶಿಬಿರ ಜರುಗಲಿದೆ .

# ವಿಜಯನಗರ ಕ್ರೆಡಿಟ್ ಸೊಸೈಟಿಗೆ 39.37 ಲಕ್ಷ ಲಾಭ



ದಾವಣಗೆರೆ, ಸೆ. 25 - ನಗರದ ವಿಜಯನಗರ ಕ್ರೆಡಿಟ್ ಕೋ-ಆಪ್. ಸೊಸೈಟಿ 2023-24ನೇ ಸಾಲಿನಲ್ಲಿ 39,37,252.60 ರೂ. ಲಾಭ ಗಳಿಸಿ ವರ್ಷದಿಂದ ವರ್ಷಕ್ಕೆ ಅಭಿವೃದ್ಧಿ ಪಥದಲ್ಲಿ ಮುನ್ನಡೆಯುತ್ತಿದೆ ಎಂದು ಸೊಸೈಟಿ ಅಧ್ಯಕ್ಷ ಜೆ.ಚೆಲುವಪ್ಪ ಸಂತಸ ವ್ಯಕ್ತಪಡಿಸಿದರು.

ಶ್ರೀ ಕೃಷ್ಣ ಭವಾನಿ ಸಭಾ ಭವನದಲ್ಲಿ ನಡೆದ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಸಕ್ತ ಸಾಲಿನಲ್ಲಿ 3858 ಸದಸ್ಯರು ಇದ್ದು, ಸೊಸೈಟಿಯು ರೂ. 1,23,61,000 ಷೇರು ಬಂಡವಾಳ ಹೊಂದಿದೆ. ರೂ. 26.85 ಕೋಟಿ ಠೇವಣಿ ಇದ್ದು, ರೂ.20.89 ಕೋಟಿ ಸಾಲ ನೀಡಲಾಗಿದೆ. 30.41 ಕೋಟಿ ದುಡಿಯುವ ಬಂಡವಾಳವಿದ್ದು 8.15 ಕೋಟಿಗಳಷ್ಟು ವಿವಿಧ ಕಡೆ ಹೂಡಿಕೆಗಳನ್ನು ಮಾಡಲಾಗಿದೆ.

ಮರಣ ಹೊಂದಿದ ಸಂಘದ ಸದಸ್ಯರ ಅಂತ್ಯಕ್ರಿಯೆಗೆ ನೆರವಾಗುವ ಉದ್ದೇಶದಿಂದ ಮೃತರ ವಾರಸುದಾರರಿಗೆ 4000 ರೂ. ಗಳನ್ನು ವಿತರಿಸಲಾಗುತ್ತಿದೆ. ಶಸ್ತ್ರಚಿಕಿತ್ಸೆಗೆ ಒಳಗಾದ ಸಂಘದ ಸದಸ್ಯರು ಅಗತ್ಯ ದಾಖಲೆ ನೀಡಿದಲ್ಲಿ, ಸಹಾಯ ಧನ ನೀಡಲು ತೀರ್ಮಾನಿಸಲಾಗಿದೆ ಎಂದರು.

ಸಾರ್ವಜನಿಕರಿಗೆ ಅನುಕೂಲವಾಗುವಂತೆ ಇ-ಸ್ಟಾಂಪಿಂಗ್ ವ್ಯವಸ್ಥೆ, ಸಂಘದಿಂದ ಸಾಲ ಪಡೆದ ಸದಸ್ಯರುಗಳಿಗೆ ರೂ. 50,000 ಗಳ ವಿಮೆ ಮಾಡಿಸಲಾಗುತ್ತಿದೆ. ಸಂಘದ ಸಂಪೂರ್ಣ ವ್ಯವಹಾರವನ್ನು ಗಣಕೀಕೃತ ಗೊಳಿಸಲಾಗಿದೆ.

ಈ ಬಾರಿ ಷೇರುದಾರರಿಗೆ ಶೇ.12 ಡಿವಿಡೆಂಡ್ ನೀಡಲು ನಿರ್ಧರಿಸಲಾಗಿದೆ. ಸಂಘದ ಕಛೇರಿಗೆ ನಿವೇಶನ ಅಥವಾ ಸ್ವಂತ ಕಟ್ಟಡದ ಗುರಿ ಹೊಂದಲಾಗಿದೆ ಎಂದು ಹೇಳಿದರು. ಇತ್ತೀಚೆಗೆ ನಿಧನರಾದ ಸಂಘದ ಉಪಾಧ್ಯಕ್ಷರಾಗಿದ್ದ ಎಂ.ಜಿ. ಮೋಹನ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ನಿರ್ದೇಶಕರುಗಳಾದ ಜೆ.ಕೆ.ಶಿವಾನಂದ, ಹೆಚ್.ಬಿ.ಗೋಣಪ್ಪ, ಬಿ. ರಮೇಶ್ (ಪಿ.ಜೆ.), ವಿ.ಮಂಜುನಾಥ, ರಮೇಶ್.ಬಿ., ಎನ್.ನಿಂಗಪ್ಪ, ಶ್ರೀಮತಿ ಹೆಚ್. ಸಿ.ವಾಣಿ, ಶ್ರೀಮತಿ ಸುನಂದ, ಡಿ.ಬಿ.ಚಂದ್ರಪ್ಪ, ವಿಶೇಷ ಆಹ್ವಾನಿತರಾದ ಎಸ್. ರವಿಸ್ವಾಮಿ, ಶ್ರೀಮತಿ ವಂದನಾ, ಕಾರ್ಯದರ್ಶಿ ದಯಾನಂದ ದೊಡ್ಡಮನಿ ಇತರರು ಉಪಸ್ಥಿತರಿದ್ದರು.

# 29ರಿಂದ ಗ್ರಾಮ ಆಡಳಿತಾಧಿಕಾರಿ ಪರೀಕ್ಷೆಗೆ ಉಚಿತ ತರಬೇತಿ ಶಿಬಿರ

ದಾವಣಗೆರೆ, ಸೆ.25- ಗ್ರಾಮ ಆಡಳಿತಾಧಿಕಾರಿ ನೇಮಕಾತಿ ಪರೀಕ್ಷೆ ಬರೆಯುವ ಮಹಿಳಾ ಅಭ್ಯರ್ಥಿಗಳಿಗಾಗಿ ಸತೀಶ್ ಜಾರಕಿಹೊಳಿ ಫೌಂಡೇಶನ್ ಹಾಗೂ ಮಾನವ ಬಂಧುತ್ವ ವೇದಿಕೆ ಸಹಯೋಗದಲ್ಲಿ ಉಚಿತ ತರಬೇತಿ ಶಿಬಿರ ಆಯೋಜಿಸಲಾಗಿದೆ ಎಂದು ಮಾನವ ಬಂಧುತ್ವ ವೇದಿಕೆ ರಾಜ್ಯ ಸಂಚಾಲಕ ಡಾ. ಎ.ಬಿ. ರಾಮಚಂದ್ರಪ್ಪ ತಿಳಿಸಿದರು.

ಶಿಬಿರವು ಹರಿಹರದಲ್ಲಿ ಸೆ. 29ರಿಂದ ಅಕ್ಟೋಬರ್ 10ವರೆಗೆ ನಡೆಯಲಿದೆ ಎಂದು ಅವರು ಮಂಗಳವಾರ ಪತ್ರಿಕಾಗೋಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ನಾಡಿದ್ದು ದಿನಾಂಕ 27ರಂದು ಸಂಜೆ 6 ಗಂಟೆಗೆ ನಗರದ ಜೆ.ಜೆ.ಎಂ. ಮೆಡಿಕಲ್ ಕಾಲೇಜಿನ ಬಾಪೂಜಿ ಸಭಾಂಗಣದಲ್ಲಿ 'ಬಾಬ್‌ಮಾರ್ಲಿ ಪ್ರಮ್ ಕೋಡಿಹಳ್ಳಿ' ನಾಟಕ ಉಚಿತ ಪ್ರದರ್ಶನವನ್ನೂ ಆಯೋಜಿಸಲಾಗಿದೆ.

ನಾಟಕವು ಕೆ.ಎನ್. ಹನುಮಂತಯ್ಯ, ಕೆ. ಚಂದ್ರಶೇಖರ್ ಪಠ್ಯದ ಆಕರವಾಗಿದ್ದು ಲಕ್ಷ್ಮಣ ಕೆ.ಸಿ. ರಚಿಸಿ, ನಿರ್ದೇಶಿಸಿದ್ದಾರೆ ಎಂದು ತಿಳಿಸಿದರು. ಉಭಯ ಸಂಘಟನೆಗಳ ಪ್ರಮುಖರಾದ ಹೆಗ್ಗೆರೆ ರಂಗಪ್ಪ, ಪವಿತ್ರಾ, ಕರೂರು ಹನುಮಂತಪ್ಪ, ಮಾಡಾಳು ಶಿವಕುಮಾರ್ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

## ನಗರದಲ್ಲಿಂದು ವಿದ್ಯುತ್ ವ್ಯತ್ಯಯ

ಎಸ್.ಎಸ್. ಬಡಾವಣೆ, ಎ. ಬ್ಲಾಕ್, ಶಾಂತಿನಗರ, ಕುಂದುವಾಡ ರಸ್ತೆ, ಮಹಾನಗರ ಪಾಲಿಕೆ ಕುಡಿಯುವ ನೀರಿನ ಸ್ಥಾವರ, ಬಸವೇಶ್ವರ ಬಡಾವಣೆ, ಮಹಾಲಕ್ಷ್ಮಿ ಬಡಾವಣೆ, ಬಾಲಾಜಿ ನಗರ, ಕುಂದುವಾಡ ಕೆರೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಇಂದು ಬೆಳಿಗ್ಗೆ 10 ರಿಂದ ಸಂಜೆ 4ರವರೆಗ ವಿದ್ಯುತ್ ವ್ಯತ್ಯಯವಾಗಲಿದೆ.

# ಮುಖ್ಯಮಂತ್ರಿ ಸಿದ್ದರಾಮಯ್ಯ ಸಿದ್ಧಾಂತ ಸೋಲಿಸುವುದು ಬಿಜೆಪಿ ಗುರಿ : ಡಿಬಿ



ದಾವಣಗೆರೆ, ಸೆ. 25- ಸಿದ್ಧರಾಮಯ್ಯ ಎಂದರೆ ಒಬ್ಬ ವ್ಯಕ್ತಿ ಅಲ್ಲ, ಒಂದು ಸಿದ್ಧಾಂತ. ಅದು ಬಿಜೆಪಿ ವಿರೋಧಿ ಸಿದ್ಧಾಂತ. ಹಾಗಾಗಿ ಆ ಸಿದ್ಧಾಂತವನ್ನು ಸೋಲಿಸಬೇಕು ಎಂಬುದು ಬಿಜೆಪಿ ಗುರಿಯಾಗಿದೆ ಎಂದು ಕೆಪಿಸಿಸಿ ವಕ್ತಾರ ಡಿ. ಬಸವರಾಜ್ ಟೀಕಿಸಿದ್ದಾರೆ.

ಯಾವುದೇ ಕಪ್ಪು ಚುಕ್ಕೆ ಇಲ್ಲದೆ ನಾಲ್ಕು ದಶಕಗಳ ಕಾಲ ಸಿದ್ದರಾಮಯ್ಯ ರಾಜಕೀಯ ಜೀವನ ನಡೆಸಿದ್ದಾರೆ. ಇಂತಹ ವ್ಯಕ್ತಿ ಬಿಜೆಪಿಯಲ್ಲಿ ಇದ್ದಿದ್ದರೇ ಇಷ್ಟೊತ್ತಿಗಾಗಲೇ ಸಂಘ ಪರಿವಾರದವರೇ ದೇವರಂತೆ ಪೂಜಿಸುತ್ತಿದ್ದರು. ಬಿಜೆಪಿಯಲ್ಲಿ ಬಹುತೇಕರ ವಿರುದ್ಧ ಭ್ರಷ್ಟಚಾರ ಆರೋಪಗಳಿವೆ. ಅವರಿಗೆ ನೈತಿಕತೆ ಬಗ್ಗೆ ಮಾತನಾಡುವ ಹಕ್ಕು ಇಲ್ಲ.

ಪ್ರಧಾನಿ ಗಣೇಶನ ಪೂಜೆಗೆ ಸಿ.ಜೆ. ಮನೆಗೆ ಹೋಗುತ್ತಾರೆ ಅದು ತಪ್ಪು ಎಂದು ಯಾರು ಹೇಳುತ್ತಿಲ್ಲ. ಸಂವಿಧಾನಿಕ ಸ್ವಾಯತ್ತ ಸಂಸ್ಥೆಗಳನ್ನೇ ಬುಡ ಮೇಲು ಮಾಡುವ ಕೃತ್ಯ ದೇಶದಲ್ಲಿ ನಡೆಯುತ್ತಿದೆ ಕಿಡಿಕಾರಿದ್ದಾರೆ.

ಸಿದ್ಧರಾಮಯ್ಯ ಕ್ರಿಯಾಶೀಲರಾಗಿ ಇರುವವರೆಗೆ ಕರ್ನಾಟಕದಲ್ಲಿ ಬಿಜೆಪಿಯ ಆಟಗಳು ನಡೆಯೋದಿಲ್ಲ. ಮುಂದಿನ ವಿಧಾನಸಭೆ ಚುನಾವಣೆಯಲ್ಲೂ ಬಿಜೆಪಿ ಸ್ವಂತ ಶಕ್ತಿಯಿಂದ ಅಧಿಕಾರಕ್ಕೆ ಬರುವುದು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ಉಚ್ಚ ನ್ಯಾಯಾಲಯ ನೀಡಿರುವ ತೀರ್ಪು ರಾಜ್ಯಪಾಲರು ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಬಹುದು ಎಂಬುದನ್ನು ಹೇಳಿದೆ ಅಷ್ಟೇ, ವಿನಃ ಮುಡಾ ವಿಷಯದಲ್ಲಿ ಸಿದ್ದರಾಮಯ್ಯ ಅವರ ಪಾತ್ರದ ಬಗ್ಗೆ ನೀಡಿದ ತೀರ್ಪಲ್ಲ. ಇದನ್ನು ನಾಡಿನ ಜನರು ಅರ್ಥ ಮಾಡಿಕೊಂಡಿದ್ದಾರೆ.

ಏಳು ಕೋಟಿ ಜನರ ಆಶೀರ್ವಾದವೇ ಸಿದ್ದರಾಮಯ್ಯ ನವರಿಗೆ ಶ್ರೀರಕ್ಷೆ. ಕಾನೂನು ಮತ್ತು ಸಂವಿಧಾನದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ನಂಬಿಕೆ ಇದೆ. ಈ ಹೋರಾಟದಲ್ಲಿ ಅಂತಿಮವಾಗಿ ಸತ್ಯಕ್ಕೆ ಜಯ ಸಿಗಲಿದೆ.

ಇದು ನರೇಂದ್ರ ಮೋದಿ ಅವರ ನೇತೃತ್ವದ ಬಿಜೆಪಿ ಸರ್ಕಾರದ ಸೇಡಿನ ರಾಜಕೀಯದ ವಿರುದ್ಧದ ಹೋರಾಟ. ಬಿಜೆಪಿ, ಜೆಡಿಎಸ್ ನ ಈ ಸೇಡಿನ ರಾಜಕೀಯದ ವಿರುದ್ಧ ನ್ಯಾಯಾಂಗದ ಹೋರಾಟ ಮುಂದುವರಿಯಲಿದೆ.

ಸಿದ್ದರಾಮಯ್ಯನವರ ಪ್ರಕರಣದಲ್ಲಿಯೂ ಬಿಜೆಪಿ ಮತ್ತು ಜೆಡಿಎಸ್ ಇದೇ ರೀತಿ ಮುಖಭಂಗ ಅನುಭವಿಸುವುದು ಖಂಡಿತ. ಸುಪ್ರೀಂ ಕೋರ್ಟ್‌ನಲ್ಲಿ ನ್ಯಾಯ ಸಿಗಲಿದೆ. ನ್ಯಾಯ, ಸತ್ಯದ ಮೇಲೆ ನಮಗೆ ನಂಬಿಕೆ ಇದೆ ಎಂದು ಹೇಳಿದ್ದಾರೆ.

## ಅತೀ ಹೆಚ್ಚು ಹಾಲು ಸರಬರಾಜು ಮಾಡಿದ ಕಮಲಾಕ್ಷಿ ಶ್ರೀಕರ್‌ಗೆ ಪ್ರಶಸ್ತಿ



ದಾವಣಗೆರೆ, ಸೆ. 25- ಜಿಲ್ಲೆಯಲ್ಲಿ ಅತೀ ಹೆಚ್ಚು ಹಾಲು ಸರಬರಾಜು ಮಾಡಿದ ಮಹಿಳಾ ಸದಸ್ಯೆ ಎಂಬ ಹೆಗ್ಗಳಿಕೆಗೆ ಪಾತ್ರರಾಗಿರುವ ನಗರದ ಶ್ರೀಮತಿ ಕಮಲಾಕ್ಷಿ ಶ್ರೀಕರ್ ಅವರಿಗೆ ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ಪ್ರಶಸ್ತಿ ನೀಡಿದೆ. ಈಚೆಗೆ ನಡೆದ ಒಕ್ಕೂಟದ ಕಾರ್ಯಕ್ರಮದಲ್ಲಿ ಕಮಲಾಕ್ಷಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.


ಈ ಸಂದರ್ಭದಲ್ಲಿ ವಿದ್ಯಾಧರ್, ಚೇತನ್ ಎಸ್. ನಾಡಿಗೇರ್, ಹೆಚ್. ಕೆ. ಬಸಪ್ಪ, ಬಿ.ಜಿ.ಬಸವರಾಜಪ್ಪ, ಎಸ್.ಜಿ. ಶೇಖರ್, ಡಾ. ಕೆ.ಆರ್. ಮುರುಳೀಧರ್, ಮಂಜುನಾಥ್ ಹೆಚ್.ಎಂ., ಶ್ರೀಮತಿ ಚೇತನ ರುದ್ರೇಶ್ ಉಪಸ್ಥಿತರಿದ್ದರು.

## ಹೈಕೋರ್ಟ್ ವಿವಿಧೋದ್ದೇಶ ಸಹಕಾರ ಸಂಘದ ನಿರ್ದೇಶಕರಾಗಿ ಮನೋಹರ್



ದಾವಣಗೆರೆ, ಸೆ. 25- ಹೈಕೋರ್ಟ್ ವಿವಿಧೋದ್ದೇಶ ಸಹಕಾರ ಸಂಘದ ಸೊಸೈಟಿ ಚುನಾವಣೆಯು ಕಳೆದ ವಾರ ನಡೆದಿದ್ದು, ದಾವಣಗೆರೆ ಜಿಲ್ಲಾ ನ್ಯಾಯಾಲಯದ ಬೇಲೀಫ್ ಆಗಿರುವ ಮನೋಹರ್ ಅವರು 2126 ಮತಗಳನ್ನು ಪಡೆದು ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ. ಇದೇ ಮೊದಲ ಬಾರಿಗೆ ದಾವಣಗೆರೆ ಜಿಲ್ಲೆಯಿಂದ ಹೈಕೋರ್ಟ್ ಸೊಸೈಟಿ ನಿರ್ದೇಶಕರ ಸ್ಥಾನಕ್ಕೆ ಮನೋಹರ ಆಯ್ಕೆಯಾಗಿದ್ದು, ಅವರನ್ನು ಜಿಲ್ಲೆಯ ಎಲ್ಲಾ ನ್ಯಾಯಾಧೀಶರು ಮತ್ತು ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

## ನಗರದ ಶ್ರೀ ಪಾತಾಳೇಶ್ವರ ವಿನಾಯಕ ಸಂಘದಿಂದ ಇಂದು ಅನ್ನ ಸಂತರ್ಪಣೆ



ಕೃಷ್ಣ ಭವಾನಿ ಗುಡಿಗಲ್ಲಿಯ ಶ್ರೀ ಪಾತಾಳೇಶ್ವರ ವಿನಾಯಕ ಸಂಘದ 14ನೇ ವರ್ಷದ ಗಣೇಶೋತ್ಸವದ ಅಂಗವಾಗಿ ಇಂದು ಬೆಳಿಗ್ಗೆ 6 ಗಂಟೆಗೆ ಗಣ ಹೋಮ 12 ಗಂಟೆಗೆ ಅನ್ನ ಪ್ರಸಾದ ನಡೆಯಲಿದೆ.

ಇದೇ ದಿನಾಂಕ 28ರ ಶನಿವಾರ ಮಧ್ಯಾಹ್ನ 3 ಗಂಟೆಗೆ ಭವ್ಯ ಮೆರವಣಿಗೆಯೊಂದಿಗೆ ಗಣೇಶ ವಿಸರ್ಜನೆ ನಡೆಯಲಿದೆ.

## ನಗರದಲ್ಲಿ ಇಂದಿನಿಂದ ಶ್ರೀ ಜಯದೇವ ಲೀಲೆ ಪ್ರವಚನ



ಶ್ರೀ ಜಗದ್ಗುರು ಜಯದೇವ ಮುರುಘರಾಜೇಂದ್ರ ಮಹಾಸ್ವಾಮಿಗ ಳವರ 68ನೇ ವರ್ಷದ ಸ್ಮರಣೋತ್ಸವ ಅಂಗವಾಗಿ ಶ್ರೀ ಜಯದೇವ ಲೀಲೆ ಪ್ರವಚನವು ಇಂದಿನಿಂದ ಇದೇ ದಿನಾಂಕ 29 ರವರೆಗೆ ಪ್ರತಿದಿನ ಸಂಜೆ 6.30 ಕ್ಕೆ ಶಿವಯೋಗಾಶ್ರಮದಲ್ಲಿ ನಡೆಯಲಿದೆ.

ಶ್ರೀ ಬಸವಪ್ರಭು ಸ್ವಾಮೀಜಿ ನೇತೃತ್ವದಲ್ಲಿ ಶ್ರೀ ಮಹಾಂತೇಶ ಶಾಸ್ತ್ರೀ (ಸಂತೆಬೆನ್ನೂರು) ಅವರಿಂದ ಪ್ರವಚನ ನಡೆಯಲಿದೆ. ಸ್ಮರಣೋತ್ಸವ ಸಮಾರಂಭವು ಇದೇ ದಿನಾಂಕ 30ರ ಸೋಮವಾರ ಬೆಳಿಗ್ಗೆ 10 ಕ್ಕೆ ಜರುಗಲಿದೆ. ರಥೋತ್ಸವವು ಸೋಮವಾರ ಸಂಜೆ 4 ಕ್ಕೆ ಏರ್ಪಾಡಾಗಿದೆ.

## ರಾಣೇಬೆನ್ನೂರಿಗೆ ಇಂದು ಜ್ಯೋತಿ ರಥಯಾತ್ರೆ

ಮಂಡ್ಯದಲ್ಲಿ ನಡೆಯಲಿರುವ 87ನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನದ ಕನ್ನಡ ಜ್ಯೋತಿ ರಥಯಾತ್ರೆ ನಗರಕ್ಕೆ ಇಂದು ಸಂಜೆ 4.30ಕ್ಕೆ ಆಗಮಿಸಲಿದೆ. ತಹಶೀಲ್ದಾರ್ ಕಛೇರಿ ಆವರಣಕ್ಕೆ ಆಗಮಿಸುವ ರಥ ಯಾತ್ರೆ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ ಎಂದು ಕಸಾಪ ಅಧ್ಯಕ್ಷ ಪ್ರಭಾಕರ ಶಿಗ್ಲಿ ತಿಳಿಸಿದ್ದಾರೆ.

## ಶ್ರೀಮತಿ ಅನ್ನಪೂರ್ಣಮ್ಮ ನಿಧನ



ದಾವಣಗೆರೆ ಜಿಲ್ಲೆ ನ್ಯಾಮತಿ ತಾಲ್ಲೂಕು
ದಾನಿಹಳ್ಳಿ ವಾಸಿ ದಿ. ಹಾಲಪ್ಪನವರ ಧರ್ಮಪತ್ನಿ

**ಶ್ರೀಮತಿ ಅನ್ನಪೂರ್ಣಮ್ಮ**

ಇವರು ದಿನಾಂಕ : 25.09.2024ರ ಬುಧವಾರ ರಾತ್ರಿ 9.20 ಗಂಟೆಗೆ ನಿಧನರಾದರು. ಮೃತರಿಗೆ 95 ವರ್ಷ ವಯಸ್ಸಾಗಿತ್ತು. ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 26.09.2024ರ ಗುರುವಾರ ಮಧ್ಯಾಹ್ನ 2 ಗಂಟೆಗೆ ಮೃತರ ಸ್ವ-ಗ್ರಾಮವಾದ ನ್ಯಾಮತಿಯ ಸ್ವಂತ ಜಮೀನಿನಲ್ಲಿ ನೆರವೇರಿಸಲಾಗುವುದು.

ಇಂತಿ ದುಃಖತಪ್ತರು :
ಡಿ. ಕೆಂಚವೀರಪ್ಪ ಮತ್ತು ಸಹೋದರರು ನ್ಯಾಮತಿ,
ದಿ. ಶ್ರೀಮತಿ ರತ್ನಮ್ಮ, ಶ್ರೀ ಮುದೇಗೌಡ್ರು ನಾಗರಾಜಪ್ಪನವರು,
ಶ್ರೀಮತಿ ಮಂಜುಳ, ಡಿ. ಲೋಕೇಶ್ವರಪ್ಪ ದಾವಣಗೆರೆ.
(ಬಾಪೂಜಿ ಕೋ ಆಪರೇಟಿವ್ ಬ್ಯಾಂಕ್)
ಮೊಮ್ಮಕ್ಕಳು ಹಾಗೂ ಬಂಧು-ಮತ್ರರು.

ಮೊ : 81058 44969, 99725 52330

## ಕಾರ್ಮಿಕ ಮುಖಂಡ ಕೆ. ರಾಘುವೇಂದ್ರ ನಾಯರಿಗೆ ರಾಜ್ಯ ಪ್ರಶಸ್ತಿ



ದಾವಣಗೆರೆ, ಸೆ.25 - ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಸಾಮಾಜಿಕ, ಧಾರ್ಮಿಕ, ಸಾಂಸ್ಕೃತಿಕ ಸಂಘವು ಕೊಡ ಮಾಡುವ 'ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ರತ್ನ' ರಾಜ್ಯ ಪ್ರಶಸ್ತಿಗೆ ನಾಯರಿ ಸಮಾಜಕ್ಕೆ ಸೇರಿದ ಹಾಗೂ ಕಾರ್ಮಿಕ ಮುಖಂಡ ಕೆ.ರಾಘುವೇಂದ್ರ ನಾಯರಿ ಅವರು ಭಾಜನರಾಗಿದ್ದಾರೆ. ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ಜಯಂತ್ಯೋತ್ಸವದ ಅಂಗವಾಗಿ ಬೆಂಗಳೂರಿನ ಗಾಂಧಿ ಭವನದಲ್ಲಿ ಕಳೆದ ವಾರ ಆಯೋಜಿಸಲಾಗಿದ್ದ ಸಮಾರಂಭದಲ್ಲಿ ಕಾರ್ಮಿಕ ಸಂಘಟನೆ, ಯಕ್ಷಗಾನ ಕಲೆ, ಸಾಹಿತ್ಯ, ಜನಪರ ಹೋರಾಟಗಳು, ಕನ್ನಡಪರ ಸಂಘಟನೆ, ಸಾಮಾಜಿಕ ಸೇವೆ ಸೇರಿದಂತೆ ಹತ್ತು ಹಲವು ಕ್ಷೇತ್ರಗಳಲ್ಲಿ ಸಕ್ರಿಯವಾಗಿರುವ ರಾಘುವೇಂದ್ರ ನಾಯರಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.







KA/SK/DVG-028/2024-2026. O/P @ B.V. Nagar P.O. **JANATHAVANI** - Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas